ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 23 | PAGE- ಪುಟ 8 | ಮಂಗಳವಾರ 25.02.2025 | RS.ಬೆಲೆ 2/-

# ಜನರಿಗೆ ಬೆಲೆ ಏರಿಕೆ ಬರೆ

## ಅಡುಗೆ ಎಣ್ಣೆ ಬೆಲೆಯಲ್ಲಿ ಭಾರಿ ಹೆಚ್ಚಳ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಫೆ.24: ಕಳೆದ ಕೆಲ ದಿನಗಳಿಂದ ರೂಪಾಯಿ ಲೆಕ್ಕದಲ್ಲಿ ಏರುತ್ತದ್ದ ಖಾದ್ಯ ತೈಲ ಈ ಬಾರಿ ಬರೋಬ್ಬರಿ ಒಂದೇ ಭಾರಿ 10 ರೂ. ಗೆ ಏರಿಕೆಯಾಗಿದ್ದು ಗ್ರಾಹಕರಿಗೆ ಮತ್ತೊಂದು ಶಾಕ್ ನೀಡಿದೆ.

ಬಸ್,ಮೆಟ್ರೋ ಪ್ರಯಾಣದರ ಹೆಚ್ಚಳದ ಬೆನ್ನಲ್ಲೇ ಇದೀಗ ಅಡುಗೆ ಎಣ್ಣೆ 10 ರೂ. ಕೊಬ್ಬರಿ ಎಣ್ಣೆ ಏಕಾ ಏಕಿ 50 ರೂ. ಹೆಚ್ಚಳವಾಗಿದ್ದು ಗೃಣಿಯರ ಕೈ ಕಟ್ಟಿದಂತಾಗಿದೆ. ಕಳೆದ

ಒಂದು ತಿಂಗಳ ಬೆಲೆಗೂ ಪ್ರಸ್ತುತ ಬೆಲೆಗೂ 10 ರೂ. ಏರಿಕೆಯಾಗಿದೆ.

ಸನ್‌ಫ್ಲವರ್,ಫಾಮ್‌ಆಯಿಲ್, ಕಡಲೆ ಎಣ್ಣೆ, ಅರಳೆಣ್ಣೆ, ಸಾಸಿವೆ ಎಣ್ಣೆ, ಬೆಲೆಯಲ್ಲಿ 10 ರೂ. ಏರಿಕೆಯಾಗಿದೆ. ಸೂರ್ಯಕಾಂತಿ ಎಣ್ಣೆ ಪೂರೈಕೆಯಲ್ಲಿ ವ್ಯತ್ಯಯವಾದ ಹಿನ್ನಲೆಯಲ್ಲಿ ಅನಿವಾರ್ಯವಾಗಿ ಸನ್‌ಫ್ಲವರ್ ಎಣ್ಣೆ ಬೆಲೆ ಹೆಚ್ಚಳವಾಗಿದೆ. ದಿನದಿಂದ ದಿನಕ್ಕೆ ಬಿಸಿಲ ಬೇಗೆ ಹೆಚ್ಚಾಗುತ್ತಿದ್ದು ಎಳನೀರಿಗೆ ಬೇಡಿಕೆ ಜಾಸ್ತಿಯಾದ ಹಿನ್ನಲೆಯಲ್ಲಿ ಕೊಬ್ಬರಿ ಅಭಾವ ಸೃಷ್ಟಿಯಾಗಿದ್ದು ಬೆಲೆ ಹೆಚ್ಚಳಕ್ಕೆ ಕಾರಣವಾಗಿದೆ ಎಂದು ಹೇಳಲಾಗುತ್ತಿದೆ.

ಒಂದೇ ಬಾರಿ 50 ರೂ ಬೆಲೆ ಹೆಚ್ಚಾಗಿದ್ದು ಸದ್ಯ ಮಾರುಕಟ್ಟೆಯಲ್ಲಿ ಒಂದು ಕೆಜಿ ಕೊಬ್ಬರಿ ಎಣ್ಣೆ 320 ರೂ. ಇದೆ. ಒಟ್ಟಿನಲ್ಲಿ ದಿನದಿಂದ ದಿನಕ್ಕೆ ಅಗತ್ಯ ವಸ್ತುಗಳ ಬೆಲೆ ಏರುತ್ತಲೆ ಇದ್ದು ಜನ ಸಾಮಾನ್ಯರ ಜೀವನ ನಿರ್ವಹಣೆ ಕಷ್ಟವಾಗಿದೆ.

ಅಡುಗೆ ಎಣ್ಣೆ 10 ರಿಂ 20 ರೂ ಹೆಚ್ಚಳ ( ಕೆ.ಜಿ):
ಸನ್ ಫ್ಲವರ್ : ಹಳೇ ದರ – 133, ಹೊಸ ದರ– 143,
ಗೋಲ್ಡ್ ವಿನ್ನರ್: ಹಳೇ ದರ – 135, ಹೊಸ ದರ 145
ರುಚಿ ಗೋಲ್ಡ್ ಹಳೇ ದರ – 98, ಹೊಸ ದರ – 133
ಜೆಮಿನಿ: ಹಳೇ ದರ – 140, ಹೊಸ ದರ – 155
ಇಮಾಮಿ: ಹಳೇ ದರ 135, ಹೊಸ – 145
ಫ್ರೀಡಂ: ಹಳೇ ದರ – 130, ಹೊಸ ದರ – 144
ದಾರಾ : ಹಳೇ ದರ 140, ಹೊಸ – 150
ತೆಂಗಿನ ಎಣ್ಣೆಗೆ 50 ರೂ ಹೆಚ್ಚಳ (1ಕೆಜಿ ಲೆಕ್ಕ):
ಪ್ಯಾರಾಚುಟ್: ಹಳೇ ದರ – 380, ಹೊಸ ದರ –425
ಕೆಪಿಎಲ್: ಹಳೇ ದರ – 310, ಹೊಸ ದರ – 326
ವಿವಿಪಿ: ಹಳೇ ದರ – 220, ಹೊಸ ದರ 250

ಪಿಎಂ ಕಿಸಾನ್ ಸಮ್ಮಾನ್ ಕಂತು ಬಿಡುಗಡೆ

# 9.8 ಕೋಟಿ ರೈತರ ಖಾತೆಗಳಿಗೆ 22,000 ಕೋಟಿ ರೂ. ವರ್ಗಾವಣೆ



ಮಲ್ಲಮ್ಮ ನುಡಿ ವಾರ್ತೆ

ಭಾಗಲ್ಪುರ:ಫೆ.24: ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ 19ನೇ ಕಂತನ್ನು ಸೋಮವಾರ ಬಿಡುಗಡೆ ಮಾಡಿದ್ದು, ದೇಶಾದ್ಯಂತ 9.8 ಕೋಟಿ ರೈತರ ಬ್ಯಾಂಕ್ ಖಾತೆಗಳಿಗೆ 22,000 ಕೋಟಿ ರೂ.ಗಳಿಗೂ ಹೆಚ್ಚು ಹಣವನ್ನು ವರ್ಗಾಯಿಸಿದರು.

ಇಂದು ಬಿಹಾರದಲ್ಲಿ ಹಲವಾರು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿದ ಪ್ರಧಾನಿ ಮೋದಿ, ಪಿಎಂ ಕಿಸಾನ್ ಸಮ್ಮಾನ್ ಕಂತು ಸಹ ಬಿಡುಗಡೆ ಮಾಡಿದರು. ಈ ವೇಳೆ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಸಹ ಉಪಸ್ಥಿತರಿದ್ದರು.

ಹಲವಾರು ಕೇಂದ್ರ ಸಚಿವರು, ಸಂಸದರು ಮತ್ತು ಶಾಸಕರು ಹಾಗೂ ಕೇಂದ್ರ, ರಾಜ್ಯದ ಅಧಿಕಾರಿಗಳು ಸಹ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಇದಕ್ಕೂ ಮುನ್ನ, ಭಾರತದ 'ಅನ್ನದಾತರು'(ರೈತರು) ಬಗ್ಗೆ ಸರ್ಕಾರ ಹೆಮ್ಮೆಪಡುತ್ತದೆ ಮತ್ತು ಅವರ ಜೀವನವನ್ನು ಸುಧಾರಿಸಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ಮೋದಿ ಹೇಳಿದ್ದರು.

ಪಿಎಂ ಕಿಸಾನ್ ಯೋಜನೆಯಡಿ ಅರ್ಹ ರೈತರು ಪ್ರತಿ 4 ತಿಂಗಳಿಗೊಮ್ಮೆ 2,000 ರೂ. ಗಳನ್ನು ಪಡೆಯುತ್ತಾರೆ. ಅಂ–ದರೆ ವರ್ಷಕ್ಕೆ 6,000 ರೂ. ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾಯಿಸಲಾಗುವ ಹಣವನ್ನು ಪ್ರತಿ ವರ್ಷ 3 ಕಂತುಗಳಲ್ಲಿ ನೀಡಲಾಗುತ್ತದೆ.

# ಬಸವ ತತ್ವಕ್ಕೆ ಸರ್ಕಾರ ಪೂರ್ಣ ಬದ್ಧ:ಸಿಎಂ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಫೆ.24: ಬಸವ ತತ್ವ,ವಚನ ಸಂಸ್ಕೃತಿ,ಶರಣರ ಹೋರಾಟದ ಬಗ್ಗೆ ನಮ್ಮ ಸರ್ಕಾರಕ್ಕೆ ಪೂರ್ಣ ಬದ್ಧತೆ ಇದ್ದು,ಪೂಜ್ಯರ ಬೇಡಿಕೆಗಳನ್ನು ಪರಿಶೀಲಿಸಿ,ಹಂತ ಹಂತವಾಗಿ ಈಡೇರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭರವಸೆ ನೀಡಿದರು.

ಕಾವೇರಿ ನಿವಾಸದಲ್ಲಿ ಭೇಟಿಯಾದ ಲಿಂಗಾಯತ ಸ್ವಾಮೀಜಿಗಳು, ಸಚಿವರು, ಶಾಸಕರು, ಸಮಾಜದ ಮುಖಂಡರ ಸಭೆಯಲ್ಲಿ ಸಿಎಂ ಮಾತನಾಡಿದರು. ಮೊದಲ ಬಾರಿ ಮುಖ್ಯಮಂತ್ರಿಯಾದಾಗ ಬಸವ ಜಯಂತಿಯಂದೇ ಪ್ರಮಾಣವಚನ ಸ್ವೀಕರಿಸಿದೆ. ಬಸವಣ್ಣನವರ ಭಾವಚಿತ್ರ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯಗೊಳಿಸಿದ್ದು, ನಮ್ಮದೇ ಕಾಂಗ್ರೆಸ್ ಸರ್ಕಾರ. ಬಸವಣ್ಣನವರ ವಿಚಾರ ಮತ್ತು ಹೋರಾಟ ಜಾತ್ಯಾತೀತ ಸಮಾಜ ನಿರ್ಮಾಣಕ್ಕೆ ಪೂರಕ. ಜಾತಿವಾದಿ ಪಟ್ಟಭದ್ರರಿಗೆ ಬಸವಣ್ಣನವರ ವಿಚಾರಗಳು ಹಿಡಿಸಲ್ಲ. ಪಟ್ಟಭದ್ರರು ಬಹಿರಂಗವಾಗಿ ಬಸವಣ್ಣನವರನ್ನು ವಿರೋಧಿಸಲು ಸಾಧ್ಯವಿಲ್ಲ. ಅದಕ್ಕೆ ಆಂತರಿಕವಾಗಿ ವಿರೋಧಿಸುತ್ತಿದ್ದಾರೆ ಎಂದರು.

ಜಾತಿ ವ್ಯವಸ್ಥೆ ಬಹಳ ಗಟ್ಟಿಯಾಗಿ ಬೇರೂರಿದೆ. ಇದಕ್ಕೆ ಪಟ್ಟಭದ್ರರು ನೀರು ಗೊಬ್ಬರ ಹಾಕುತ್ತಿದ್ದಾರೆ. ಜಾತ್ಯಾತೀತ, ಸಮ ಸಮಾಜ ನಿರ್ಮಾಣ ಮಾಡಲು ಬಸವಣ್ಣನವರ ಹೋರಾಟ ಪೂರಕ. ನಮ್ಮ ಜಾತಿ ವ್ಯವಸ್ಥೆಗೆ ಚಲನೆಯಿಲ್ಲ. ಜಾತಿ ಜಡತ್ವ, ಆರ್ಥಿಕ ಜಡತ್ವ ಇರುವ ಸಮಾಜದಲ್ಲಿ ಚಲನೆ ಸಾಧ್ಯವಿಲ್ಲ. ಬಸವಣ್ಣನವರ ವಿಚಾರಗಳೇ ಅಂಬೇಡ್ಕರ್ ವಿಚಾರಗಳಾಗಿದ್ದು, ಇವೆಲ್ಲವೂ ಸಂವಿಧಾನದಲ್ಲಿ ಅಡಕವಾಗಿವೆ ಎಂದು ಹೇಳಿದರು. ಗೋರುಚ ಅಧ್ಯಕ್ಷತೆಯಲ್ಲಿ ನಾವು ಅನುಭವ ಮಂಟಪ ಪುನರುಜ್ಜೀವನಕ್ಕೆ ಮುಂದಾಗಿದ್ದೆವು. ಅನುಭವ ಮಂಟಪ ಮೊದಲ ಪ್ರಜಾಪ್ರಭುತ್ವದ ವೇದಿಕೆ. ಯಾರ ಒತ್ತಾಯವೂ ಇಲ್ಲದ ವೇಳೆಯಲ್ಲೇ ನಮ್ಮ ಸರ್ಕಾರ ಅನುಭವ ಮಂಟಪ ಪುನರುಜ್ಜೀವನಕ್ಕೆ ಮುಂದಾಗಿತ್ತು. ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ್ದು ಕಾಂಗ್ರೆಸ್ ಸರ್ಕಾರ ಎಂದರು

# ಬಸವಣ್ಣನವರ ಸಂದೇಶ ಪ್ರಸಾರಕ್ಕೆ ವಿಶೇಷ ಕಾರ್ಯಯೋಜನೆ ರೂಪಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ ಫೆ.24 ಇಂದು ಬೆಂಗಳೂರಿನಲ್ಲಿ ವಿರಶೈವ ಲಿಂಗಾಯತ ಸಮುದಾಯದ ಶ್ರೀಗಳ ಸಮ್ಮುಖದಲ್ಲಿ ಜರುಗಿದ ಸಭೆಯಲ್ಲಿ ಮಾಜಿ ಸಚಿವರಾದ ರಾಜಶೇಖರ ಬಿ ಪಾಟೀಲ್ ರವರು ಪಾಲ್ಗೊಂಡು ಕರ್ನಾಟಕ ಸರ್ಕಾರದ ಜನಪ್ರೀಯ ಮುಖ್ಯಮಂತ್ರಿ ಸಿದ್ದರಾಮಯ್ಯ ರವರನ್ನ ಸಮುದಾಯದ ವಿವಿಧ ಬೇಡಿಕೆಗಳು ಹಾಗೂ ವಿಶ್ವಗುರು ಬಸವಣ್ಣರವರನ್ನು ಸಾಂಸ್ಕೃತಿಕ ನಾಯಕರಾಗಿ ಘೋಷಿಸಿರುವ ಪ್ರಯುಕ್ತ ಅವರ ಸಂದೇಶವನ್ನು ಜನಮಾನಸಕ್ಕೆ ತಲುಪಿಸುವ ವಿಶೇಷ ಕಾರ್ಯಯೊಜನೆಗೆ ಪ್ರಸ್ತಕ ಬಜೆಟನಲ್ಲಿ ಸ್ಥಾನ ನೀಡಿ ಅಗತ್ಯ ಅನುದಾನ ಬಿಡುಗಡೆ ಮಾಡುವಂತೆ ಮನವಿ ಸಲ್ಲಿಸಿದರು

# ಮಹಿಳೆಯರ ಮೇಲೆ ಸರ್ಕಾರಕ್ಕೆ ಹೆಚ್ಚು ಭರವಸೆ

## ರಾಜ್ಯದಾದ್ಯಂತ 2,500 ಕಡೆ ಕಾಫಿ ಕಿಯೋಸ್ಕ್ ಸ್ಥಾಪನೆ:ಡಾ.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.24: ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಮಹಿಳಾ ಕೇಂದ್ರಿತ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಮಹಿಳೆಗೆ ಹಣ ನೀಡಿದರೆ ಅದನ್ನು ಕುಟುಂಬಕ್ಕೆ ಸರಿಯಾದ ರೀತಿಯಲ್ಲಿ ವಿನಿಯೋಗಿಸುತ್ತಾಳೆ ಎಂಬುವ ನಂಬಿಕೆ ನಮ್ಮದು. ಹೀಗಾಗಿ ಮಹಿಳೆಯರ ಮೇಲೆ ಸರ್ಕಾರಕ್ಕೆ ಹೆಚ್ಚಿನ ಭರವಸೆ ಇದೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

ಮಂಗಳವಾರ ಇಲ್ಲಿನ ಶ್ರೀ ಶರಣಬಸವೇಶ್ವರ ಜಾತ್ರೆ ಮೈದಾನದಲ್ಲಿ ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ, ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ನಮ್ಮ ಸರಸ್ ಮೇಳ (ರಾಷ್ಟ್ರಮಟ್ಟದ ಮಹಿಳಾ ಸ್ವ-ಸಹಾಯ ಗುಂಪುಗಳು ತಯ್ಯಾರಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಮೇಳ) ವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ.–ಬಿ.ಟಿ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದೆ ಎಸ್.ಎಂ.ಕೃಷ್ಣ ಸರ್ಕಾರದ ಅವಧಿಯಲ್ಲಿ ಮಹಿಳಾ ಸ್ವ–ಸಹಾಯ ಗುಂಪು ರಚಿಸುವ ಮಹತ್ವದ ನಿರ್ಧಾರ ಕೈಗೊಂಡಿದ್ದ ಪರಿಣಾಮ ಇಂದು ರಾಜ್ಯದಾದ್ಯಂತ 2.80 ಲಕ್ಷ ಮಹಿಳಾ ಸ್ವ–ಸಹಾಯ ಗುಂಪುಗಳಿವೆ. ಈ ಮಹಿಳಾ ಗುಂಪುಗಳು ಇಂದು ಎಲ್ಲೆಡೆ ಸ್ವಯಂ ಉದ್ಯೋಗದ ಮೂಲಕ ಮಾದರಿಯಾಗಿದ್ದಾರೆ. ಇಂತಹ ಸ್ವ–ಸಹಾಯ ಸಂಘಗಳಿಗೆ ಇನ್ನಷ್ಟು ಬೂಸ್ಟ್ ನೀಡಲು ರಾಜ್ಯದಾದ್ಯಂತ ತಲಾ 15 ಲಕ್ಷ ರೂ. ವೆಚ್ಚದಲ್ಲಿ 50 ಕಡೆ "ಅಕ್ಕ ಕೆಫೆ" ಮತ್ತು ತಲಾ 1 ಲಕ್ಷ ರೂ. ವೆಚ್ಚದಲ್ಲಿ 2,500 ಕಡೆ "ಕಾಫಿ ಕಿಯೋಸ್" ಸ್ಥಾಪಿಸಲು ಮೂಲಸೌಕರ್ಯ ಕಲ್ಪಿಸಲಾಗುತ್ತಿದೆ ಎಂದರು.

ಇತ್ತೀಚೆಗೆ ಮೈಕ್ರೋ ಪೈನಾನ್ಸ್‌ಗಳು ಈ ಮಹಿಳಾ ಸ್ವ–ಸಹಾಯ

(2ನೇ ಪುಟ ನೋಡಿ)

# ರಾಜ್ಯದ ಬಸ್ಸುಗಳಿಗೆ ಮಸಿ

## ಮಹಾರಾಷ್ಟ್ರ ಸರ್ಕಾರದ ಜೊತೆ ಮಾತುಕತೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.24– ಮಹಾರಾಷ್ಟ್ರದ ಸೋಲಾಪುರದಲ್ಲಿ ಬಾಗಲಕೋಟೆ ಬಸ್ಸುಗಳಿಗೆ ಮಸಿ ಬಳಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾರಿಗೆ ಇಲಾಖೆ ಪ್ರಧಾನ ಕಾರ್ಯದರ್ಶಿಗಳು ಮಹಾರಾಷ್ಟ್ರ ಸರ್ಕಾರದೊಂದಿಗೆ ಮಾತುಕತೆ ನಡೆಸುತ್ತಿದ್ದಾರೆ. ಸರಿ ಹೋಗದಿದ್ದರೆ ಆ ಸರ್ಕಾರದ ಜೊತೆ ನಾನೇ ಮಾತುಕತೆ ನಡೆಸುತ್ತೇನೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ಸೋಮವಾರ ನಗರದಲ್ಲಿ ತಮ್ಮನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ನಮ್ಮ ಬಸ್ಸಿಗೆ ಅವರು ಮಸಿ ಬಳಿಯೋದು, ಅವರ ಬಸ್ಸಿಗೆ ನಾವು ಮಸಿ ಬಳಿಯೋದರಲ್ಲಿ ಅರ್ಥವಿಲ್ಲ. ಇದರಿಂದ ನಷ್ಟವಾಗೋದು ಎರಡು ಸಂಸ್ಥೆಗಳಿಗೆ. ಇಂಥ ಘಟನೆಗಳಿಗೆ ಆಸ್ಪದ ನೀಡಬಾರದು ಎಂದರು.

ಮಹಾರಾಷ್ಟ್ರ ಸರ್ಕಾರ ಶಿವಸೇನೆ ಕಾರ್ಯಕರ್ತರು ಸೇರಿದಂತೆ ತಪ್ಪು ಮಾಡುತ್ತಿರುವವರನ್ನು ಬೆಂಬಲಿಸಬಾರದು. ಅಲ್ಲಿ ಅವರು ಹಾಗೆ ಮಾಡಿದರೆ ಇಲ್ಲಿ ನಮ್ಮ ಜನ ಸುಮ್ಮನಿರುತ್ತಾರಾ ಎಂದ ರಾಮಲಿಂಗಾರೆಡ್ಡಿ ಇದನ್ನು ಅವರು

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### 2,500 ಕಡೆ ಕಾಫಿ ಕಿಯೋಸ್ಕ್ ಸ್ಥಾಪನೆ:ಡಾ.ಪಾಟೀಲ

ಗುಂಪಗಳಿಗೆ ಸಾಲ ನೀಡಿ ವಸೂಲಾತಿಗೆ ಕೊಡಬಾರದ ಕಿರುಕುಳ ನೀಡುತ್ತಿದ್ದು, ಇದಕ್ಕೆ ಕಡಿವಾಣ ಹಾಕಲು ಸರ್ಕಾರದಿಂದಲೆ ಸಾಲ ಸಹಕಾರ ಸಂಘ ಸ್ಥಾಪಿಸಿ ಅದರ ಮುಖೇನ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸಾಲ ನೀಡಲು ಯೋಚನೆ ನಡೆದಿದೆ ಎಂದ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರು, ಮಹಿಳೆಯಿಂದಲೆ ಸಮಾಜದಲ್ಲಿ ಪರಿವರ್ತನೆ ಸಾಧ್ಯ ಎಂದರು.ಕಲಬುರಗಿ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದ ಸ್ವ-ಸಹಾಯ ಗುಂಪುಗಳು ತಯ್ಯಾರಿಸಿರುವ ಉತ್ಪನ್ನಗಳಿಗೆ ಪ್ರಚಾರದ ಜೊತೆ ಮಾರುಕಟ್ಟೆ ಕಲ್ಪಿಸಲು ಇಂದಿಲ್ಲಿ 10 ದಿನಗಳ ಕಾಲ ರಾಷ್ಟ್ರ ಮಟ್ಟದ ವಸ್ತು ಪ್ರದರ್ಸನ ಮೇಳ ಆಯೋಜಿಸಿದ್ದು, 9 ರಾಜ್ಯಗಳ ಮಹಿಳಾ ಸ್ವ-ಸಹಾಯ ಗುಂಪುಗಳು ತಮ್ಮ ಉತ್ಪನ್ನಗಳನ್ನು ಇಲ್ಲಿಗೆ ಮಾರಾಟಕ್ಕೆ ತಂದಿದ್ದಾರೆ. 230 ಸ್ಟಾಲ್ ಹಾಕಲಾಗಿದೆ. 20 ಲೈವ್ ಫುಡ್ ಸ್ಟಾಲ್ ಗಳಿದ್ದು, ವಿವಿಧ ಪ್ರದೇಶದ ಬಗೆ-ಬಗೆಯ ತಿಂಡಿಗಳು ಇಲ್ಲಿ ಲಭ್ಯವಿದೆ. ಜಿಲ್ಲೆಯ ಜನತೆ ಇದರ ಲಾಭ ಪಡೆಯಬೇಕೆಂದು ಅವರು ಕೋರಿದರು.

ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನದ ನಿರ್ದೇಶಕಿ ಪಿ.ಐ.ಶ್ರೀವಿದ್ಯಾ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯದಾದ್ಯಂತ 35 ಲಕ್ಷ ಮಹಿಳೆಯರು ಮಹಿಳಾ ಸ್ವ-ಸಹಾಯ ಗುಂಪುಗಳ ಭಾಗವಾಗಿದ್ದು, ಇವರು ಉತ್ಪಾದಿಸುವ ವಸ್ತುಗಳ ಮಾರಾಟಕ್ಕೆ ವೇದಿಕೆ ಕಲ್ಪಿಸಲು ಪ್ರತಿ ವರ್ಷ ರಾಷ್ಟ್ರ ಮಟ್ಟದ ಸರಸ್ ಮೇಳ ಆಯೋಜಿಸುತ್ತಿದ್ದು, ಅದರಂತೆ ಈ ಬಾರಿ ಕಲಬುರಗಿಯಲ್ಲಿ ಆಯೋಜನೆ ಮಾಡಲಾಗಿದೆ ಎಂದು ತಿಳಿಸಿದರು.ಪರಿವರ್ತನೆ ಅಭಿಯಾನಕ್ಕೆ ಚಾಲನೆ: ಮಹಿಳೆಯರಿಗೆ ಋತುಚಕ್ರ, ಗರ್ಭಿಣಿ ಮತ್ತು ಬಾಣಂತಿ ಮಹಿಳೆಯರ ಆರೈಕೆ, ಮಹಿಳಾ ಹಕ್ಕುಗಳು, ಮಹಿಳೆಯರ ಮೇಲೆ ಮಾನಸಿಕ ಮತ್ತು ದೈಹಿಕ ಹಲ್ಲೆ ತಡೆಯುವ ನಿಟ್ಟಿನಲ್ಲಿ ಸಮುದಾಯದ ಸಹಕಾರ, ಬಾಲ್ಯ ವಿವಾಹ, ಭ್ರೂಣ ಲಿಂಗ ಪತ್ತೆ ಸೇರಿದಂತೆ ಅನೇಕ ವಿಚಾರಗಳ ಕುರಿತು ಮಹಿಳೆಯರಿಗೆ ಮತ್ತು ಜನಸಮುದಾಯಕ್ಕೆ ಮುಂದಿನ ಮೂರು ತಿಂಗಳ ಕಾಲ ಅಭಿಯಾನದ ಮೂಲಕ ಅರಿವು ಮೂಡಿಸುವ "ಪರಿವರ್ತನೆ" ಅಭಿಯಾನಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಚಾಲನೆ ನೀಡಿದರು.13 ಸಂಘಗಳಿಗೆ ಚೆಕ್ ವಿತರಣೆ: ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ ಜಿಲ್ಲೆಯ 13 ಸ್ವ-ಸಹಾಯ ಗುಂಪುಗಳಿಗೆ ಇದೇ ಸಂದರ್ಭದಲ್ಲಿ ಸಮುದಾಯ ಬಂಡವಾಳ ನಿಧಿಯಡಿ 1 ಲಕ್ಷ ರೂ. ಮತು 1.50 ಲಕ್ಷ ರೂ.ಗಳ ಚೆಕ್‌ಗಳನ್ನು ಸಚಿವರುಗಳು ಮತ್ತು ಗಣ್ಯರು ವಿತರಣೆ ಮಾಡಿದರು.ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಸದ ರಾಧಾಕೃಷ್ಣ ದೊಡ್ಡಮನಿ, ಕಿಯೋನಿಕ್ಸ್ ಅಧ್ಯಕ್ಷ ಶರತ್ ಬಚ್ಚೆಗೌಡ, ಶಾಸಕರಾದ ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಕಲಬುರಗಿ ಮಹಾನಗರ ಪಾಲಿಕೆ ಮೇಯರ್ ಯಲ್ಲಪ್ಪ ನಾಯ್ಕೋಡಿ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕೆ.ಕೆ.ಆರ್.ಡಿ.ಬಿ. ಕಾರ್ಯದರ್ಶಿ ಎಂ.ಸುಂದರೇಶ ಬಾಬು, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಸಜ್ಜನ್ ಸೇರಿದಂತೆ ಇನ್ನಿತರ ಗಣ್ಯರು ಇದ್ದರು. ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಸ್ವಾಗತಿಸಿದರು. ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನದ ಹೆಚ್ಚುವರಿ ನಿರ್ದೇಶಕ ಅರ್ಜುನ್ ಒಡೆಯರ್ ವಂದಿಸಿದರು. ಪ್ರತಿಭಾ ಗೌಡ ನಿರೂಪಿಸಿದರು.

### ಮಹಾರಾಷ್ಟ್ರ ಸರ್ಕಾರದ ಜೊತೆ ಮಾತುಕತೆ

ಅರ್ಥ ಮಾಡಿಕೊಳ್ಳಬೇಕೆಂದು ಹೇಳಿದರು.ನಮ್ಮ ಮುಖ್ಯ ಕಾರ್ಯದರ್ಶಿಗಳು ಅಲ್ಲಿನ ಸರ್ಕಾರದ ಜೊತೆ ಮಾತನಾಡಿದ್ದಾರೆ. ಸೋಲಾಪುರದಲ್ಲಿ ಮಂಗಳವಾರ ಅಧಿಕಾರಿಗಳ ಸಭೆ ನಡೆಯಲಿದೆ. ಅದು ಆಗದಿದ್ದರೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳೇ ಮಾತುಕತೆ ನಡೆಸುತ್ತಾರೆ ಅದಕ್ಕೂ ಸರಿ ಹೋಗದಿದ್ದರೆ ಸ್ವತ: ನಾನೇ ಮಾತುಕತೆ ನಡೆಸುತ್ತೇನೆ ಎಂದು ಸಚಿವರು ಹೇಳಿದರು.

# ಬೇಸಿಗೆ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ:ಪ್ರಿಯಾಂಕ್ ಖರ್ಗೆ



ಕಲಬುರಗಿ,ಫೆ.24:ಪ್ರತಿ ವರ್ಷ ಬೇಸಿಗೆಯಲ್ಲಿ ಜಿಲ್ಲೆಯಾದ್ಯಂತ ನಗರ-ಪಟ್ಟಣ ಹಾಗೂ ಗ್ರಾಮೀಣ ಭಾಗದಲ್ಲಿ ಕಂಡುಬರುವ ಸಂಭಾವ್ಯ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ದೊರಕಿಸಲು ಚಿಂತನೆ ನಡೆಸಲಾಗುತ್ತಿದ್ದು, ಕೂಡಲೆ ತಾಲೂಕಾವಾರು ಸಭೆ ನಡೆಸಿ ಸಮಗ್ರ ಕ್ರಿಯಾ ಯೋಜನೆ ರೂಪಿಸಿ ಸಲ್ಲಿಸುವಂತೆ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ.-ಬಿ.ಟಿ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳಿಗೆ ಸೂಚಿಸಿದರು.

ಇಲ್ಲಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮುಂಬರುವ ಬೇಸಿಗೆಗೆ ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವು ಪೂರೈಕೆ ಸಂಬಂಧ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಹಿಂದಿನ 5 ವರ್ಷಗಳ ಸಮಸ್ಯಾತ್ಮಕ ಪ್ರದೇಶಗಳನ್ನು ಗಮನದಲ್ಲಿಟ್ಟುಕೊಂಡು ಯೋಜನೆ ರೂಪಿಸಿ ಸಲ್ಲಿಸಿದಲ್ಲಿ ಕಂದಾಯ, ಕೃಷಿ ರೇಷ್ಮೆ, ತೋಟಗಾರಿಕೆ,ಪಶುಸಂಗೋಪನಾ ಸಚಿವರೊಂದಿಗೆ ಚರ್ಚಿಸಿ ಪರಿಹಾರ ಕಲ್ಪಿಸುವುದರ ಜೊತೆಗೆ ಇದಕ್ಕೆ ಬೇಕಾದ ಹಣ ಸಹ ಹೊಂದಿಸಲಾಗುವುದು ಎಂದರು.

ಪ್ರತಿ ಬೇಸಿಗೆಯಲ್ಲಿ ಹೊಸದಾಗಿ ಬೋರವೆಲ್ ಕೊರೆಯುವುದು ಬೇಡ. ಬದಲು ಇರುವ ಬೋರವೆಲ್ ಗಳಿಗೆ ಫ್ಲಶ್ಸಿಂಗ್ ಮಾಡಬೇಕು, ಮೋಟಾರದ ಕೆಟ್ಟಿದರೆ ಅದನ್ನು ಬದಲಾಯಿಸಬೇಕು. ಯುದ್ಧ ಆರಂಭವಾದಾಗ ಶಸ್ತ್ರಾಭ್ಯಾಸ ಬೇಡ. ಈಗಿನಿಂದಲೆ ಸಮಸ್ಯಾತ್ಮಕ ಹಳ್ಳಿ, ನಗರ ಪಟ್ಟಣಗಳಲ್ಲಿ ಕುಡಿಯುವ ನೀರು ಸಮಸ್ಯೆಯನ್ನು ಸಮರ್ಥವಾಗಿ ಎದುರಿಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದರು.

ಹವಾಮಾನ ಇಲಾಖೆ ಪ್ರಕಾರ ಈ ಬಾರಿ ಹೆಚ್ಚಿನ ಬಿಸಿಲಿನ ಜೊತೆಗೆ ಬಿಸಿ ಗಾಳಿ ಇದೆ. ಹೀಗಾಗಿ ಎಲ್ಲಾ ಗ್ರಾಮೀಣ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕರ ಅರೋಗ್ಯ ಕಾಪಾಡುವ ನಿಟ್ಟಿನಲ್ಲಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಬಳಿ ಪಿ.ಡಿ.ಖಾತೆಯಲ್ಲಿ ಹಣ ಇದ್ದು, ಅದನ್ನು ಸಮರ್ಪಕವಾಗಿ ಬಳಸಿ ಎಂದು ಅಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದರು.

ಕಳೆದ ವರ್ಷ ನೀರು ಪೂರೈಕೆ ಮಾಡಿದ ಖಾಸಗಿ ಬೋರವೆಲ್, ಟ್ಯಾಂಕರ್ ಗಳಿಗೆ ಬಾಕಿ ಉಳಿದಿದೆ ಎಂಬ ಮಾಹಿತಿ ಇದ್ದು, ಕೂಡಲೆ ಸದರಿ ಬಿಲ್ಲು ಕ್ಲಿಯರ್ ಮಾಡಬೇಕು ಎಂದು ಡಿ.ಸಿ, ಸಿ.ಇ.ಓ ಗೆ ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಕಲಬುರಗಿ ನಗರದಲ್ಲಿನ ಕುಡಿಯುವ ನೀರಿನ ಸಮಸ್ಯೆ ಕುರಿತು ಪಾಲಿಕೆ ಆಯುಕ್ತ ಶಿಂಧೆ ಅವಿನಾಶ ಸಜ್ಜನ್ ಅವರು ಮಾತನಾಡಿ, 15ನೇ ಹಣಕಾಸು ಯೋಜನೆಯಡಿ ಬೋರವೆಲ್ ಕೊರೆಯಲು ದಕ್ಷಿಣ ಕ್ಷೇತ್ರಕ್ಕೆ 96 ಲಕ್ಷ ರೂ., ಉತ್ತರ ಕ್ಷೇತ್ರಕ್ಕೆ 79 ಲಕ್ಷ ರೂ., ನಗರಕ್ಕೆ 1 ಕೋಟಿ ರೂ. ಸೇರಿ ಒಟ್ಟಾರೆ 2.75 ಕೋಟಿ ರೂ. ಮೀಸಲಿರಿಸಿದೆ. ಪ್ರತಿ ವಾರ್ಡ್ ಗೆ ಒಂದು ಟ್ಯಾಂಕರ್ ಮೀಸಲಿರುವಂತೆ ಎಲ್ & ಟಿ ಕಂಪನಿಗೆ ಸೂಚಿಸಿದೆ ಎಂದರು. ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ ಕುಡಿಯುವ ನೀರು ಪೂರೈಕೆ ವಿಚಾರದಲ್ಲಿ ಪಾಲಿಕೆ ಸದಸ್ಯರು ಮತ್ತು ಅಧಿಕಾರಿಗಳ ನಡುವೆ ಸಮನ್ವಯತೆ ಇಲ್ಲ. ಕೂಡಲೆ ಸಭೆ ಕರೆದು ಸಮನ್ವಯ ಸಾಧಿಸಬೇಕು ಎಂದರು.

ಸಭೆಯಲ್ಲಿ ಭಾಗವಹಿಸಿದ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಮಾತನಾಡಿ ಸಾವಳಗಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಿದ್ದು, ಪರಿಹಾರ ಕಲ್ಪಿಸಬೇಕು. ನಗರದಲ್ಲಿ ಕೊಳವೆ ಬಾವಿಗೆ 300 ಮೋಟಾರ್ ಅವಶ್ಯಕತೆ ಇದೆ ಎಂದು ಸಭೆಯ ಗಮನಕ್ಕೆ ತಂದರು.

ಮಾರ್ಚ್ 1 ರಿಂದ 15 ದಿನಕ್ಕೊಮ್ಮೆ ಪರಾಮರ್ಶಿಸಬೇಕು: ಮಾರ್ಚ್ 1 ರಿಂದ ಮುಂದಿನ ಮೂರು ತಿಂಗಳ ಕಾಲ ಪ್ರತಿ 15 ದಿನಕ್ಕೊಮ್ಮೆ ತಹಶೀಲ್ದಾರರು ಮತ್ತು ತಾಲೂಕಾ ಪಂಚಾಯತ್ ಇ.ಓಗಳು ತಾಲೂಕು ಮಟ್ಟದಲ್ಲಿ ಕುಡಿಯುವ ನೀರು ಸಂಬಂಧ ಸಭೆ ನಡೆಸಿ ಪರಾಮರ್ಶಿಸಬೇಕು. ಟಾಸ್ಕ್ ಫೋರ್ಸ್ ಸಭೆ ಕರೆದು ಸಭೆ ನಡಾವಳಿ ಸಿದ್ದಪಡಿಸಿ ಅದರಂತೆ ಅನುದಾನ ಖರ್ಚು ಮಾಡಬೇಕು.

# ಮಠಗಳಿಗೆ ಸಮಾಜದ ಹಿತವೇ ಮುಖ್ಯವಾಗಲಿ



ಮಲ್ಲಮ್ಮ ನುಡಿ ವಾರ್ತೆ

ಕುಪ್ಪಳ :ಜ.24: ಕುಕನೂರ ತಾಲೂಕಿನ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿ ಹಾಗೂ ಭೂಮಿ ಪೂಜೆ ಕಾರ್ಯಕ್ರಮ ನೆರವೇರಿಸಲಾಯಿತು. ಕುಕನೂರು ತಾಲೂಕಿನ ಯಡೆಯಾಪುರ ಬೂದುಗುಂಪ ರಸ್ತೆಯಲ್ಲಿ ಬರುವ ಹಳ್ಳಕ್ಕೆ ಬ್ರಿಜ್ ಕಮ್ ಬ್ಯಾರೇಜ್ ಭೂಮಿ ಪೂಜೆ ನೆರವೇರಿಸಿ ವೇದಿಕೆಯನ್ನು ಉದ್ದೇಶಿಸಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ ಮಾತನಾಡುತ್ತ ಕೇವಲ ಒಂದು ವರ್ಷದಲ್ಲಿ ಕ್ಷೇತ್ರದಲ್ಲಿ ನೂತನ 14 ಪ್ರೌಢಶಾಲೆ ಆರು ಪದವಿಪೂರ್ವ ಕಾಲೇಜು ಹಾಗು ನಾಲ್ಕು ವಸತಿ ಶಾಲೆಗಳನ್ನು ಮಂಜೂರು ಮಾಡಿಸಿದ್ದು ಮುಂದಿನ ಅವಧಿಯೊಳಗೆ ಕ್ಷೇತ್ರದ ಎಲ್ಲಾ ರೀತಿಯ ಅಭಿವೃದ್ಧಿಗೆ ಬದ್ಧನಾಗಿದ್ದು ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗಾಗಿ ಸದಾಕಾಲ ಸಿದ್ಧನಿದ್ದೇನೆ ಎಂದರು. ಸರ್ಕಾರದಿಂದ ಹಲವಾರು ಯೋಜನೆಗಳನ್ನು ಮಂಜೂರು ಪಡಿಸುತ್ತಿದ್ದು ಪ್ರತಿ ಗ್ರಾಮದಲ್ಲೂ ಗ್ರಾಮಸ್ಥರ ಸಹಕಾರವಿದ್ದಾಗ ಮಾತ್ರ ಅಭಿವೃದ್ಧಿ ಸಾಧ್ಯ. ಗ್ರಾಮಗಳಲ್ಲಿ ಬೃಹತ್ ಕೆರೆ ನಿರ್ಮಾಣಕ್ಕಾಗಿ ಭೂಮಿ ಅವಶ್ಯಕತೆ ಇದ್ದು ಸರ್ಕಾರಿ ಬೆಲೆಗೆ ಭೂಮಿಯನ್ನು ನೀಡುವ ಬೂದಾನಿಗಳು ಮುಂದೆ ಬಂದಲ್ಲಿ ಪ್ರತಿ ಗ್ರಾಮಕ್ಕೂ ಉತ್ತಮವಾದ ಬೃಹತ್ ಕೆರೆ ನಿರ್ಮಾಣ ಮಾಡುವುದಾಗಿ ತಿಳಿಸಿದರು ಹಾಗೂ ಅಭಿವೃದ್ಧಿಗೆ ರಸ್ತೆಗಳು ಪೂರಕವಾಗಿದ್ದು ಎಲ್ಲಾ ರಸ್ತೆಗಳನ್ನು ಹಂತ ಹಂತವಾಗಿ ಸುಧಾರಣೆಗೊಳಿಸಲು ಹಗಲಿರುಳು ಶ್ರಮಿಸುತ್ತೇನೆ ಎಂದು ಹೇಳಿದರು.

ಕುಕನೂರು ನೂತನ ತಾಲೂಕು ಕಾರ್ಯರಂಭಗೊಂಡು ಸುಮಾರು ವರ್ಷಗಳು ಕಳೆದರೂ ಸಹ ಸೂಕ್ತ ಕಾರ್ಯಾಲಯ ಕಟ್ಟಡವಿಲ್ಲದಿರುವುದು ಅಭಿವೃದ್ಧಿಗೆ ಕುಂಠಿತವಾಗಿರುತ್ತದೆ ಶೀಘ್ರದಲ್ಲಿ ತಾಲೂಕ ಆಡಳಿತ ಭವನ ನಿರ್ಮಾಣಕ್ಕೆ ಕಾರ್ಯ ಆರಂಭ ಮಾಡಲಾಗುವುದು ಎಂದು ಹೇಳಿದರು.

ಈ ವೇಳೆಯಲ್ಲಿ ಕುಕುನೂರು ತಹಸಿಲ್ದಾರ ಎಚ್,ಪ್ರಾಣೇಶ್ ಹನುಮಂತ ಗೌಡ ಚಂಡೂರ, ವೆಂಕಣ್ಣ ಯರಾಸಿ, ರೈಮನ್ ಸಾಬ್ ಮಕಪ್ಪನವರ್, ಸಂಗಮೇಶ್ ಗುತ್ತಿ, ರಾಘವೇಂದ್ರ ಕಾತ್ರಿಕಿ, ಮುತ್ತಣ್ಣ ರಾಜೂರ, ಸೇರಿದಂತೆ ಪ್ರಮುಖರು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

ಬೀದರ. ಫೆ. 24 : ಮಠ ಮಾನ್ಯಗಳಿಗೆ ಭಕ್ತರ ಉದ್ಧಾರ ಹಾಗೂ ಸಮಾಜದ ಹಿತವೇ ಮುಖ್ಯವಾಗಬೇಕು ಎಂದು ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ನುಡಿದರು.

ಲಿಂಗಾಯತ ಮಹಾಮಠದ ವತಿಯಿಂದ ನಗರದ ಬಸವಗಿರಿಯಲ್ಲಿ ಭಾನುವಾರ ನಡೆದ ಶರಣ ಸಂಗಮ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಮಠಗಳು ಯಾರದ್ದಾದರೂ ಅಧೀನದಲ್ಲಿರಬೇಕಾದರೆ ಅದು ಭಕ್ತರ ಅಧೀನದಲ್ಲಿರಬೇಕು. ಯಾವ ಕಾರಣಕ್ಕೂ ಯಾರ ಹಂಗಿಗೂ ಒಳಗಾಗಬಾರದು ಎಂದು ಹೇಳಿದರು.

ಅಕ್ಕ ಅನ್ನಪೂರ್ಣತಾಯಿ ಅವರು ಭಕ್ತರ ಬಾಳು ಬೆಳಗಿಸಲು ಅವಿರತ ಶ್ರಮಿಸಿದ್ದರು. ಅವರು ಹಾಕಿಕೊಟ್ಟ ಬಸವ ಮಾರ್ಗದಲ್ಲೇ ಮುನ್ನಡೆಯುತ್ತಿರುವೆ ಎಂದು ತಿಳಿಸಿದರು.

ಪ್ರಸ್ತುತ ಪ್ರತಿಯೊಬ್ಬರೂ ತಮ್ಮ ಬದುಕಿನ ರೀತಿ ಬಗ್ಗೆ ಆತ್ಮ ವಿಮರ್ಶೆ ಮಾಡಿಕೊಳ್ಳಬೇಕು. ಹಾಗೆ ಮಾಡಿದ್ದಲ್ಲಿ ಮುಂದಿನ ಜೀವನ ಸುಖಮಯವಾಗುತ್ತದೆ ಎಂದು ಹೇಳಿದರು.

ಬಸವಣ್ಣನವರ ವಚನಗಳಲ್ಲಿ ಆತ್ಮವಿಮರ್ಶೆ ಕುರಿತು ಉಪನ್ಯಾಸ ನೀಡಿದ ಬಸವಕಲ್ಯಾಣದ ಬಸವ ತತ್ವಪ್ರಚಾರಕ ಬಸವದೇವರು, ಬೇರೆಯವರ ತಪ್ಪುಗಳನ್ನು ಹುಡುಕದೆ, ಮೊದಲು ತಮ್ಮ ತಪ್ಪುಗಳನ್ನು ಸರಿಪಡಿಸಿಕೊಳ್ಳಬೇಕು. ಆತ್ಮಸಾಕ್ಷಿ ಒಪ್ಪುವಂತೆ ಬದುಕು ಸಾಗಿಸಬೇಕು ಎಂದು ತಿಳಿಸಿದರು.

ಯುರೋಪ ದೇಶದಲ್ಲಿ ಬಸವ ತತ್ವಪ್ರಚಾರ ಕೈಗೊಂಡ ಯೋಗ ಗುರು ಕವಿತಾ ಚಂದ್ರಶೇಖರ್ ಸನ್ಮಾನ ಸ್ವೀಕರಿಸಿ ಮಾತನಾಡಿ, ವೈಜ್ಞಾನಿಕವಾಗಿರುವ ಬಸವತತ್ವ ಇಂದು ಜಗತ್ತಿಗೆ ಅವಶ್ಯಕವಾಗಿದೆ. ವಿದೇಶಿಗರೂ ಬಸವ ತತ್ವವನ್ನು ಅಪ್ಪಿಕೊಳ್ಳುತ್ತಿದ್ದು, ಇದನ್ನು ವಿಶ್ವದಾದ್ಯಂತ ಪಸರಿಸುವ ಕೆಲಸ ಆಗಬೇಕಾಗಿದೆ ಎಂದು ಹೇಳಿದರು.

ಜರ್ಮನಿಯ ಶಹನಾಯ್ ಅವರು ಫೆ. 26 ರಂದು ಲಿಂಗಾಯತ ಮಹಾಮಠದಲ್ಲಿ ನಡೆಯಲಿರುವ ಸಾಮೂಹಿಕ ಇಷ್ಟಲಿಂಗ ಪೂಜೆಯಲ್ಲಿ ಲಿಂಗಾಯತ ಧರ್ಮ ಸ್ವೀಕರಿಸಲಿದ್ದು, ಬಸವ ತತ್ವ ಹಾಗೂ ಲಿಂಗಾಯತ ಧರ್ಮದ ಬಗ್ಗೆ ಜಾಗತಿಕ ಮಟ್ಟದಲ್ಲಿ ಹೆಚ್ಚುತ್ತಿರುವ ಒಲವಿಗೆ ಇದು ನಿದರ್ಶನವಾಗಿದೆ ಎಂದು ತಿಳಿಸಿದರು.

ಜರ್ಮನಿಯ ಶಹನಾಯ್ ಕಾರ್ಯಕ್ರಮ ಉದ್ಘಾಟಿಸಿದರು. ಖಾದಿ ಮತ್ತು ಕೈಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ರಾಜಕುಮಾರ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಲಿಂಗಾಯತ ಮಹಾಮಠದ ಕಾರ್ಯದರ್ಶಿ ಚನ್ನಬಸಪ್ಪ ಹಂಗರಗಿ, ಪ್ರಮುಖರಾದ ಅಶೋಕ ಎಲಿ,ಪ್ರಕಾಶ ಮಠಪತಿ, ಅಣವೀರ ಕೊಡಂಬಲ್, ಸಿ.ಎಸ್. ಗಣಾಚಾರಿ, ಆರ್. ಕೆ. ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

ಚೆನ್ನಮ್ಮ ಮಹಾದೇವ ಪಾಟೀಲ ನವಲಸಪುರ ಬಸವ ಪೂಜೆ ನೆರವೇರಿಸಿದರು. ಶಾಮಲಾ ಎಲಿ ವಚನ ಪಠಣ ಮಾಡಿದರು.

ಪ್ರಿಯಾ ಬರಗಲೆ ಸ್ವಾಗತಿಸಿದರು. ಬಸವರಾಜಕುಮಾರ ಚಿಕ್ಕಲಿಂಗೆ ನಿರೂಪಿಸಿದರು. ರೇವಣಸಿದ್ದ ಗಣಾಚಾರಿ ವಂದಿಸಿದರು. ಮಹಾನಂದಾ ಮಾರುತಿ ಪಾಟೀಲ ಭಕ್ತಿದಾಸೋಹಗೈದರು.

# ಮಾಜಿ ದೇವದಾಸಿ ಮಹಿಳೆಯರಿಗೆ ಕಾನೂನು ಅರಿವು ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.24:ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ದೇವದಾಸಿ ಪುನರ್ವಸತಿ ಯೋಜನೆ ಕಲಬುರಗಿ, ಕಾನೂನು ಸೇವಾ ಪ್ರಾಧಿಕಾರ, ವಕೀಲರ ಸಂಘ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜೇವರ್ಗಿ ಇವುಗಳ ಸಂಯುಕ್ತಶ್ರಾಯದಲ್ಲಿ ವಿಶ್ವ ಸಾಮಾಜಿಕನ್ಯಾಯದಿನಾಚರಣೆಯ ಪ್ರಯುಕ್ತ ಮಾಜಿ ದೇವದಾಸಿ ಮಹಿಳೆಯರಿಗೆ, ಸಾಮಾನ್ಯ ಮಹಿಳೆಯರಿಗಾಗಿ ಕಾನೂನು ಅರಿವು ಕಾರ್ಯಕ್ರಮವನ್ನು ಜೇವರ್ಗಿ ತಾಲ್ಲೂಕಾ ಪಂಚಾಯತ್ ಸಭಾಂಗಣದಲ್ಲಿ ಇತ್ತೀಚೆಗೆ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಹಿರಿಯ ಶ್ರೇಣಿ ಸಿವ್ಹಿಲ್ ನ್ಯಾಯಾಧೀಶರಾದ ಸಂದೀಪ ನಾಯಕ ಅವರು, ದೇವದಾಸಿ ಅನಿಷ್ಠ ಪದ್ಧತಿಯನ್ನು ರಾಜ್ಯ ಸರ್ಕಾರವು ಗಂಭೀರವಾಗಿ ಪರಿಗಣಿಸಿ ಈ ಪದ್ಧತಿಯನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಈ ಮೂಡನಂಭಿಕೆ ಆಚರಣೆಯನ್ನು ಬಿಟ್ಟು ಸಾಮಾಜದ ಮುಖ್ಯ ವಾಹಿನಿಗೆ ಬಂದು ತಾವೂ ಕೂಡಾ ಸಾಮಾನ್ಯ ಮಹಿಳೆಯರಂತೆ ಬದುಕಬೇಕು. ದೇವದಾಸಿ ಸಮರ್ಪಣಾ ನಿಷೇಧ ಕಾಯ್ದೆ 1982 ಹಾಗೂ 2009-10 ರ ಅಧಿನಿಯಮ-1ರ ಪ್ರಕಾರ ದೇವದಾಸಿ ಪದ್ದತಿಗೆ ಒಳಪಡುವವರು, ಇದಕ್ಕೆ ಪ್ರೋತ್ಸಾಹಿಸಿದವರು ಮತ್ತು ಭಾಗಿಯಾದವರಿಗೆ 5 ವರ್ಷ ಜೈಲು ಶಿಕ್ಷೆ ಹಾಗೂ 5000 ರೂ.ಗಳ ದಂಡ ವಿಧಿಸಲಾಗುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಜೇವರ್ಗಿ ಕಿರಿಯ ಶ್ರೇಣಿ ಸಿವ್ಹಿಲ್ ನ್ಯಾಯಾಧೀಶ ಕಾಶಿನಾಥ ಉಪ್ಪಾರ ಅವರು ಮಾತನಾಡಿದರು. ಜೇವರ್ಗಿ ವಕೀಲರ ಸಂಘದ ಅಧ್ಯಕ್ಷ ಎಮ್.ಐ.ಸೂಗೂರ ಮಾತನಾಡಿ, ದೇವದಾಸಿ ಪದ್ದತಿ ಮತ್ತು ಅದರ ದುಷ್ಪರಿಣಾಮಗಳ ಕುರಿತು ಸಭೆ-ಸಮಾರಂಭಗಳಲ್ಲಿ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಕರ್ತ್ಯವವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಆಗಮಿಸಿ ಮಾತನಾಡಿದ ನ್ಯಾಯವಾದಿ ಅಪ್ಪಾಸಾಹೇಬ ಕೊಳಕೂರ ಅವರು, ಸಾಮಾಜದಲ್ಲಿ ಹೆಣ್ಣು ಮಕ್ಕಳೂ ಕೂಡಾ ಗಂಡು ಮಕ್ಕಳಂತೆ ಸರಿ ಸಮಾನವಾದ ಹಕ್ಕನ್ನು ಹೊಂದಿದ್ದು, ಬಾಲ್ಯ ವಿವಾಹ ನಿಷೇದ ಕಾಯ್ದೆಯಡಿ ಕಾನೂನು ಪ್ರಕಾರ ಹೆಣ್ಣು ಮಕ್ಕಳಿಗೆ 18 ವರ್ಷ ಮತ್ತು ಗಂಡು ಮಕ್ಕಳಿಗೆ 21 ವರ್ಷ ಪೂರ್ಣಗೊಂಡ ನಂತರ ಮದುವೆ ಮಾಡಬೇಕು ಎಂದರು.


ನ್ಯಾಯವಾದಿ ಪರಶುರಾಮ ಬಿ. ಮುದಬಾಳ ಅವರು ಮಾತನಾಡಿ, ವಿಮುಕ್ತ ಹೊಂದಿದ ಮಾಜಿ ದೇವದಾಸಿ ಮಹಿಳೆಯರಿಗಾಗಿ ಸರ್ಕಾವು ದೇವದಾಸಿ ಪುನರ್ವಸತಿ ಯೋಜನೆಯಡಿ ಸಿಗುವ ಎಲ್ಲಾ ಸೌಲಭ್ಯವನ್ನು ಪಡೆದುಕೊಳ್ಳಬೇಕು. ಇದರ ಜೊತೆಗೆ ಮಾಜಿ ದೇವದಾಸಿಯರ ಮಕ್ಕಳು ಉನ್ನತ ಶಿಕ್ಷಣವನ್ನು ಪಡೆಯಬೇಕು. ದೇವದಾಸಿಯರಿಗೆ 2000 ರೂಪಾಯಿ ಮಾಶಾಸನ, ದೇವದಾಸಿಯವರ ಹೆಸರಿನಲ್ಲಿ ನಿವೇಶನ ಹೊಂದಿದಲ್ಲಿ ವಸತಿ ಸೌಲಭ್ಯ ಮತ್ತು ಚಿಕ್ಕ ಪುಟ್ಟ ವ್ಯಾಪಾರ ಮಾಡಿಕೊಳ್ಳಲು ಆರ್ಥಿಕ ಸಹಾಯಧನ ಸರ್ಕಾರವು ನೀಡುತ್ತಿದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಸಹಾಯಕ ಸರ್ಕಾರಿ ಅಭಿಯೋಜಕ ನಾಗವೇಣಿ ಧನ್ನಾ ಮಾತನಾಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಿಷನ್ ಶಕ್ತಿ ಯೋಜನೆಯ ಮಹಿಳಾ ಸಬಲೀಕರಣ ಘಟಕದ ಜಂಡರ್ ಸ್ಪೇಶಲಿಸ್ಟ ಉಮಾ ಪೂಜಾರಿ ಅವರು ಬೇಟಿ" ಬಚಾವೋ ಬೇಟಿ ಪಡಾವೋ "ಯೋಜನೆ ಹಾಗೂ ಹೆಣ್ಣು ಭ್ರೂಣ ಹತ್ಯೆ ಕಾಯ್ದೆ 1994 ರ ಕುರಿತು ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಜೇವರ್ಗಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರವಿಚಂದ್ರ ಲಕ್ಕುಂಡಿ, ಜೇವರ್ಗಿ ಹಿರಿಯ ವಕೀಲ ತ್ರಿವೇಣಿ ಹಾಗೂ ಜೇವರ್ಗಿ ಸಹಾಯಕ ಸರ್ಕಾರಿ ಅಭಿಯೋಜಕ ಬಸಲಿಂಗಮ್ಮ ಉಪಸ್ಥಿತರಿದ್ದರು.

ಜೇವರ್ಗಿ ಶಿಶು ಅಭಿವೃದ್ದಿ ಯೋಜನಾಧಿಕಾರಿ ಎಸ್.ಎಮ್. ಪಾಟೀಲ್ ಸ್ವಾಗತಿಸಿದರು. ಯೋಜನಾನುಷ್ಠಾನಾಧಿಕಾರಿ ವೈ.ಡಿ.ಬಡಿಗೇರ್ ವಂದಿಸಿದರು.

# ಮೂಲಭೂತ ಪರಿಕಲ್ಪನೆಗಳ ಬಲವರ್ಧನೆಗೆ ಕಲಿಕಾ ಹಬ್ಬದ ಪ್ರೇರಣೆ:ನಾಗೇಶ ಸಂಗಮೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.24:ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾಜ್ಞಾನದ (ಈಐಓಖ" ಪರಿಕಲ್ಪನೆಗಳ ಬಲವರ್ಧನೆಗೆ ಕಲಿಕಾ ಹಬ್ಬದ ಪ್ರೇರಣೆಯಾಗಿದ್ದು, ಕಾಲ ಕ್ರಮೇಣ ಮಕ್ಕಳ ಕಲಿಕೆಯೆ ಒತ್ತಡವನ್ನು ಕಡಿಮೆಗೊಳಿಸಲು ಸಹಕಾರಿಯಾಗುತ್ತವೆ ಎಂದು ಕಮಲನಗರ ವಲಯದ ಸಂಪನ್ಮೂಲ ವ್ಯಕ್ತಿಯಾದ ನಾಗೇಶ್ ಸಂಗಮೆ ಹೇಳಿದರು.


ಪಟ್ಟಣದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಆಯೋಜನೆ ಮಾಡಿದ ಕ್ಲಸ್ಟರ್ ಮಟ್ಟದಲ್ಲಿ 1 ರಿಂದ 5 ನೇ ತರಗತಿಯ ಕಾರ್ಯಕ್ರಮದಲ್ಲಿ ಮಾತನಾಡಿದರು.ವಿದ್ಯಾರ್ಥಿಗಳಿಗೆ ಅದರಲ್ಲೂ ವಿಶೇಷವಾಗಿ "ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾಜ್ಞಾನದ (ಈಐಓಖ" ಪರಿಕಲ್ಪನೆಗಳ ಬಲವರ್ಧನೆಗೆ ಕಲಿಕಾ ಹಬ್ಬವು ಸಂತೋಷದಾಯಕ ಹಾಗೂ ಅನುಭವಯುಕ್ತ ಕಲಿಕೆಯ ವಾತಾವರಣವನ್ನು ಪ್ರೇರೇಪಿಸುತ್ತದೆ.

ಮುಖ್ಯ ಶಿಕ್ಷಕ ಮೆಹಮುದ ಶೇಕ್ ಮಾತನಾಡಿ,ಉದಾಹರಣೆಗೆ ಕಥೆಗಳನ್ನು ಹೇಳುವುದು,ಒಳಾಂಗಣ ಹೊರಾಂಗಣದ ಮೋಜಿನ ಆಟಗಳು, ಸಂವಾದಾತ್ಮಕ ಅವಧಿಗಳು ಮತ್ತು ಕಲೆ ಕುಶಲತೆ ಆಧಾರಿತ ಸೃಜನಾತ್ಮಕ ಚಟುವಟಿಕೆಗಳು ಮಕ್ಕಳ ಕಲಿಕೆಯನ್ನು ಮೋಜಿನೊಂದಿಗೆ ಸಂಯೋಜಿಸಲು ನೆರವಾಗುತ್ತವೆ ಎಂದು ಹೇಳಿದರು.ಈ ಕಾರ್ಯಕ್ರಮದಲ್ಲಿ ಡಿಗ್ಗಿ,ಬಾಲುರ, ಚಾಂಡೇಶ್ವರ,ರಾಂಪುರೆ ಸರಕಾರಿ ಶಾಲೆ ಮಕ್ಕಳು ಬಹಳ ಉತ್ಸವ ದಿಂದ ಪಾಲ್ಗೊಂಡರು, ಸಿಬ್ಬಂದಿಗಳಾದ ಲಕ್ಷ್ಮಿಬಾಯಿ ಸಜ್ಜನ, ಮೆಹರ, ಮಾರುತಿ ಸೂರ್ಯವಂಷಿ, ವನಿತಾ ನುದ್ದನೂರೆ,ಸುನೀತಾ ಜಾಧವ, ಕವಿತಾ ವೆಂಕಟೇಶ, ಶಿವಾನಿ ಕಳಸೆ, ಸಿಮಾ, ಬಿರಾದಾರ, ರೇಣುಕಾ,ಟೋಣ್ಣೆ,ನಿಲಂಬಿಕಾ ಚಾಂಡೇಶ್ವರೆ ಸೇರಿದಂತೆ ಸಿಬ್ಬಂದಿಗಳು ಹಾಗೂ ಮಕ್ಕಳು ಸೇರಿದರು.

# ರಾಜ್ಯದ ಆರ್ಥಿಕ ಸ್ಥಿತಿ ದಯನೀಯ ಸ್ಥಿತಿಯಲ್ಲಿದೆ: ಬೊಮ್ಮಾಯಿ

ಮಲ್ಲಮ್ಮ ನುಡಿ ವಾರ್ತೆ

ಹುಬ್ಬಳ್ಳಿ: ರಾಜ್ಯದ ಆರ್ಥಿಕ ಸ್ಥಿತಿ ದಯನೀಯ ಸ್ಥಿತಿಯಲ್ಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಕ್ಷಗಳು ಕೇಳುವ ಪ್ರಶ್ನೆಗಳಿಂದ ತಪ್ಪಿಸಿಕೊಳ್ಳುತ್ತಿದ್ದಾರೆಂದು ಮಾಜಿ ಮುಖ್ಯಮಂತ್ರಿ ಮತ್ತು ಸಂಸದ ಬಸವರಾಜ ಬೊಮ್ಮಾಯಿ ಅವರು ಶನಿವಾರ ಹೇಳಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಒಬ್ಬ ಸಾಮಾನ್ಯ ಪ್ರಜೆಯಾಗಿ ರಾಜ್ಯದ ಆರ್ಥಿಕ ಪರಿಸ್ಥಿತಿ ಸುಧಾರಿಸಬೇಕು ಎಂದು ಸಲಹೆ ನೀಡಿದರೆ, ಆದರೆ, ಅದಕ್ಕೂ ಅವರಿಗೆ ಆಪತ್ತಿದೆ ಎಂದರೆ ಅವರು ಸಹನಾ ಶಕ್ತಿ ಕಳೆದುಕೊಂಡಿದ್ದಾರೆ. ನಾವು ರಾಜ್ಯದ ಬಜೆಟ್ ಬಗ್ಗೆ ಮಾತನಾಡಿದರೆ, ಅವರು ಕೇಂದ್ರದ ಬಜೆಟ್ ಬಗ್ಗೆ ಮಾತನಾಡುತ್ತಾರೆ ಎಂದು ಟೀಕಿಸಿದರು.

ಸರ್ಕಾರ ರಾಜ್ಯದ ಬಜೆಟ್ ಬಗ್ಗೆ ಸಂಪೂರ್ಣ ವಿವರ ಕೊಡಬೇಕು. ಕಳೆದ ವರ್ಷ ಯಾವುದಕ್ಕೆ ಎಷ್ಟು ಹಣ ಇಟ್ಟಿದ್ದರು, ಎಷ್ಟು ಖರ್ಚಾಗಿದೆ ಎನ್ನುವುದನ್ನು ಮಾಹಿತಿ ನೀಡಬೇಕು. ನಾನಿದ್ದಾಗ ಪೂರಕ ಬಜೆಟ್ ಮಂಡನೆ ಮಾಡಿದ್ದೆ, ಇವರು ಬಂದ ಮೇಲೆ ಎರಡು ವರ್ಷದಿಂದಲೂ ಕೊರತೆ ಬಜೆಟ್ ಮಂಡನೆ ಮಾಡುತ್ತಿದ್ದಾರೆ. ನಮ್ಮ ಸರ್ಕಾರವಿದ್ದಾಗ 77 ಸಾವಿರ ಕೋಟಿ ರೂ. ಸಾಲ ಪಡೆದು ಅದರಲ್ಲಿ ಅತಿ ಹೆಚ್ಚು ಬಂಡವಾಳ ವೆಚ್ಚ ಮಾಡುತ್ತಿದ್ದೇವು. ಕಾಂಗ್ರೆಸ್ ಅವಧಿಯಲ್ಲಿ ಬಂಡವಾಳ ವೆಚ್ಚ ಹೆಚ್ಚಾಗಿಲ್ಲ ಸಾಲ ಹೆಚ್ಚಾಗಿದೆ. 1.5 ಲಕ್ಷ ಕೋಟಿ ರೂ. ಸಾಲ ಎರಡೂ ವರ್ಷ ಮಾಡಿದ್ದಾರೆ. ಕಳೆದ ವರ್ಷ 15 ಸಾವಿರ ಕೋಟಿ ರೂ. ಸಾಲ ಹೆಚ್ಚುವರಿಯಾಗಿ ಮಾಡಿದ್ದಾರೆ ಎಂದು ದೂರಿದರು.

ಸಾಲದ ಶೂಲಕ್ಕೆ ತಳ್ಳುತ್ತಿರುವ ಬಗ್ಗೆ ಕೇಳಿದರೆ ಅದಕ್ಕೆ ಆಕ್ಷೇಪ ವ್ಯಕ್ತಪಡಿಸುತ್ತಾರೆ. ಅವರದೇ ನೆಚ್ಚಿನ ಗ್ಯಾರಂಟಿ ಯೋಜನೆಗಳಿಗೆ ಹಣ ಬಿಡುಗಡೆ ಮಾಡಿಲ್ಲ ಎಂದರೆ ಅವರ ಸರಕಾರದ ಆರ್ಥಿಕ ಪರಿಸ್ಥಿತಿ ದಿವಾಳಿಯಾಗಿದೆ ಎಂಬುದಕ್ಕೆ ಅದೇ ಉತ್ತರ ಎಂದು ತಿಳಿಸಿದರು.

ಎಸ್ಸಿಪಿ ಟಿಎಸ್‌ಪಿ ಹಣ ಕಳೆದ ಎರಡು ವರ್ಷಗಳಿಂದ ದುರ್ಬಳಕೆ ಆಗುತ್ತಿದೆ. ಎಸ್ಸಿಪಿ ಟಿಎಸ್‌ಪಿಗೆ ಬಜೆಟ್ ನಲ್ಲಿ ಮೀಸಲಿರಿಸಿದ್ದ 25 ಸಾವಿರ ಕೋಟಿ ರೂ.ಗಳು ಬೇರೆ ಬೇರೆ ಯೋಜನೆಗೆ ಬಳಕೆ ಆಗಿದೆ. ಅಭಿವೃದ್ಧಿಗೆ ಹಣ ಕೊರತೆ ಆಗಿದೆ. ಇದರ ಜೊತೆಗೆ ಸಮಾಜ ಕಲ್ಯಾಣ ಇಲಾಖೆಗೆ ಬರುವ ಹಣ ಬಿಡುಗಡೆ ಆಗಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ನ್ಯಾಯದ ಬಗ್ಗೆ ಸಾಕಷ್ಟು ಮಾತನಾಡುತ್ತಾರೆ. ಓಬಿಸಿ, ಎಸ್ ಸಿ. ಎಸ್ ಟಿ ಹಾಗೂ ಇತರ ಜನಸಾಮಾನ್ಯರ ಕಲ್ಯಾಣ ಅನುದಾನ ಬಿಡುಗಡೆ ಆಗಿಲ್ಲ. ವಾಲ್ಮೀಕಿ ನಿಗಮದ ಹಗರಣ ಆದ ನಂತರ ಆ ಇಲಾಖೆಯಲ್ಲಿ ಏನು ಆಗುತ್ತಿದೆ. ಇಲಾಖೆಯ ಅನುದಾನ ಏನಾಗಿದೆ. ಯಾವ ಉದ್ದೇಶಕ್ಕೆ ಬಳಕೆ ಆಗಿದೆ. ಎಷ್ಟು ಉಳಿದಿದೆ, ಎಷ್ಟು ಹಣ ಬಳಕೆ ಆಗಿದೆ ಗೊತ್ತಿಲ್ಲ ಎಂದು ಅವರು ತಿಳಿಸಿದರು.

# ಮಹಿಳಾ ಘಟಕದ ಅಧ್ಯಕ್ಷರ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಸೇಡಂ : ಫೆ, 24 ಕರ್ನಾಟಕ ರಕ್ಷಣಾ ವೇದಿಕೆ ( ನಾರಾಯಣ ಗೌಡ ) ಬಣ, ಸೇಡಂ ತಾಲೂಕ ಮಹಿಳಾ ಘಟಕ ಅಧ್ಯಕ್ಷರಾಗಿ ಶರಣಮ್ಮ ಅವರನು ನೇಮಕ ಮಾಡಿ ಆದೇಶ ಪತ್ರವನ್ನು ನೀಡಿ ಕನ್ನಡ ನಾಡು ನುಡಿ ಗಾಗಿ ತಮ್ಮ ಸಮಯವನ್ನು ಮೂಡಿಪಾಗಿಡಬೇಕೆಂದು ತಾಲೂಕು ಅಧ್ಯಕ್ಷ ಮೌನೇಶ್ ಬೆನಕನಹಳ್ಳಿ ಮಾತನಾಡಿದರು.

ಈ ಸಂದರ್ಭದಲ್ಲಿ, ಜಿಲ್ಲಾ ಮಹಿಳಾ ಘಟಕದ ಶ್ರೀಮತಿ ನಿರ್ಮಲಾ ಹಾಗೂ ಕರವೇ ಪದಾಧಿಕಾರಿಗಳು ಇನ್ನಿತರರು ಇದ್ದರು.

## ಬೀದರ್ ಕಾರಾಗೃಹಕ್ಕೆ ಹೈ.ಕ.ವಿ ಹೋರಾಟಗಾರ ಶಾಮಲಾಲ ಅವರ ಹೆಸರಿಡಿ: ಈಶ್ವರಸಿಂಗ್ ಠಾಕೂರ್



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಬೀದರ್ ಜಿಲ್ಲಾ ಕಾರಾಗೃಹಕ್ಕೆ ಹೈದ್ರಾಬಾದ್ ಕರ್ನಾಟಕ ವಿಮೋಚನಾ ಸಂದರ್ಭದಲ್ಲಿ ನಿಜಾಮರ ಜೊತೆ ಹೋರಾಡಿ ಹುತಾತ್ಮರಾದ ಶಾಮಲಾಲ ಅವರ ಹೆಸರಿಡಬೇಕೆಂದು ಸ್ಥಳಿಯ ಬಿಜೆಪಿ ಮುಖಂಡರು ಹಾಗೂ ವಿಶ್ವ ಹಿಂದು ಪರಿಷತ್ ನ ಪ್ರಮುಖರಾದ ಈಶ್ವರಸಿಂಗ್ ಠಾಕೂರ್ ಹೇಳಿದರು.

ನಗರದ ಬೀದರ್-ಉದಗಿರ ರಸ್ತೆಯಲ್ಲಿರುವ ಜಿಲ್ಲಾ ಕಾರಾಗೃಹದಲ್ಲಿ ರವಿವಾರ ಸ್ವತಂತ್ರ ಹೋರಾಟಗಾರರು ಹಾಗೂ ಹೈದ್ರಾಬಾದ್ ಕರ್ನಾಟಕ ವಿಮೋಚನಾ ಹೋರಾಟದಲ್ಲಿ ಧುಮುಕಿ ಈ ಭಾಗದ ಸ್ವತಂತ್ರಕ್ಕಾಗಿ ತಮ್ಮ ಪ್ರಾಣ ಬಲಿದಾನ ಮಾಡಿದ ಶಾಮಲಾಲ ಹಾಗೂ ಬನ್ಸಿಲಾಲ್ ಅವರ ಹುತಾತ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಅವರು ಮಾತನಾಡಿದರು.

ಶಾಮಲಾಲ ಅವರು 1903ರಲ್ಲಿ ಭಾಲ್ಕಿ ತಾಲೂಕಿನ ಅಂಬೆಸಾಂಗವಿ ಗ್ರಾಮದಲ್ಲಿ ಜನಿಸಿದರು. ತಮ್ಮ ಸೋದರಮಾವನ ಊರಾದ ಹಳ್ಳಿಖೇಡ್(ಬಿ) ದಲ್ಲಿ ವಿದ್ಯಾಭ್ಯಾಸ ಮಾಡಿದರು. ಉನ್ನತ ವ್ಯಾಸಾಂಗವನ್ನು ಪಾಕಿಸ್ತಾನದಲ್ಲಿರುವ ಲಾಹೋರನಲ್ಲಿ ಮುಗಿಸಿದರು. ಹೈಕೋರ್ಟ್‌ನಲ್ಲಿ ವಕೀಲ ವೃತ್ತಿ ಆರಂಭಿಸಿದ ಅವರು, ಸ್ವತಂತ್ರ ಸಂಗ್ರಾಮದಲ್ಲಿ ಹೋರಾಡಿದ್ದರು. ನಂತರ ಈ ಭಾಗದಲ್ಲಿ ಆರ್ಯ ಸಮಾಜ ಫಂಡೇಶನ್ ಸ್ಥಾಪನೆ ಮಾಡುವಲ್ಲಿ ಪ್ರಮುಖ ಕಾರಣಿಕರ್ತರಾದ ಅವರು, ಹೈದ್ರಾಬಾದ್ ಕರ್ನಾಟಕ ವಿಮೋಚನಾ ಚಳುವಳಿಯಲ್ಲಿ ಹೋರಾಟ ಮಾಡಿದ ಮೊದಲ ಹೋರಾಟಗಾರರೆಂಬ ಖ್ಯಾತಿಗೆ ಪಾತ್ರರಾದರು. ಹುಮನಾಬಾದ್‌ನಲ್ಲಿ ಶಿವಚಂದ್ರ ಆರ್ಯ, ಬಸವಕಲ್ಯಾಣದಲ್ಲಿ ಧಮಧಪ್ರಕಾಶ, ಗುಂಜಾಟಿಯಲ್ಲಿ ದೇವಿಪ್ರಕಾಶ ಸೇರಿದಂತೆ ಇತರೊಡಗೂಡಿ ಈ ಫೌಂಡೇಶನ್ ಹುಟ್ಟು ಹಾಕಿ ಹೋರಾಟಕ್ಕಿಳಿದಿದ್ದರು. ವಿಜಯದಶಮಿ ದಿನದಂದು ಮಹಾರಾಷ್ಟ್ರದ ಉದಗಿರದಲ್ಲಿ ಭಾಲಿ, ಭರ್ಚಿ ಹಿಡಿದು ಮೆರವಣಿಗೆ ಮೂಲಕ ನಿಜಾಮನ ವಿರೂದ್ಧ ಯುದ್ಧದ ರಣಕಹಳೆ ಊದಿದರು. ದೇಶದ್ರೋಹದ ಆರೋಪದ ಮೇಲೆ ಅವರನ್ನು ಬಂಧಿಸಿ ಬೀದರ್ ಕಾರಾಗೃಹದಲ್ಲಿರಿಸಿದರು. ಅವರಿಗೆ ಕೊಡುವ ಊಟದಲ್ಲಿ ಸಿಮೆಂಟ್ ಬೆರೆಸಿ ಕೊಡುತ್ತಿದ್ದರು. ಅನ್ನದಲ್ಲಿ ಗಾಜು ಸೇರಿಸಿ ಬಡಿಸುತ್ತಿದ್ದರು. ಹೀಗೆ ನಿತ್ಯ ನಿರಂತರ ಅವರಿಗೆ ಚಿತ್ರೆ ಹಿಂಸೆ ಕೊಟ್ಟು ಸಾವಿನಂಚಿಗೆ ತಂದು ನಿಲ್ಲಿಸಿದರು. ಅವರಿಗೆ ಭೇಟಿ ಮಾಡಲು ಸಹ ಯಾರನ್ನು ಜೈಲಿನೊಳಕ್ಕೆ ಬಿಡುತ್ತಿರಲಿಲ್ಲ. ಹೀಗೆ 1939ರ ಫೆಬ್ರವರಿ 23ರಂದು ಬೀದರ್ ಜೈಲಿನಲ್ಲಿಯೇ ವೀರಮರಣವನ್ನಪ್ಪಿದರು. ಅವರ ಶವವನ್ನು ಒಂದು ಲಾರಿಯಲ್ಲಿ ಸಾಗಿಸಿ ಸೋಲಾಪುರಕ್ಕೆ ಕಳುಹಿಸಿ ಕೊಡಲಾಯಿತು. ಸೋಲಾಪುರದಲ್ಲಿ ಲಕ್ಷಾಂತರ ಜನರ ಮಧ್ಯ ಅವರ ಅಂತ್ಯ ಸಂಸ್ಕಾರ ಜರುಗಿತ್ತು. ಈ ಭಾಗದ ಸ್ವತಂತ್ರಕ್ಕಾಗಿ ಹೋರಾಡಿ ಬೀದರ್ ಕಾರಾಗೃಹದಲ್ಲಿ ತಮ್ಮ ಪ್ರಾಣ ಬಲಿದಾನ ಮಾಡಿದ ಕಾರಣಕ್ಕಾಗಿ ಅವರು ಇದ್ದ ಕೊಠಡಿಯನ್ನು ಶಾಮಲಾಲ್ ಮ್ಯುಜಿಯಮ್ ಮಾಡಬೇಕೆಂದು ಠಾಕೂರ್ ಆಗ್ರಹಿಸಿದರು.

ಮಾಜಿ ಜಿಲ್ಲಾ ಪಂಚಾಯತ ಸದಸ್ಯರಾದ ರಾಜಶೇಖರ ನಾಗಮೂರ್ತಿ ಮಾತನಾಡಿ, ಶಾಮಲಾಲ್ ದಕ್ಷಿಣ ಭಾರತದ ಭಗತಸಿಂಗ್ ಎಂದರೂ ತಪ್ಪಾಗಲಾರದು. ಶಾಮಲಾಲ್ ಹಾಗೂ ಅವರ ಸಹೋದರ ಬನ್ಸಿಲಾಲ್ ಅವರು ನಿಜಾಮನ ವಿರೂದ್ಧ ಹೋರಾಡಿ ಈ ಭಾಗಕ್ಕೆ ಸ್ವತಂತ್ರ ತಂದು ಕೊಡುವಲ್ಲಿ ಮುಖ್ಯ ಪಾತ್ರಧಾರಿಗಳಾಗಿದ್ದರು. ಅವರ ತ್ಯಾಗ ಹಾಗೂ ಬಲಿದಾನ ದೇಶದ ಎಲ್ಲ ಮೂಲೆ ಮೂಲೆಗಳಲ್ಲಿ ಆಚರಿಸುತ್ತಾರೆ. ಆದರೆ ದೀಪದ ಬುಡದಲ್ಲಿಯೇ ಕತ್ತಲು ಇರುತ್ತದೆ ಎಂಬ ಹಾಗೆ ನಮ್ಮ ಭಾಗದಲ್ಲಿ ಅವರ ಚರಿತ್ರೆ ಗೊತ್ತಿಲ್ಲ. ಹಾಗಾಗಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ಅವರ ಸ್ಮರಣೆಗಾಗಿ ದತ್ತಿ ನಿಧಿ ಸ್ಥಾಪಿಸಬೇಕು, ರಾಜ್ಯ ಸರ್ಕಾರದ ಪಠ್ಯದಲ್ಲಿ ಅವರ ಜೀವನ ಚರಿತ್ರೆಯುಳ್ಳ ಪಠ್ಯಕ್ರಮ ಅಧ್ಯಯನದ ವಸ್ತುವಾಗಿಸಬೇಕು ಎಂದರು.

ಈ ಸಂದರ್ಭದಲ್ಲಿ ಶಾಮಲಾಲ್ ಅವರಿಗೆ ಇರಿಸಲಾಗಿದ್ದ ಕಾರಾಗೃಹದ ಕೊಣೆಯಲ್ಲಿ ಅವರ ಭಾವಚಿತ್ರ ಅಳವಡಿಸಲಾಯಿತು. ನಂತರ ವೇದಿಕೆ ಕಾರ್ಯಕ್ರಮ ಮುಂದುವರೆಯಿತು. ಶಾಮಲಾಲ ವಂಶಸ್ತರಾದ ಸುಬೋದ್ ಲಕ್ಷ್ಮಣರಾವ ತಮ್ಮ ದೊಡ್ಡಪ್ಪ ಶಾಮಲಾಲ್ ಅವರನ್ನು ನೆನೆದು ಭಾವುಕರಾದರು. ಸುಭಾಷ ಅಷ್ಟಿಕರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕ ರಮೇಶಕುಮಾರ ಪಾಂಡೆ ಅವರ ಧರ್ಮಪತ್ನಿ ಲಕ್ಷ್ಮೀ ಪಾಂಡೆ, ನರೇಂದ್ರ ಶಿಂಧೆ, ಬಲರಾಜ ಕಂಧಾರೆ, ದಿಲೀಪ ಕಂಧಾರೆ, ನಾರಾಯಣ ಚಿದ್ರಿ, ಕಲಾವತಿ ಆರ್ಯ, ಭುಜಂಗರಾವ ಆರ್ಯ, ಶಿವಾಜಿರಾವ ಕುಶನೂರ್, ನರಸಿಂಗರಾವ ಆರ್ಯ, ಅರ್ಜುನರಾವ, ಡಾ.ವಿಶ್ವನಾಥ ಉಪ್ಪೆ, ವೆಂಕಟಶಾಲಿ ಚಿದ್ರಿ, ರೂಪೇಂದ್ರ ತೋಡೆ ಹಾಗೂ ಇತರರು ಅತಿಥಿಗಳಾಗಿ ಭಾಗವಹಿಸಿದ್ದರು. ಜೈಲಾಧಿಕಾರಿ ಸೋಮಶೇಖರ ಅಂಗಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

## ಮಹಾಶಿವರಾತ್ರಿಯಂದು ಕೊಡ್ಲಾ ಗ್ರಾಮದ ಮಲ್ಲಯ್ಯ ಗುಡ್ಡದ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ

ಸೇಡಂ: ಫೆ, 24: ತಾಲೂಕಿನ ಕೊಡ್ಲಾ ಗ್ರಾಮದಲ್ಲಿ, ಜೈ ಭಾರತ ಮಾತಾ ಸೇವಾ ಸಮಿತಿ (ರಿ) ನವ ದೆಹಲಿ ಪರಮ ಪೂಜ್ಯ ಶ್ರೀ ಡಾ॥॥ ಹವಾ ಮಲ್ಲಿನಾಥ ಮಹಾರಾಜರು ನಿರಗುಡಿ ಶ್ರೀಗಳ ಘನ ನೇತೃತ್ವದಲ್ಲಿ, ಬುಧುವಾರ, ದಿ, 26/02/2025 ರ ಮಹಾಶಿವರಾತ್ರಿಯಂದು ಕೊಡ್ಲಾ ಗ್ರಾಮ ಶ್ರೀ ಮಲ್ಲಯ್ಯ ಗುಡ್ಡದ 4 ನೇ ಜಾತ್ರಾ ಮಹೋತ್ಸವ ಹಾಗೂ ಶ್ರೀ ಹವಾ ಮಲ್ಲಿನಾಥ ಲಿಂಗಕ್ಕೆ ಮಹಾ ರುದ್ರಾಭಿಷೇಕ ಮತ್ತು ಮಹಾ ಮಂಗಳಾರತಿ, ಪಲ್ಲಕ್ಕಿ ಉತ್ಸವ ನೆರವೇರಲಿದೆ.



ಈ ಕಾರ್ಯಕ್ರಮಕ್ಕೆ ವಿವಿಧ ಮಠಾಧಿಶರು ಹಾಗೂ ತಾಲ್ಲೂಕಿನ ಹಿರಿಯ ರಾಜಕಾರಣಿಗಳು, ಗ್ರಾಮದ ಹಿರಿಯ ಮುಖಂಡರು, ರೈತರು ಆಗಮಿಸಲಿದ್ದಾರೆ. ಹಾಗೂ ಪರಮ ಪೂಜ್ಯ ಶ್ರೀ ಡಾ ॥ ಹವಾ ಮಲ್ಲಿನಾಥ ಮಾಹಾರಾಜರು ನಿರಗುಡಿ ಶ್ರೀಗಳ ದರ್ಶನ ಬಾಗ್ಯ ಲಭಿಸಲಿದೆ. ಎಂದು ಶ್ರೀ ಕೊಡ್ಲಾ ಕ್ಷೇತ್ರದ ಭಕ್ತರು ತಿಳಿಸಿದ್ದಾರೆ.

## ಅನ್ನಭಾಗ್ಯ ಯೋಜನೆ: ಫೆಬ್ರವರಿ- ಮಾರ್ಚ್ ತಿಂಗಳ ಅಕ್ಕಿ ಏಕಕಾಲದಲ್ಲಿ ವಿತರಣೆ; ಕೆ.ಎಚ್. ಮುನಿಯಪ್ಪ

ಮಲ್ಲಮ್ಮ ನುಡಿ ವಾರ್ತೆ



ಕೋಲಾರ: ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಅನ್ನಭಾಗ್ಯ ಯೋಜನೆಯಡಿ ಅಕ್ಕಿಯನ್ನು ಫಲಾನುಭವಿಗಳಿಗೆ ಒಟ್ಟಿಗೆ ವಿತರಿಸಲಾಗುವುದು, ಈ ನಿಟ್ಟಿನಲ್ಲಿ ವಿತರಕರಿಗೆ ಈಗಾಗಲೇ ಸೂಚನೆಗಳನ್ನು ರವಾನಿಸಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ಹೇಳಿದ್ದಾರೆ.

ಕೇಂದ್ರ ಸರ್ಕಾರ ರಾಜ್ಯಕ್ಕೆ ಅಕ್ಕಿ ಮಾರಾಟ ಮಾಡಲು ಒಪ್ಪಿಕೊಂಡಿದ. ಆದ್ದರಿಂದ ಕರ್ನಾಟಕವು ಪ್ರತಿ ಕೆಜಿಗೆ 22.5 ರೂ. ಪಾವತಿಸುತ್ತದೆ, ಸಾಗಣೆ ವೆಚ್ಚ ಪ್ರತಿ ಕೆಜಿಗೆ 2.50 ರೂ. ಖರ್ಚು ತಗಲುತ್ತದೆ, ಹೀಗಾಗಿ ಪ್ರತಿ ಕೆಜಿ ಅಕ್ಕಿಗೆ ರಾಜ್ಯಕ್ಕೆ ಕೆಜಿಗೆ 25 ರೂ. ವೆಚ್ಚವಾಗುತ್ತದೆ ಎಂದು ತಿಳಿಸಿದ್ದಾರೆ. ಈ ಯೋಜನೆಯಡಿ ಪ್ರತಿ ತಿಂಗಳು 2.10 ಲಕ್ಷ ಟನ್ ಅಕ್ಕಿ ಅಗತ್ಯವಿದೆ ಎಂದು ಮುನಿಯಪ್ಪ ಹೇಳಿದರು, ಇದು 4 ಕೋಟಿ ಜನರಿಗೆ ಪ್ರಯೋಜನ ನೀಡುತ್ತದೆ.

"ಐದು ಖಾತರಿ ಯೋಜನೆಗಳು ಮತ್ತು ರಾಜ್ಯಾದ್ಯಂತ ಕೈಗೊಳ್ಳಲಾಗುತ್ತಿರುವ ಅಭಿವೃದ್ಧಿ ಕಾರ್ಯಗಳು ಜನರಿಗೆ ವರದಾನವಾಗಿ ಬದಲಾಗುತ್ತಿವೆ. ಐದು ಖಾತರಿಗಳಿಗೆ ಸಂಪೂರ್ಣ ಹಣ ಹೋಗುತ್ತಿರುವುದರಿಂದ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ಹಣವಿಲ್ಲ ಎಂದು ವಿರೋಧ ಪಕ್ಷಗಳು ಗದ್ದಲ ಎಬ್ಬಿಸುತ್ತಿವೆ ಎಂದು ಆರೋಪಿಸಿದರು. ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ನೋಡಿ ವಿರೋಧ ಪಕ್ಷಗಳು ಈಗ ಮೌನವಾಗಿವೆ. ಅವರು ಯಾವುದೇ ಹೇಳಿಕೆಗಳನ್ನು ನೀಡುತ್ತಿಲ್ಲ ಎಂದರು.

ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಗಳ ಕುರಿತು ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವು ತುಂಬಾ ಬಲಿಷ್ಠವಾಗಿದೆ ಮತ್ತು ಜನರು ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸುತ್ತಾರೆ ಎಂದು ವಿಶ್ವಾಸ ವ್ಯಕ್ತ ಪಡಿಸಿದರು,

## ಇಷ್ಟವಿರಲಿ ಬಿಡಲಿ, ಮೇ ತಿಂಗಳಿನಲ್ಲಿ ಬಿಬಿಎಂಪಿ ಚುನಾವಣೆ ನಡೆಯಲೇಬೇಕು: ಸಚಿವ ರಾಮಲಿಂಗಾ ರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ನಮಗೆ ಇಷ್ಟವಿರಲಿ ಅಥವಾ ಇಲ್ಲದಿರಲಿ ಈ ಮೇ ತಿಂಗಳಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಚುನಾವಣೆಯನ್ನು ನಡೆಸಲೇಬೇಕು ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಹೇಳಿದ್ದಾರೆ.



ಸೆಪ್ಟೆಂಬರ್ 2020 ರಿಂದ ಬೆಂಗಳೂರಿನಲ್ಲಿ ಬಿಬಿಎಂಪಿಗೆ ಚುನಾವಣೆ ನಡೆದಿಲ್ಲ. ಎಸ್ ಎಂ ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗ 2001 ರಲ್ಲಿ ಸಮಯಕ್ಕೆ ಸರಿಯಾಗಿ ಚುನಾವಣೆಗಳು ನಡೆದಿತ್ತು. 2015 ರಲ್ಲಿ ಹಿಂದಿನ ಸಿದ್ದರಾಮಯ್ಯ ಸರ್ಕಾರದ ಅಡಿಯಲ್ಲಿ, "2008 ರಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ, ಚುನಾವಣೆಗಳು 2.8 ವರ್ಷಗಳಷ್ಟು ವಿಳಂಬವಾಗಿತ್ತು. ವಿಳಂಬದ ಬಗ್ಗೆ ಕಾಂಗ್ರೆಸ್ ಸರ್ಕಾರವನ್ನು ಸಮರ್ಥಿಸಿಕೊಂಡ ರೆಡ್ಡಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನು ರಚಿಸುವ ಸರ್ಕಾರದ ಯೋಜನೆಗಳಿಂದಾಗಿ ಚುನಾವಣೆ ಮುಂದೂಡಿಕೆಯಾಗಿದೆ ಎಂದು ಹೇಳಿದರು.

ನಾವು ಇಷ್ಟಪಡುತ್ತೇವೋ ಇಲ್ಲವೋ, ಮೇ ತಿಂಗಳಲ್ಲಿ ಚುನಾವಣೆ ನಡೆಸಲೇಬೇಕು. ಇಲ್ಲದಿದ್ದರೆ, ಸುಪ್ರೀಂ ಕೋರ್ಟ್ ನಿರ್ದೇಶನ(ಚುನಾವಣೆ ನಡೆಸಲು) ನೀಡುತ್ತದೆ" ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಕಳೆದ ವರ್ಷ ಜುಲೈನಲ್ಲಿ, ಗ್ರೇಟರ್ ಬೆಂಗಳೂರು ಆಡಳಿತ ಮಸೂದೆಯನ್ನು ಶಿವಾಜಿನಗರ ಕಾಂಗ್ರೆಸ್ ಶಾಸಕ ರಿಜ್ವಾನ್ ಅರ್ಷದ್ ನೇತೃತ್ವದ ಜಂಟಿ ಆಯ್ಕೆ ಸಮಿತಿಗೆ ಉಲ್ಲೇಖಿಸಲಾಗಿತ್ತು.

ಸಮಿತಿಯು ಸೋಮವಾರ ವಿಧಾನಸಭಾ ಸ್ಪೀಕರ್ ಯು ಟಿ ಖಾದರ್ ಅವರಿಗೆ ತನ್ನ ವರದಿಯನ್ನು ಸಲ್ಲಿಸುವ ಸಾಧ್ಯತೆಯಿದೆ. ಗ್ರೇಟರ್ ಬೆಂಗಳೂರು ಆಡಳಿತ ಮಸೂದೆಯು ಬೆಂಗಳೂರಿನಲ್ಲಿ 10 ಮುನ್ಸಿಪಲ್ ಕಾರ್ಪೊರೇಷನ್‌ಗಳ ರಚನೆಗೆ ಅವಕಾಶ ನೀಡುತ್ತದೆ. ನಾವು ಬೆಂಗಳೂರಿನ ಜನರಿಗೆ ಸೇವೆ ಸಲ್ಲಿಸಲು ಬಯಸಿದರೆ, ಒಂದೇ ನಿಗಮ ಖಂಡಿತವಾಗಿಯೂ ಸಾಕಾಗುವುದಿಲ್ಲ. ಒಬ್ಬ ಆಯುಕ್ತರು ಇಡೀ ನಗರವನ್ನು ಮೇಲ್ವಿಚಾರಣೆ ಮಾಡಲು ಸಾಧ್ಯವಿಲ್ಲ. ಸರಿಯಾದ ರಸ್ತೆಗಳು, ಬೀದಿ ದೀಪಗಳು, ಉದ್ಯಾನವನಗಳು, ಆಟದ ಮೈದಾನಗಳು ಮತ್ತು ಮಳೆನೀರಿನ ಚರಂಡಿಗಳನ್ನು ನಿರ್ವಹಿಸಲು ನಮಗೆ ಎರಡು ಅಥವಾ ಮೂರು ನಿಗಮಗಳು ಬೇಕಾಗುತ್ತವೆ" ಎಂದು ಅವರು ಹೇಳಿದರು.

## ನಾವು ಯಾವ ರೀತಿ ಯೋಚಿಸುತ್ತೇವೊ ಹಾಗೆ ಆಗುತ್ತೇವೆ: ಬಿ.ಕೆ ಶಕ್ತಿರಾಜ ಭಾಯಿಜಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಫೆ.23: ಜೀವನದಲ್ಲಿ ನಾವು ಯಾವ ರೀತಿ ಯೋಚಿಸುತ್ತೇವೆಯೊ ಹಾಗೆ ನಾವು ರೂಪಗೊಳ್ಳುತ್ತೇವೆ ಎಂದು ರಾಜಸ್ಥಾನ ಮೌಂಟ್ ಅಬುದ ಅಂತರಾಷ್ಟ್ರಿಯ ಪ್ರೇರಣಾದಯಿ ಪ್ರವಚನಕಾರರಾದ ಬಿ.ಕೆ ಶಕ್ತಿರಾಜ ಭಾಯಿಜಿ ಹೇಳಿದರು.

ಶನಿವಾರ ಬೆಳಿಗ್ಗೆ ನಗರದ ಸಾಯಿ ಸ್ಕೂಲ್ ಅವರಣದಲ್ಲಿ ಬ್ರಹ್ಮಾಕುಮಾರಿಸ್ ಕೇಂದ್ರ ಪಾವನಧಾಮ ವತಿಯಿಂದ ಜಿಲ್ಲೆಯ ಯುವಜನರಿಗಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದರು.

ಊಟದ ಮೂಲಕ ನಾವು ಶರೀರಕ್ಕೆ ಚಾರ್ಜ್ ಮಾಡಿದಂತೆ ಧ್ಯಾನ ಹಾಗೂ ಯೋಗದ ಮೂಲಕ ನಮ್ಮ ಮನಸ್ಸನ್ನು ಚಾರ್ಜ್ ಮಾಡಬೇಕು. ಅಂ-ದಾಗ ಮಾತ್ರ ನಮ್ಮ ಮನಸ್ಸು ನಮ್ಮ ನಿಯಂತ್ರಣದಲ್ಲಿರುತ್ತದೆ. ನಮ್ಮ ಮನಸ್ಸಿನ ನಿಯಂತ್ರಣ ಅನ್ಯರ ಕೈಯಲ್ಲಿರಿಸಿದರೆ ಜೀವನದಲ್ಲಿ ಸದಾ ದೈಹಿಕ ಹಾಗೂ ಮಾನಸಿಕವಾಗಿ ದುಖತ್ರಪ್ತರಾಗುತ್ತೇವೆ ಎಂದರು.

ಜೀವನದಲ್ಲಿ ಯಶಸ್ಸು ಕಾಣಬೇಕಾದರೆ ನಾವು ಬಹಳಷ್ಟು ಸಲ ಸೋಲುತ್ತೇವೆ. ಪದೆ ಪದೆ ಸೋಲು ನಮ್ಮ ಯಶಸ್ಸು ಪಕ್ವಗೊಳಿಸುತ್ತದೆ. ನಮ್ಮಲ್ಲಿ ಸಿಂಹದಷ್ಟು ಶಕ್ತಿ ಅಡಗಿದೆ ಎಂಬುದನ್ನು ನಾವು ನಮ್ಮ ಧೃಢಸಂಕಲ್ಪದಿಂದ ಅರಿತು ಕೊಳ್ಳಬೇಕು. ಅದಕ್ಕಾಗಿ ಮನಸ್ಸು ಹಾಗೂ ಬುದ್ದಿ ಚುರುಕಾಗಿರಬೇಕು. ಹಾಗದಾಗ ಎಂತಹ ತ್ಯಾಗ ಹಾಗೂ ಪರಾಕ್ರಮಕ್ಕೂ ಹೆದರುವುದಿಲ್ಲ ಎಂದವರು ಹೇಳಿದರು.

ಚಲನಚಿತ್ರದಲ್ಲಿ ನಟಿಸುವ ಹೀರೊಗಳು ಕೇವಲ ಪಾತ್ರಧಾರಿಗಳಷ್ಟೆ. ನಿಜ ಜೀವನದಲ್ಲಿ ನಮ್ಮ ತಂದೆ, ತಾಯಿ, ಗುರು, ದೇಶ ಕಾಯುವ ಸೈನಿಕರು ಹೀರೊಗಳು. ಅವರನ್ನು ಆರಾಧಿಸುವ ಹಾಗೂ ಅವರ ಬಗ್ಗೆ ನಮ್ಮ ಅಭಿಮಾನ ಇದ್ದಾಗ ಮಾತ್ರ ನಾವು ಸರಿಯಾದ ದಾರಿಯಲ್ಲಿ ಮುನ್ನಡೆಯುತ್ತಿದ್ದೇವೆ ಎಂಬ ಭಾವ ಜಾಗೃತಗೊಳ್ಳುತ್ತದೆ ಎಂದು ಶಕ್ತಿರಾಜ ಭಾಯಿಜಿ ತಿಳಿಸಿದರು.

ಜ್ಞಾನಸುಧಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಪೂರ್ಣಿಮಾ ಜಾರ್ಜ್, ಬಿ.ವಿ ಭೂಮರೆಡ್ಡಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ಪಿ.ವಿ ವಿಠಲರೆಡ್ಡಿ, ಬ್ರಹ್ಮಾಕುಮಾರಿಸ್ ಕೇಂದ್ರ ಪಾವನಧಾಮದ ಸಂಚಾಲಕಿ ಬಿ.ಕೆ ಪ್ರತಿಮಾ ಬಹೆಂಜಿ, ಹಿರಿಯ ರಾ-ಜಯೋಗ ಶಿಕ್ಷಕಿ ಬಿ.ಕೆ ಗುರುದೇವಿ ಅಕ್ಕನವರು, ನಾಸಿಕ್‌ನ ಶಾಸ್ತ್ರಿಯ ಸಂಗೀತ ಕಲಾವಿದರಾದ ಬಿ.ಕೆ ಓಂಕಾರ ಭಾಯಿ ವೇದಿಕೆಯಲ್ಲಿದ್ದು ದೀಪ ಪ್ರಜ್ವಲನೆ ಮಾಡಿದರು. ಬಿ.ಕೆ ಜ್ಯೋತಿ ಬಹೆನ್ ಕಾರ್ಯಕ್ರಮ ನಿರೂಪಿಸಿದರು. ನಗರದ ಶಾಹಿನ್ ಕಾಲೇಜು ಸೇರಿದಂತೆ ವಿವಿಧ ಶಾಲಾ, ಕಾಲೇಜುಗಳ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿದ್ದರು.

# ಕುಮಾರೇಶ್ವರ ಆಸ್ಪತ್ರೆಯಲ್ಲಿ ಸೂಪರ್ ಸ್ಪೇಶಾಲಿಟಿ ಕ್ಲಿನಿಕ್ ಪ್ರಾರಂಭ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಫೆ.24:ನಗರದ ಕುಮಾರೇಶ್ವರ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆ ರಹಿತ ಲೇಜರ್ ಚಿಕಿತ್ಸೆಯ ಇಂಟರ್‌ವೆನ್ಶನಲ್ ರೇಡಿಯೋಲಾಜಿಸುಪರ್‌ಸ್ಪೇಶ್ಯಾಲಿಟಿ ಕ್ಲಿನಿಕ್‌ನ್ನು ತೆರೆಯಲಾಗಿದೆ ಎಂದು ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದರು.

ಬಿವಿವಿಸಂಘದಎಸ್.ನಿಜಲಿಂಗಪ್ಪ ವೈದ್ಯಕೀಯಮಹಾವಿದ್ಯಾಲಯದ ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯಲ್ಲಿ ಸೋಮವಾರ ರೇಡಿಯೊಡೈಗ್ನೋಸಿಸ್ ಮತ್ತು ಇಮೇಜಿಂಗ್ ವಿಭಾಗದಲ್ಲಿ ಇಂಟರ್‌ವೆನ್ಶನಲ್‌ರೇಡಿಯೋಲಾಜಿ ಸುಪರ್‌ಸ್ಪೇಶ್ಯಾಲಿಟಿ ಕ್ಲಿನಿಕ್ ಎಂಬ ನೂತನ ಒ.ಪಿ.ಡಿ ಉದ್ಘಾಟನೆ ಮಾಡಿ ಅವರು ಮಾತನಾಡಿದರು.

ಈ ಭಾಗದ ಜನರಿಗಾಗಿ ಅತ್ಯಾಧುನಿಕ ಇಂಟರ್‌ವೆನ್ಶನಲ್ ರೇಡಿಯೋಲಾಜಿ ಸುಪರ್ ಸ್ಪೇಶ್ಯಾಲಿಟಿಕ್ಲಿನಿಕ್‌ತೆರೆಯಲಾಗಿದ್ದು ದೀರ್ಘಕಾಲದ ನರಗಳ ಮತ್ತು ಮಾಂಸಖಂಡಗಳ ನೋವಿಗೆ ಶಸ್ತ್ರಚಿಕಿತ್ಸೆ ರಹಿತ ಉಪಶಮನ ಮಾಡುವಂತಹ ಚಿಕಿತ್ಸೆಗಳು ಇಲ್ಲಿ ದೊರೆಯಲಿದ್ದು ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಚರಂತಿಮಠ ಹೇಳಿದರು.

ಉಬ್ಬಿರುವ ನರಗಳ ಲೇಜರ್ ಹಾಗೂ ಗ್ಲೂ ಚಿಕಿತ್ಸೆ, ಶಸ್ತ್ರಚಿಕಿತ್ಸೆ ರಹಿತ ಥೈರಾಯ್ಡ್ ಗಂಟುಗಳ ಚಿಕಿತ್ಸೆ, ಕೈ, ಕಾಲು, ಮತ್ತು ಇತರೆ ಅಂಗಾಂಗಗಳಲ್ಲಿ ಹೆಪ್ಪುಗಟ್ಟಿದ ರಕ್ತನಾಳಗಳ ಚಿಕಿತ್ಸೆ, ಗರ್ಭಾಶಯದ ಫೈಬ್ರಾಯ್ಡ್, ರಕ್ತನಾಳಗಳ ಎಂಜಿಯೋಪ್ಲಾಸ್ಟಿ ಮತ್ತುಸ್ಟೆಂಟಿಂಗ್,ಪಾರ್ಶ್ವವಾಯು (ಲಕ್ವಾ) ಮತ್ತು ಮೆದುಳಿನ ರಕ್ತನಾಳಗಳ ಚಿಕಿತ್ಸೆ, ಶಸ್ತ್ರಚಿಕಿತ್ಸೆ ರಹಿತ ಲಿವರ್, ಶ್ವಾಸಕೋಶ ಮತ್ತುಮೂತ್ರಪಿಂಡದಗಡ್ಡೆಗಳ ಚಿಕಿತ್ಸೆ(ಟೇಸ್,ಅಬ್ಲೇಶನ್) ಈ ಎಲ್ಲಾ ಚಿಕಿತ್ಸಾ ಸೌಲಭ್ಯಗಳು ಇಲ್ಲಿ ದೊರೆಯಲಿವೆ ಎಂದು ರೇಡಿಯೋಲಾಜಿ ವಿಭಾಗದ ಮುಖ್ಯಸ್ಥ ಡಾ.ರುದ್ರೇಶ ಎಸ್. ಹಾಲವರ ಮತ್ತು ಡಾ.ರವಿ ಎನ್.ಕರಿಸ್ಯೆಯುಪ್ಪನವರ ತಿಳಿಸಿದರು.

ಅತ್ಯಾಧುನಿಕಉಪಕರಣಗಳನ್ನು ಹೊಂದಿರುವ ಹಾಗೂ ನುರಿತ ತಜ್ಞವೈದ್ಯರನ್ನು ಒಳಗೊಂಡ ಸುಸಜ್ಜಿತವಾದ ಈ ಕ್ಲಿನಿಕ್ ಸಾರ್ವಜನಿಕರ ಸೇವೆಗೆ ಇಂದಿನಿಂದ ಪ್ರಾರಂಭಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಬಿ.ವ್ಹಿ.ವ್ಹಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ಬಿ.ವ್ಹಿ.ವ್ಹಿಸಂಘದಆಡಳಿತಾಧಿಕಾರಿ ವ್ಹಿ.ಆರ್.ಶಿರೋಳ,ವೈದ್ಯಕೀಯ ಅಧೀಕ್ಷಕಡಾ.ಶ್ರೀರಾಮ ಕೋರಾ ಹಾಗೂ ಸಿಬ್ಬಂದಿ ಮತ್ತು ಕಾಲೇಜಿನ ವಿವಿಧ ವಿಭಾಗದ ಮುಖ್ಯಸ್ಥರು,ಬೋಧಕವೃಂದ ಉಪಸ್ಥಿತರಿದ್ದರು.

# ರಾಷ್ಟ್ರಮಟ್ಟದ ಸ್ಪರ್ಧೆಗೆ ಆಯ್ಕೆ: ನೌಕರರ ಸಂಘ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಫೆ.24:ರಾಷ್ಟ್ರಮಟ್ಟದ ಜಾನಪದ ಸಮೂಹ ಗಾಯನ ಸ್ಪರ್ಧೆಗೆ ಆಯ್ಕೆಯಾದ ಜಿಲ್ಲೆಯ ಸರ್ಕಾರಿ ನೌಕರರ ಜಾನಪದ ಸಮೂಹ ಗಾಯನ ತಂಡದ ಸದಸ್ಯರನ್ನು ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ನಗರದಲ್ಲಿ ಭಾನುವಾರ ಸನ್ಮಾನಿಸಲಾಯಿತು.

ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಅವರು ಶಾಲು ಹೊದಿಸಿ, ಹೂಮಾಲೆ ಹಾಕಿ ಸತ್ಕರಿಸಿದರು. ರಾಷ್ಟ್ರಮಟ್ಟದ ಸ್ಪರ್ಧೆಗೆ ಶುಭ ಹಾರೈಸಿದರು.

ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿ, ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಶಿಕ್ಷಣ ಇಲಾಖೆ ನೌಕರರ ಭಾನುಪ್ರಿಯ ಅರಳಿ ನೇತೃತ್ವದ ತಂಡದಲ್ಲಿ ಸಾರಿಕಾ ಗಂಗಾ, ದೀಪಾ ಕಿರಣ್, ರೇಣುಕಾ, ನರಸಮ್ಮ, ಮಲ್ಲಮ್ಮ, ಭಾಗ್ಯಲಕ್ಷ್ಮಿ ಗುರುಮೂರ್ತಿ, ಚಂದ್ರಕಾಂತ ದಂಡೆ, ರಮೇಶ್ ಸೋನಾರೆ ಇದ್ದಾರೆ. ರಾಷ್ಟ್ರಮಟ್ಟದ ಸ್ಪರ್ಧೆ ಫೆ. 25 ರಿಂದ ಮಾರ್ಚ್ 3 ರ ವರೆಗೆ ಬಿಹಾರದ ಪಟ್ನಾದಲ್ಲಿ ನಡೆಯಲಿದೆ.

ನೌಕರರ ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ಸೂರ್ಯಕಾಂತ ಬಿರಾದಾರ, ಡಾ. ಗೌತಮ ಅರಳಿ, ಅಶೋಕ್, ಕಿರಣ್, ದಿಗಂಬರ, ಮಹೇಶ ಪಾಟೀಲ, ಕಿರಣ್ ಗುರುಮೂರ್ತಿ ಹಾಜರಿದ್ದರು.

ಇದೇ ವೇಳೆ ಜಿಲ್ಲೆಯ ಜಾನಪದ ಸಮೂಹ ಗಾಯನ ತಂಡದ ಸದಸ್ಯರು ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ವಾಹನದಲ್ಲಿ ಪಾಟ್ನಾಗೆ ಪ್ರಯಾಣ ಬೆಳೆಸಿದರು.

## ಸಾಧನೆಗೆ ಕಠಿಣ ಪರಿಶ್ರಮದ ಅಗತ್ಯತೆಯೂ ಇದೆ:ವೀರಣ್ಣ ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.24–ವ್ಯಕ್ತಿಯ ಸಾಧನೆಗೆ ಗುರುವಿನ ಮಾರ್ಗದರ್ಶನದ ಜೊತೆ ಕಠಿಣ ಪರಿಶ್ರಮದ ಅಗತ್ಯತೆಯೂ ಇದೆ ಎಂದು ಬಾಗಲಕೋಟೆ ಬಿವಿವಿ ಸಂಘದ ಕಾರ್ಯಾಧ್ಯಕ್ಷ, ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು. ಸಮೀಪದ ಹಳ್ಳೂರ ಗ್ರಾಮದಲ್ಲಿ ರವಿವಾರ ಜರುಗಿದ ಬಸವಶ್ರೀ ಶಿಕ್ಷಣ ಮತ್ತು ಗ್ರಾಮಾಭಿವೃದ್ಧಿ ಸಂಸ್ಥೆಯ ಮಾತೋಶ್ರೀ ನೀಲಮ್ಮ ಪೂರ್ವ ಪ್ರಾಥಮಿಕ ಹಾಗೂ ಮಾತೋಶ್ರೀ ಈರಮ್ಮ ರುದ್ರಗೌಡ ಪಾಟೀಲ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ವಿಜ್ಞಾನ ಪ್ರಯೋಗಾಲಯ ಕೊಠಡಿ ಉದ್ಘಾಟಿಸಿ ಅವರು ಮಾತನಾಡಿದರು. ಇಂದು ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ನಡೆಸುವುದೇ ಕಷ್ಟಕರವಾಗಿದ್ದು, ಬಸವಶ್ರೀ ಸಂಸ್ಥೆಯ ಅಧ್ಯಕ್ಷ ಎಸ್.ಎಸ್.ಜಿಗಳೂರ ಗ್ರಾಮೀಣ ಪ್ರದೇಶದಲ್ಲಿ ಆಂಗ್ಲ ಮಾಧ್ಯಮ ಶಾಲೆಯನ್ನು ಯಶಸ್ವಿಯಾಗಿ ನಡೆಸುತ್ತಿರುವುದು ಶ್ಲಾಘನೀಯ ಕಾರ್ಯ. ವಿದ್ಯಾರ್ಥಿಗಳು ಸತತ ಪರಿಶ್ರಮದ ಮೂಲಕ ಯಶಸ್ಸು ಸಾಧಿಸಿ ಉತ್ತಮ ಬದುಕು ಕಟ್ಟಿಕೊಳ್ಳಬೇಕು ಎಂದು ಚರಂತಿಮಠ ಹೇಳಿದರು.

ಸಾನಿಧ್ಯ ವಹಿಸಿದ್ದ ಬಿಲ್ ಕೆರೂರ ಬಿಲ್ವಾಶ್ರಮ ಹಿರೇಮಠದ ಸಿದ್ಧಲಿಂಗ ಶ್ರೀಗಳು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಇಂಗ್ಲೀಷ ಮಾಧ್ಯಮ ಶಾಲೆಯನ್ನು ನಡೆಸುವುದರ ಜೊತೆಗೆ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವನಿಟ್ಟಿನಲ್ಲಿ ವಿಜ್ಞಾನ ಪ್ರಯೋಗಾಲಯ ಪ್ರಾರಂಭಿಸುವುದು ಒಳ್ಳೆಯ ಕೆಲಸ. ಇದರ ಪ್ರಯೋಜನವನ್ನು ಮಕ್ಕಳು ಪಡೆದುಕೊಳ್ಳಬೇಕು ಎಂದರು. ಬೇವೂರಿನ ಗ್ಯಾನಪ್ಪಜ್ಜನವರು ಸಾನಿಧ್ಯ ವಹಿಸಿದ್ದರು. ಮಹೇಶ ಆಥಣಿ, ಗುರುಬಸವ ಸೂಳಿಭಾವಿ, ಡಾ.ಗಿರೀಶ ಸಂಗಮ, ನ್ಯಾಯವಾದಿ ಎಸ್.ಎಸ್.ಹಿರೇಮಠ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ, ಕ್ಷೇತ್ರಸಮನ್ವಯಾಧಿಕಾರಿ ಎಚ್.ಕೆ.ಗುಡೂರ, ಆರ್.ಸಿ.ಪಾಟೀಲ, ರಾಹುಲ್ ನಾಡಗೌಡ, ಮಹಾಂತೇಶ ಮಣಿನಾಗರ, ಸಂಸ್ಥೆಯ ಅಧ್ಯಕ್ಷ ಎಸ್.ಎಸ್. ಜಿಗಳೂರ, ಕಾರ್ಯದರ್ಶಿ ಎಂ.ಎಂ.ಕಮತರ, ಮುಖ್ಯ ಗುರುಮಾತೆ ವಿಜಯಲಕ್ಷ್ಮೀ ಹೂಗಾರ, ಕಲ್ಲಯ್ಯ ಪೂಜಾರಿ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಶಿಕ್ಷಣ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಸಾಧನೆಗೈದ ವಿಜಯ ಮಹಾಂತೇಶ ಬಂಗಾರಗುಂಡ, ನಿರ್ಮಲಾ ಅಂಬಿಗ, ಅನಿಲಗೌಡ ಪಾಟೀಲ, ಶಿವಾನಂದ ತುಪ್ಪದ, ಎಂ.ಬಿ.ಕಳ್ಳಿಗುಡ್ಡ ಸೇರಿದಂತೆ ಅನೇಕರನ್ನು ಸನ್ಮಾನಿಸಲಾಯಿತು.

# ನಾಳೆ ಬಸವ ಮಂಟಪದಲ್ಲಿ ಬೆ. 10 ಗಂಟೆಗೆ ಸಾಮೂಹಿಕ ಇಷ್ಟಲಿಂಗಪೂಜೆ : ಪಾಲ್ಗೊಳ್ಳಲು ಮಾತೆ ಸತ್ಯಾದೇವಿ ಕರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ: ಫೆ.24 : ನಾಳೆ ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಬೆ. 10 ಗಂಟೆಗೆ ರಾಷ್ಟ್ರೀಯ ಬಸವ ದಳ, ಲಿಂಗಾಯತ ಸಮಾಜ ಹಾಗೂ ಕ್ರಾಂತಿ ಗಂಗೋತ್ರಿ ಅಕ್ಕನಾಗಲಾಂಬಿಕಾ ಮಹಿಳಾ ಗಣದ ವತಿಯಿಂದ ಪ್ರತೀ ವರ್ಷದಂತೆ ಈ ವರ್ಷವೂ ಕೂಡಾ ಸಾಮೂಹಿಕ ಇಷ್ಟಲಿಂಗಪೂಜೆ ಹಮ್ಮಿಕೊಳ್ಳಲಾಗಿದೆ. ಶರಣ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಬಸವ ಮಂಟಪದ ಪೂಜ್ಯಶ್ರೀ ಸದ್ಗುರು ಮಾತೆ ಸತ್ಯಾದೇವಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು ಕಾರ್ಯಕ್ರಮದಲ್ಲಿ ಪ್ರಮುಖರಾದ ನಾಗಶೆಟ್ಟಿ ದಾಡಗಿ, ಶ್ರೀಕಾಂತ ಸ್ವಾಮಿ, ಹಾವಶೆಟ್ಟಿ ಪಾಟೀಲ, ಶಿವರಾಜ ಪಾಟೀಲ ಅತಿವಾಳ ಸೇರಿದಂತೆ ಸಾವಿರಾರು ಜನರು ಪಾಲ್ಗೊಳ್ಳಲಿದ್ದಾರೆ. ಆದ್ದರಿಂದ ಬಸವ ಭಕ್ತರು ಬಿಳಿ ಬಟ್ಟೆ, ಸ್ಕಾರ್ಫ್ ಧರಿಸಿಕೊಂಡು ಆಗಮಿಸಬೇಕೆಂದು ಮಾತಾಜಿ ಕೋರಿದ್ದಾರೆ.

# ಕುಂಭಮೇಳ ಯಾತ್ರಿಕರಿಗೆ ಸ್ವಗ್ರಾಮದಲ್ಲಿ ಅದ್ದೂರಿ ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.24: ತಾಲೂಕಿನ ಭಾತಂಬ್ರಾ ಗ್ರಾಮದಲ್ಲಿ ಕುಂಭಮೇಳ ಪ್ರವಾಸ ಯಶಸ್ವಿಯಾಗಿ ಪೂರ್ಣಗೊಳಿಸಿ ಮರಳಿದ ಪರಿವಾರದ ಸದಸ್ಯರಿಗೆ ಅದ್ದೂರಿಯಾಗಿ ಸ್ವಾಗತ ಕೋರಲಾಯಿತು.

ಗ್ರಾಮದಿಂದ ಕಳೆದ ಫೆ.7 ರಂದು 20 ಪರಿವಾರದ ಸದಸ್ಯರು, ಮಹಿಳೆಯರು, ಮಕ್ಕಳೊಂದಿಗೆ ಸುಮಾರು 40 ಮಂದಿ ಪ್ರಯಾಗರಾಜ್ ಪ್ರವಾಸ ಕೈಗೊಂಡಿದ್ದರು.

ಕುಂಭಮೇಳದಲ್ಲಿ ಎಲ್ಲರೂ ಪುಣ್ಯಸ್ನಾನ ಕೈಗೊಂಡು ಕಾಶಿ ವಿಶ್ವನಾಥ, ನಾಸಿಕ್ ತ್ರಿಂಭಕೇಶ್ವರ, ಮಧ್ಯಪ್ರದೇಶದ ಓಂಕಾರೇಶ್ವರ, ಮಹಾಕಾಳೇಶ್ವರ, ಘೃಷ್ಣೇಶ್ವರ ಮತ್ತು ಮಹಾರಾಷ್ಟ್ರದ ಭೀಮಾಶಂಕರ ಜ್ಯೋತಿರ್ಲಿಂಗ ದರ್ಶನ ಪಡೆದು ಸ್ವಗ್ರಾಮಕ್ಕೆ ಮರಳಿದ್ದರು.

ಹಾಗಾಗಿ ಗ್ರಾಮದ ಹಿರಿಯರು, ಪ್ರಮುಖರು, ಯುವಕರು ಪಟಾಕಿ ಸಿಡಿಸಿ ಕುಂಭಮೇಳ ಯಾತ್ರಿಕರನ್ನು ಸಂಭ್ರಮದಿಂದ ಬರಮಾಡಿಕೊಂಡರು.

ನಂತರ ವೀರಭದ್ರೇಶ್ವರ ದೇಗುಲದಲ್ಲಿ ವೀರೇಶ ಭೂರಾಳೆ, ಕಾಶಿನಾಥ ಲದ್ದೆ, ಭಯ್ಯ, ಸಂಗಮೇಶ ಲದ್ದೆ, ಮಹೇಶ ಗಾಮಾ, ಶಂಕರ ಭೂರಾಳೆ, ವಿಜಯಕುಮಾರ ಗಾಮಾ, ಮಹಾಂತೇಶ ಪಾಟೀಲ್ ಮುಂತಾದವರು ಕುಂಭಮೇಳ ಯಾತ್ರಿಕ ದಂಪತಿಗಳನ್ನು ಸನ್ಮಾನಿಸಿದರು.

ರವೀಂದ್ರ ಚಿಡಗುಪ್ಪೆ, ಮಹಾದೇವ ಬೇಲೂರೆ, ರವೀಂದ್ರ ಗಾಮಾ, ಸತೀಶ ಧರ್ಮಣ್ಣ, ಸತೀಶ ಬಿರಾದಾರ್, ಜೈರಾಜ ಪಾಟೀಲ್, ಸಂತೋಷ ಭೂರಾಳೆ, ಪರಮೇಶ್ವರ ಮದನೂರೆ, ಸಂಜೀವಕುಮಾರ ಕನ್ನಾಳೆ ಮತ್ತು ರಮೇಶ ಖರಾಬೆ ದಂಪತಿಗಳು ಕುಂಭಮೇಳಕ್ಕೆ ತೆರಳಿದ್ದರು.

# ವಿಶ್ವ ಮಾನವ ಸಂದೇಶ ಸಾರಿದ ಬೇಡನ್ ಪೊವೆಲ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.24–ಜಗತ್ತಿಗೆ ವಿಶ್ವಮಾನವ ಸಂದೇಶ ಸಾರಿದ ಲಾರ್ಡ ಬೇಡನ್ ಪೊವೆಲ್ ಅವರ ಬದುಕು ಮತ್ತು ಸಾಧನೆ ಯುವ ಸಮೂಹಕ್ಕೆ ಮಾದರಿಯಾಗಿದೆ ಎಂದು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಘಟಕ ಪ್ರಮೋದ ಚೌಗಲೆ ಹೇಳಿದರು. ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ ಮತ್ತು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕಗಳ ಆಶ್ರಯದಲ್ಲಿ ಲಾರ್ಡ ಬೇಡನ್ ಪೊವೆಲ್ ಮತ್ತು ಲೇಡಿ ಪೊವೆಲ್ ಅವರ ಜನ್ಮ ದಿನದ ಅಂಗವಾಗಿ ವಿಶ್ವ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥಾಪನಾ ದಿನಾಚರಣೆ ಮತ್ತು ವಿಶ್ವ ಚಿಂತನಾ ದಿನಾಚರಣೆ ಕಾರ್ಯಕ್ರಮದಲ್ಲಿ ಲಾರ್ಡ ಬೇಡನ್ ಪೊವೆಲ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಮಾತನಾಡಿದರು. ವಿದ್ಯಾರ್ಥಿಗಳು ವ್ಯಾಸಂಗದ ಜೊತೆಗೆ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಸದಸ್ಯರಾಗಿ ಸಾಮಾಜಿಕ ಸೇವೆ ಮಾಡುವ ಮನೋಭಾವ ಬೆಳೆಸಿಕೊಂಡು ಆದರ್ಶ ವ್ಯಕ್ತಿಗಳಾಬೇಕು ಎಂದು ಚೌಗಲೆ ಹೇಳಿದರು. ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಕಾಲೇಜಿನಲ್ಲಿರುವ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕದಲ್ಲಿ ಪ್ರವೇಶ ಪಡೆದು–ಕೊಂಡು ಅದರ ಸದುಪಯೋಗ ಪಡೆದುಕೊಳ್ಳಬೇಕು. ವಿಶ್ವಕ್ಕೆ ಉತ್ತಮ ಮಾನವ ಸಂದೇಶ ಸಾರಿದ ಬೇಡನ್ ಪೊವೆಲ್ ಅವರ ವಿಚಾರ ಮತ್ತು ಜೀವನಾದರ್ಶಗಳನ್ನು ತಮ್ಮಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಆದರ್ಶ ವ್ಯಕ್ತಿಗಳಾಗಿ ಸುಂದರ ಬದುಕು ನಿರ್ಮಿಸಿಕೊಳ್ಳಬೇಕು ಎಂದರು. ರೇಂಜರ ಜ್ಯೋತಿ ಕೋಟೆಕಲ್ 'ಲಾರ್ಡ ಬೇಡನ್ ಪೊವೆಲ್ ಅವರ ಸಾಧನೆಗಳು' ಕುರಿತು ಉಪನ್ಯಾಸ ನೀಡಿದರು. ರೋವರ್ ಲೀಡರ್ ಪ್ರೊ.ಪರಸಪ್ಪ ತಳವಾರ ಪ್ರಾಸ್ತಾವಿಕ ನುಡಿ ಹೇಳಿದರು. ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ವಿಭಾಗದ ಸಂಚಾಲಕ ಡಾ.ಜಿ.ಜಿ.ಹಿರೇಮಠ, ಜಿಲ್ಲಾ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಶಿಕ್ಷಕರ ಘಟಕದ ನಾರಾಯಣ ಯಳ್ಳಿಗುತ್ತಿ, ರೋವರ್ ಲೀಡರ್ ಡಾ.ಚಂದ್ರಶೇಖರ ಕಾಳನ್ನವರ, ಪ್ರೊ.ಪರಸಪ್ಪ ತಳವಾರ, ರೇಂಜರ್ ಲೀಡರ್ ಡಾ.ಸುಮಂಗಲಾ ಮೇಟಿ, ಪ್ರೊ.ಸವಿತಾ ಬಾದಾಮಿ ಉಪಸ್ಥಿತರಿದ್ದರು. ಸಾಬಮ್ಮ ಪ್ರಾರ್ಥಿಸಿದರು. ಡಾ.ಸುಮಂಗಲಾ ಮೇಟಿ ಸ್ವಾಗತಿಸಿದರು. ಸಾಗರ ಚವ್ಹಾಣ ವಂದಿಸಿದರು, ರೇಂಜರ್ ಸರೋಜಾ ಬೆಳಗಲಿ ನಿರೂಪಿಸಿದರು.

# ಹನಮಂತ ಚುಂಚಾ ಇಳಕಲ್ಲ ಜೆಸಿಐ ಅಧ್ಯಕ್ಷ





ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.24–ಜಿಲ್ಲೆಯ ಇಳಕಲ್ಲ ನಗರದ ಜೆ.ಸಿ.ಐ. ನೂತನ ಅಧ್ಯಕ್ಷರಾಗಿ ಹನಮಂತ ಚುಂಚಾ ಅಧಿಕಾರ ಗ್ರಹಣ ಮಾಡಿದರು. ಮಹಾಂತಶ್ರೀ ಸಿಟಿ ವತಿಯಿಂದ ಗೊಂಗಡಶೆಟ್ಟಿ ಕಲ್ಯಾಣ ಮಂಟಪದಲ್ಲಿ ಜರುಗಿದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ನಿಕಟಪೂರ್ವ ಅಧ್ಯಕ್ಷ ಅಖಿಲ್ ಅಕ್ಕಿ ಅವರು ಹನಮಂತ ಅವರಿಗೆ ಅಧಿಕಾರ ಹಸ್ತಾಂತರಿಸಿದರು.

ಅಧಿಕಾರ ಹಸ್ತಾಂತರಿಸಿ ಮಾತನಾಡಿದ ಅಖಿಲ್ ಅಕ್ಕಿ, 2024ರಲ್ಲಿ ಜೆಸಿಆಯ್ ಮಾಡಿದ ಸಾಮಾಜಿಕ ಚಟುವಟಿಕೆಗಳ ಕುರಿತು ವರದಿ ವಾಚನ ಮಂಡಿಸಿದರು. ಮುಖ್ಯ ಅತಿಥಿ–ಯಾಗಿ ಆಗಮಿಸಿದ್ದ ವಲಯ ಅಧ್ಯಕ್ಷ ಗೌರೀಶ ಭಾರ್ಗವ್ ಕೆ.ವಿ. ನೂತನ ಪಧಾದಿಕಾರಿಗಳಿಗೆ ಶುಭಾಶಯ ತಿಳಿಸಿದರು. ನೂತನ ಕಾರ್ಯದರ್ಶಿ ದರ್ಶನ ಮರಟದ, ಖಜಾಂಚಿ ರಾಘವೇಂದ್ರ ಶ್ಯಾವಿ, ಸದಸ್ಯರಾದ ಶಿರಸಪ್ಪ ಪತ್ತಾರ, ಭೀಮಣ್ಣ ಬೆಳ್ಳಿಕಟ್ಟಿ ಅವರಿಗೆ ವಲಯ ಉಪಾಧ್ಯಕ್ಷ ಜೆ.ಎಫ್.ಎಂ. ಪ್ರಮೋದ ಶಾಸ್ತ್ರಿ ಪ್ರಮಾಣವಚನ ಬೋಧಿಸಿದರು.

ನಿವೃತ್ತ ಯೋಧ ಈರಪ್ಪ ನರಗುಂದ ಅವರನ್ನು ಜೆಸಿಆಯ್ ವತಿಯಿಂದ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಜೆಎಸಿ ಪ್ರಭುಲಿಂಗಪ್ಪ ಸಿಹಲಗೇರಿ, ಜೆಎಸಿ ಪ್ರಮೋದ ಹಂಚಾಟೆ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಆನಂದ ಪಾಟೀಲ, ಅನಂತ್ ಜಿ. ಬಿಜ್ಜಲ್, ಡಾ.ಅವಿನಾಶ ಗುಳೇದ, ಉಸ್ತಾದಖಾನ್ ಇಲಾಳ, ಅಂಕಿತ್ ಸಾಕಾ, ಮುಜಮ್ಮಿಲ್ ಹಕ್ಕಿ, ಸದ್ದಾಂಹುಸೇನ್ ಇಳಕಲ್, ಮಲ್ಲಿಕಾರ್ಜುನ ಇಂದರಗಿ ಅವಿನಾಶ ಅಕ್ಕಿ, ರಾಜಮಹಮ್ಮದ್ ಇಳಕಲ್, ಶ್ರೀಕಾಂತ ಚಿತ್ತರಗಿ, ಮಹಾಂತೇಶ ಗೊಂಗಡಶೆಟ್ಟಿ, ಅಂಬಣ್ಣ ಚಲವಾದಿ, ವಿಶ್ವನಾಥ ಹಿರೇಮಠ, ರಾಘವೇಂದ್ರ ತುಗ್ಗಿ, ಮಂಜುನಾಥ ಕಿಡದೂರು, ಅಕ್ಷಯ್ ಅಂಗಡಿ, ವಿಕ್ರಾಂತ ನಿಲೂಗಲ್, ಮಂಜುನಾಥ ಚಕ್ರಸಾಲಿ, ಅಬ್ದುಲ್‌ಕರಿಂ ಅತ್ತಾರ್, ಮಹಾಂತೇಶ ಹರ್ತಿ, ಮಂಜುನಾಥ ತೊಂತನಾಳ, ಗವಿಚನ್ನ ಕೆಂಭಾವಿಮಠ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಚಿತ್ರಕಲಾ ಕಾಲೇಜುಗಳೂ ಅನುದಾನಕ್ಕೆ ಒಳಪಡಬೇಕು:ಶ್ರೀಶೈಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.24–ಚಿತ್ರಕಲಾ ಕಾಲೇಜುಗಳೂ ಅನುದಾನಕ್ಕೆ ಒಳಪಡಬೇಕು. ಆ ಮೂಲಕ ಚಿತ್ರಕಲೆ ಶಿಕ್ಷಣಕ್ಕೆ ಸರ್ಕಾರ ಹೆಚ್ಚಿನ ಉತ್ತೇಜನ ನೀಡಬೇಕು. ಕ್ರೀಡೆ, ಚಿತ್ರಕಲೆಯೂ ಶಿಕ್ಷಣದ ಒಂದು ಭಾಗವಾಗಬೇಕು ಎಂದು ಪತ್ರಕರ್ತ ಶ್ರೀಶೈಲ ಬಿರಾದಾರ ಹೇಳಿದರು. ನಗರದ ವಿಶ್ವ ನೂತನ ಚಿತ್ರಕಲಾ ಕಾಲೇಜು, ಬಾದಾಮಿಯ ಚಾಲುಕ್ಯ ಚಿತ್ರಕಲಾ ಕಾಲೇಜಿನ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಚಿತ್ರಕಲಾ ಪ್ರದರ್ಶನ, ಅತ್ಯುತ್ತಮ ಚಿತ್ರಕಲಾ ವಿದ್ಯಾರ್ಥಿಗೆ ಮಾತೋಶ್ರೀ ತಾಯಮ್ಮ ಸಿರಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಉದ್ಘಾಟಿಸಿ, ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು. ಚಿತ್ರಕಲೆ, ದೈಹಿಕ ಶಿಕ್ಷಣ ಶಿಕ್ಷಕರ ನೇಮಕ ಆಗಬೇಕು. ಆಗ ನೈತಿಕ ಮೌಲ್ಯಗಳು ಶಿಕ್ಷಣದಲ್ಲಿ ಮತ್ತೆ ಬರಲು ಸಾಧ್ಯ. ಸರ್ಕಾರ ದೈಹಿಕ ಶಿಕ್ಷಣ ಶಿಕ್ಷಕರು, ಚಿತ್ರಕಲಾ ಶಿಕ್ಷಕರ ನೇಮಕ ಮಾಡಬೇಕು. ಸಾವಿರ ಶಬ್ದಗಳಿಗೆ ಒಂದು ಕಲೆ ಸಮವಾಗುತ್ತದೆ ಎಂದು ಹೇಳಿದರು. ಬೀಳಗಿಯ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಗುರುರಾಜ ಲೂತಿ ಮಾತನಾಡಿ, ಪ್ರತಿಯೊಬ್ಬರ ಬದುಕು ನವರಸಗಳಿಂದ ಕೂಡಿದಾಗ ಸುಂದರವಾಗುತ್ತದೆ. ನವರಸಗಳಿಂದ ಕೂಡಿದ ಚಿತ್ರಗಳು ಇಲ್ಲಿವೆ. ಚಿತ್ರದಲ್ಲಿ ಸಜೀವತೆ ತುಂಬಿರಬೇಕು. ಇಲ್ಲಿನ ಚಿತ್ರಕಲೆಗಳೂ, ಜೀವಂತಿಕೆ ಸಾರುತ್ತಿವೆ. ತಂದೆ, ತಾಯಿ, ಶಿಕ್ಷಕರು ಮಾತ್ರ ದೇವರು ಆಗಲು ಸಾಧ್ಯ. ಶಿಕ್ಷಣ ಅಂದ್ರೆ, ಓದು ಬರಹ ಅಲ್ಲ, ಮಕ್ಕಳ ಸರ್ವಾಂಗೀಣ ಬೆಳವಣಿಗೆ ಆದಾಗ ಶಿಕ್ಷಣದ ಉದ್ದೇಶ ಈಡೇರಲು ಸಾಧ್ಯ ಎಂದರು.

ಕನ್ನಡ ಜಾನಪದ ಪರಿಷತ್ ಜಿಲ್ಲಾ ಅಧ್ಯಕ್ಷ ಡಿ.ಎಂ.ಸಾಹುಕಾರ ಮಾತನಾಡಿ, ಚಿತ್ರಕಲೆ ಎಂಬುದು ಧ್ಯಾನ ಇದ್ದಂತೆ. ಅದರಲ್ಲಿ ತಲ್ಲೀನತೆ ಆಗಿರಬೇಕು. ಅಂದರೆ ವಿದ್ಯಾರ್ಥಿಗಳು ಧ್ಯಾನಸ್ಥರಾಗಬೇಕು.

ಆಗ ಶಿಕ್ಷಕರು ನಿಮಗೆ ವಿದ್ಯೆ ಧಾರೆ ಎರೆಯುತ್ತಾರೆ. ತಾಳ್ಮೆ ಇದ್ದಾಗ ಮಾತ್ರ ಸಾಧನೆ ಮಾಡಲು ಸಾಧ್ಯ. ಕಲೆ, ಕಲಾವಿದರಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಕಲೆ ಎಲ್ಲರನ್ನೂ ಸೆಳೆಯುತ್ತದೆ. ಆದರೆ ಅದು, ಎಲ್ಲರಿಗೂ ಕರಗತವಾಗುವದಿಲ್ಲ. ಕೆಲವೇ ಕೆಲವರಿಗೆ ಮಾತ್ರ ಅದು ಒಲಿಯುತ್ತದೆ ಎಂದು ಹೇಳಿದರು. ವಿಶ್ವ ನೂತನ ಚಿತ್ರಕಲಾ ಕಾಲೇಜಿನ ಪ್ರಾಚಾರ್ಯ ಶಿವಾನಂದ ಹಿರೇಮಠ ಮಾತನಾಡಿ, ನಸಿಶಿ ಹೋಗುತ್ತಿರುವ ಚಿತ್ರಕಲೆ ಕ್ಷೇತ್ರ ಮತ್ತೆ ಮುನ್ನೆಲೆಗೆ ಬರಬೇಕು. ಇಂದಿನ ಯುವ ಪೀಳಿಗೆಗೆ ಚಿತ್ರಕಲೆ ಶಿಕ್ಷಣ ದೊರೆಯಬೇಕು. ಕಲಾ ಪ್ರತಿಭೆಗಳು ಹೊರ ಬರಬೇಕು ಎಂಬುದು ನನ್ನ ಗುರಿ. ಕಲೆ, ಕಲಿಕೆಯಲ್ಲಿ ನಾವೆಲ್ಲ ಇಂದಿಗೂ ವಿದ್ಯಾರ್ಥಿಗಳೇ ಎಂದು ಹೇಳಿದರು. ಅಂಜುಮನ್ ಕಾಲೇಜಿನ ಪ್ರಾಚಾರ್ಯ ಡಾ.ಮೈನುದ್ದೀನ್ ರೇವಡಿಗಾರ ಅಧ್ಯಕ್ಷತೆ ವಹಿಸಿದ್ದರು. ಹುಲಿಗೆಮ್ಮದೇವಿ ಸೇವಾ ಸಂಘದ ಅಧ್ಯಕ್ಷ ನಿಂಗರಾಜ ಮಬ್ರುಮಕರ ಮಾತನಾಡಿದರು.

ಸಂಸ್ಥೆಯ ಅಧ್ಯಕ್ಷೆ ಲಕ್ಷ್ಮವ್ವ ಕುದರಿ, ಪತ್ರಕರ್ತ ಎಂ.ಎನ್.ಶಾಲಗಾರ, ರಾಜು ಯಾದವ, ಮಲ್ಲಿಕಾರ್ಜುನ ಸಾರಾವರಿ, ಪಿತಾಂಬರಪ್ಪ ಬಡಿಗೇರ, ಪಿ.ವಿ.ಪುರಾಣಿಮಠ, ದೀಪಾ ರಾಠೋಡ, ರಾಕೇಶ ದೊಡಮನಿ, ಏಳುಕೋಟಿ ಬಡಿಗೇರ ಮುಂತಾದವರು ಉಪಸ್ಥಿತರಿದ್ದರು. ಬಾಗಲಕೋಟೆ ವಿಶ್ವನೂತನ ಚಿತ್ರಕಲಾ ಕಾಲೇಜಿನಲ್ಲಿ ಚಿತ್ರಕಲೆ ಪ್ರದರ್ಶನದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿ ಮಂಜುನಾಥ ಕುದರಿಗೆ ಮಾತೋಶ್ರೀ ತಾಯಮ್ಮ ಸಿರಿ ಪ್ರಶಸ್ತಿ ಹಾಗೂ 5 ಸಾವಿರ ನಗದು ಪುರಸ್ಕಾರ ನೀಡಿ ಗೌರವಿಸಲಾಯಿತು.

# ಮರಾಠ ಪುಂಡರಿಗೆ ಗಡಿಪಾರು ಮಾಡಿ: ನಾಗೇಶ ಗದ್ದಿಗಿ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್,ಫೆ.24- ಬೆಳಗಾವಿ ಜಿಲ್ಲೆಯ ಬಾಳೆಕುಂದ್ರಿ ಗ್ರಾಮದಲ್ಲಿ ಕೆ.ಎಸ್.ಆರ್.ಟಿ.ಸಿ ನಿರ್ವಾಹಕ ಮತ್ತು ಚಾಲಕನ ಮೇಲೆ ಹಲ್ಲೆ ಮಾಡಿದ್ದನ್ನು ಖಂಡಿಸಿ ತಪ್ಪಿಸ್ತಸ್ಥರ ವಿರುದ್ಧ ಕಠಿಣ ಕ್ರಮಕ್ಕೆ ಒತ್ತಾಯಿಸಿ ಜಯ ಕರ್ನಾಟಕ ಸಂಘಟನೆ ಗುರುಮಠಕಲ್ ತಾಲೂಕು ಘಟಕದ ವತಿಯಿಂದ ಗುರುಮಠಕಲ್ ಆರಕ್ಷಕ ನಿರೀಕ್ಷಕರ ಮೂಲಕ ಗೃಹ ಮಂತ್ರಿಗಳಿಗೆ ಮನವಿಪತ್ರ ಸಲ್ಲಿಸಲಾಯಿತು.

ಬಳಿಕ ತಾಲೂಕ ಅಧ್ಯಕ್ಷರಾದ ನಾಗೇಶ್ ಗದ್ದಿಗಿ ರವರು ಮಾತನಾಡಿ, ಬೆಳಗಾವಿಯ ಗಡಿ ಭಾಗದಲ್ಲಿ ದಿನೇ ದಿನೇ ಎಂಇಎಸ್ ಮರಾಠಿ ಪುಂಡರ ಹಾವಳಿ ಹೆಚ್ಚಾಗಿದೆ. ಕನ್ನಡಿಗರ ಮೇಲೆ ಹಲ್ಲೆಗಳು ಹೆಚ್ಚಾಗುತ್ತಿದ್ದು ಬೆಳಗಾವಿ ಜಿಲ್ಲೆಯ ಬಾಳಕುಂದ್ರಿ ಗ್ರಾಮದಲ್ಲಿ ಬಸ್ ನಿರ್ವಾಹಕ (ಕಂಡಕ್ಟರ್) ಕನ್ನಡದಲ್ಲಿ ಮಾತನಾಡಿದ್ದಕ್ಕೆ ವಿರೋಧ ವ್ಯಕ್ತಪಡಿಸಿದಲ್ಲದೆ ಮರಾಠಿ ಭಾಷೆಯಲ್ಲಿ ಮಾತನಾಡುವಂತೆ ಹಲ್ಲೆ ನಡೆಸಿದ್ದು ಅತ್ಯಂತ ನಾಚಿಕೆಗೇಡಿನ ಸಂಗತಿಯಾಗಿದೆ. ಕರ್ನಾಟಕದಲ್ಲಿ ಕನ್ನಡಿಗನೆ ಸಾರ್ವಭೌಮ ಎಂದು ರಸ ಋಷಿಗಳು ಬಣ್ಣಿಸಿದ್ದಾರೆ. ಆದರೆ ಬಸ್ಸಿನಲ್ಲಿ ನಿರ್ವಾಹಕ ಕನ್ನಡ ಮಾತನಾಡಿದ್ದಕ್ಕೆ ಪ್ರಯಾಣಿಕ ಮರಾಠಿ ಮಾತನಾಡುವಂತೆ ಬಸ್ ಕಂಡಕ್ಟರ್ ಮೇಲೆ ಹಲ್ಲೆ ಮಾಡಿದ್ದು, ಎಂಇಎಸ್ ಪುಂಡ ಪೊಕರಿಗಳಿಗೆ ಸರಿಯಾದ ಪಾಠವನ್ನು ಕಲಿಸಬೇಕು. ಕನ್ನಡ ನೆಲದಲ್ಲಿ ಕನ್ನಡಕ್ಕೆ ಆದ್ಯತೆ ನೀಡಬೇಕು ಎಂಬ ಬದ್ಧತೆಯನ್ನು ಸರ್ಕಾರ ಮರೆದಿದಿದ್ದರೆ ಇಂದು ಇಂಥ ಘಟನೆಗಳು ನಡೆಯುತ್ತಿರಲಿಲ್ಲ ಕೂಡಲೆ ಸರ್ಕಾರ ತಪ್ಪಿಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಂಡು ಕನ್ನಡವನ್ನು ಕೀಳಾಗಿ ಕಾಣುತ್ತಿರುವ ಮರಾಠ ಪುಂಡರಿಗೆ ತಕ್ಕ ಪಾಠ ಕಲಿಸಬೇಕು ಅಂತಹ ಪುಂಡರನ್ನು ಗಡಿಪಾರು ಮಾಡಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ತಾಲೂಕ ಅಧ್ಯಕ್ಷರಾದ ನಾಗೇಶ್ ಗದ್ದಿಗಿ, ತಾಲೂಕ ಗೌರವ ಅಧ್ಯಕ್ಷರಾದ ಮಲ್ಲಿಕಾರ್ಜುನ ಕಾಕಲವಾರ, ರೈತ ಮೋರ್ಚಾ ಅಧ್ಯಕ್ಷ ರಾಮುಲು ಕೊಡಗಂಟಿ, ಉದಯಕುಮಾರ್ ಕೊಂಕಲ್,ರವಿ ವಾರದ್, ರವಿಶಂಕರ್ ಅಡಕಿ, ಆಯಾರ್ಭ್ ಅಲಿ,ಕಾಶಪ್ಪ,ಭೀಮು ಮನ್ನೇ, ಮಹೇಶ್,ಸಾಬಣ್ಣ, ಬನ್ನು ಮಡುಗು, ಸೇರಿದಂತೆ ಇನ್ನೂ ಮುಖಂಡರು ಹಾಗು ಸಂಘಟನೆಯ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಇದ್ದರು.

# ಪುಟಪಾಕ ಸರಕಾರಿ ಪ್ರೌಢಶಾಲೆಯಲ್ಲಿ ಆವಿಷ್ಕಾರ ಮೇಳ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್,ಫೆ.24-ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷ್ಠಾನ ಮಿನಿ ವಿಜ್ಞಾನ ಕೇಂದ್ರವು ಪುಟಪಾಕ ಸರಕಾರಿ ಪ್ರೌಢಶಾಲೆಯಲ್ಲಿ ಆವಿಷ್ಕಾರ ಮೇಳವನ್ನು ಶನಿವಾರ ಆಯೋಜಿಸಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯಗುರುಮಾತೆ ಹೇಮಲತಾ ಶೆಟ್ಟಿ ವಹಿಸಿದ್ದರು. ಮಿನಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ನಾಗೇಶ್ ಡಿ ಅವರು ಕಾರ್ಯಕ್ರಮದ ಉದ್ದೇಶ ಮತ್ತು ಗುರಿಗಳನ್ನು ಸ್ಪಷ್ಟಪಡಿಸಿ, ಸಮಸ್ಯೆ ವಿನ್ಯಾಸ, ಚಿಂತನೆ ಮತ್ತು ಚಟುವಟಿಕೆಗಳ ಬಗ್ಗೆ ತಮ್ಮ ಅನಿಸಿಕೆಯನ್ನು ಹಂಚಿಕೊಂಡರು. ವಿನ್ಯಾಸ ಚಿಂತನೆ ಪ್ರಕ್ರಿಯೆ ಹಾಗೂ ಅನುಭೂತಿ ನಕ್ಷೆ ನಮಸ್ತೆ ಪರಿಹಾರ ಅನ್ವೇಷಣೆ ಆವಿಸ್ಕಾರ, ಆವಿಸ್ಕಾರದಲ್ಲಿ ವಿಷಯಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡಿ ಮಕ್ಕಳಲ್ಲಿ ಸೃಜನಶೀಲತೆ ಬೆಳೆಸುವ ಉದ್ದೇಶದಿಂದ ಹೊಸ ಆಲೋಚನೆಗಳನ್ನು ಮತ್ತು ಹೊಸ ಆವಿಸ್ಕಾರಗಳನ್ನು ಕಲಿತು ಅವರ ಜೀವನದಲ್ಲಿ ಹೊಸ ವಿಜ್ಞಾನಿಗಳಾಗುವ ಸಾಧ್ಯತೆ ಇದೆ ಎಂದು ಹೇಳಿದರು, ಮಿನಿ ವಿಜ್ಞಾನ ಕೇಂದ್ರವು ಗುರುಮಠಕಲ್ ತಾಲೂಕಿನಲ್ಲಿ ಎರಡು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದೆ ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷ್ಠಾನವು ರಾಮ್‌ಜಿ ರಾಘವನ್ ಅವರ ನಾಯಕತ್ವದಲ್ಲಿ, ಅಗಸ್ತ್ಯ ಇಂಟರ್‌ನ್ಯಾಶನಲ್ ಫೌಂಡೇಶನ್ ಅನ್ನು 1999 ರಲ್ಲಿ ಲಾಭರಹಿತ ಶೈಕ್ಷಣಿಕ ಟ್ರಸ್ಟ್ ಆಗಿ ಸ್ಥಾಪಿಸಲಾಯಿತು ಮತ್ತು ವಿಶೇಷವಾಗಿ ಗ್ರಾಮೀಣ ಭಾರತದಲ್ಲಿ ಆರ್ಥಿಕವಾಗಿ ಹಿಂದುಳಿದ ಮಕ್ಕಳು ಮತ್ತು ಶಿಕ್ಷಕರಲ್ಲಿ ಸೃಜನಶೀಲತೆ ಮತ್ತು ನಾಯಕತ್ವವನ್ನು ಬೆಳೆಸುತ್ತದೆ ಹಲವಾರು ವೈಜ್ಞಾನಿಕ ಹಾಗೂ ಶೈಕ್ಷಣಿಕ ಚಟುವಟಿಕೆಗಳನ್ನು ಶಾಲಾ ಹಂತಗಳಲ್ಲಿ ವಿದ್ಯಾರ್ಥಿಗಳಲ್ಲಿ ಹೊಸ ಸೃಜನಶೀಲತೆ ಬೆಳೆಸುವುದಾಗಿದೆ ಎಂದು ಹೇಳಿದರು. ಹಾಗೂ ಅತಿಥಿ ಸ್ಥಾನವನ್ನು ವಹಿಸಿದ್ದ ಸಹ ಶಿಕ್ಷಕ ಶಿವರಾಜ್ ಸಾಕಾ ಅವರು ಮಾತನಾಡಿ, ಅಗಸ್ತ್ಯ ಫೌಂಡೇಶನ್ ಸಂಸ್ಥೆಯು ಶಾಲಾ ಮಕ್ಕಳಿಗೆ ಬಹಳ ಉಪಯುಕ್ತವಾಗಿದೆ ಎಂದು ತಿಳಿಸಿದರು. ವಿಜ್ಞಾನ ಶಿಕ್ಷಕ ಬಸವರಾಜ ಮಾತನಾಡಿ, ಮಕ್ಕಳು ಸಣ್ಣ ವಿಜ್ಞಾನಿಗಳಾಗುವ ಸಾಧ್ಯತೆಯಿದೆ. ಮುಂದೆ ಅವರ ಜೀವನದಲ್ಲಿ ವಿಜ್ಞಾನಿಗಳು ಆಗಬಹುದು ಅವರ ನಾವಿನ್ಯತೆ ಚಿಂತನೆಯಲ್ಲಿ ಪ್ರಭಾವ ಬಹಳ ಬೀರುತ್ತದೆ ಮಕ್ಕಳಿಗೆ ಬಹಳ ಉಪಯುಕ್ತವಾಗುತ್ತದೆ ಎಂದು ತಿಳಿಸಿದರು. ಸರ್ಕಾರಿ ಪ್ರೌಢಶಾಲೆ ಪುಟಪಾಕ ಶಾಲೆಯ ಮುಖ್ಯ ಗುರುಗಳಾದ ಹೇಮಲತಾ ಶೆಟ್ಟಿ ಅವರು ಅಧ್ಯಕ್ಷತೆಯ ಭಾಷಣ ಮಾಡಿ ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷ್ಠಾನವು ಶಾಲಾ ಹಂತಗಳಲ್ಲಿ ಶಾಲಾ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ತುಂಬುವ ಕೆಲಸ ಮಾಡುವಲ್ಲಿ ಒಂದು ಒಳ್ಳೆಯ ಸಂಸ್ಥೆ ಎಂದು ತಿಳಿಸಿದರು. ಈ ಮಾದರಿಗಳನ್ನು ಮಕ್ಕಳೇ ತಮ್ಮ ಕೈಯಿಂದ ಅವರು ಮಾಡಿರುವಂತಹ ಕಸದಿಂದ ರಸ ಎನ್ನುವ ರೀತಿಯಲ್ಲಿ ಬಳಸಿರುವ ಬಾಟಲ್ ನಿಂದ ಹೆಲಿಕ್ಯಾಪ್ಟರ್ ಮಾಡಲನ್ನು ಭಾಸ್ಕರ್ ಮತ್ತು ತಂಡದವರು ಹಾಗೂ ಎಲೆಕ್ಟ್ರಿಕ್ ಬಜಾರ್ ಮಾದರಿಯನ್ನು ಜಗದೀಶ್ ತಂಡದವರು, ಸಿದ್ದು ಏರ್ ಪವರ್ ಎಲೆಕ್ಟ್ರಿಕ್ ಕಾರ್ ಮಾದರಿಯನ್ನು, ವರಲಕ್ಷ್ಮಿ ತಂಡದವರು ಇಂತಹ ಮಾದರಿಗಳನ್ನು ಎಂಟನೇ ತರಗತಿಯ ವಿದ್ಯಾರ್ಥಿಗಳು ಅತ್ಯುತ್ತಮವಾದ ತಮ್ಮದೇ ಆದ ಪ್ರತಿಭೆಯನ್ನು ಈ ಮಾದರಿಗಳ ಮುಖಾಂತರ ತೋರಿಸಿದರು. ಅವರಲ್ಲಿ ಹೊಸ ಆಲೋಚನೆಗಳನ್ನು ಸಮಸ್ಯೆಗೆ ಪರಿಹಾರವನ್ನು ಕಂಡುಕೊಳ್ಳುವಲ್ಲಿ ಉಪಯುಕ್ತವಾಗಿದೆ ಎಂದು ಅಗಸ್ತ್ಯ ಫೌಂಡೇಶನ್ ಮಿನಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಿಗೆ ಧನ್ಯವಾದಗಳು ಹೇಳಿದರು. ಈ ವೇಳೆ ಮುಖ್ಯ ಅತಿಥಿಗಳ ಸ್ಥಾನವನ್ನು ಸಹ ಶಿಕ್ಷಕ ಶ್ರೀನಿವಾಸರೆಡ್ಡಿ, ಗಿರಿ ಲಕ್ಷಣರಾವ್, ಅಶೋಕ್, ಕಾಶಿನಾಥ, ನಾಗರಾಜ್, ಗೋಪಾಲ ಚಂಡರಕಿ ಹಾಗೂ ಕಾರ್ಯಕ್ರಮದ ನಿರೂಪಣೆಯನ್ನು ಸಹ ಶಿಕ್ಷಕ ಚಂದ್ರಶೇಖರ ನಡೆಸಿಕೊಟ್ಟರು. ಶಾಲಾ ಸಿಬ್ಬಂದಿ ವರ್ಗದವರು ಮಕ್ಕಳು ಇದ್ದರು.

# ವಿದ್ಯಾರ್ಥಿಗಳ ಉತ್ತಮ ಕಲಿಕೆಗೆ ಸೃಜನಶೀಲತೆ ಅತಿಮುಖ್ಯ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಫೆ.24:ವಿದ್ಯಾರ್ಥಿಗಳ ಉತ್ತಮ ಕಲಿಕೆಗೆ ಸೃಜನಶೀಲತೆ ಅತಿ ಮುಖ್ಯವಾಗಿದೆ. ಇದು ಸಂತಸಹಾಗೂ ಆಸಕ್ತಿದಾಕವಾದ ಚಟುವಟಿಕೆ ಆಧಾರಿತ ಕಲಿಕೆಯಾಗಿದೆ ಎಂದು ಬಿಆರ್‌ಪಿ ಪ್ರಭು ಸಾಹುಕಾರ ಅಭಿಪ್ರಾಯಪಟ್ಟರು. ಇಲ್ಲಿಗೆ ಸಮೀಪದ ಚೇಲೇರಿ ಸರಕಾರಿ ಪ್ರಾಥಮಿಕಶಾಲೆಯಲ್ಲಿ ಹಮ್ಮಿಕೊಂಡ ಅಜಲಾಪುರ ಕ್ಲಸ್ಟರ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ವಿವಿಧ ಶಾಲೆಗಳಿಂದ ಆಗಮಿಸಿ ಒಂದು ಕಡೆ ಸೇರಿ ಸಂಭ್ರಮದೊಂದಿಗೆ ಮಾಲ್ಗೋಂಡುಕ್ರಿಯಾತ್ಮಕತೆಯನ್ನು ಪ್ರದರ್ಶನ ಮಾಡುವ ಉತ್ತಮ ಅವಕಾಶ ಇದಾಗಿದೆ. ಪೋಷಕರು ಮಕ್ಕಳನ್ನು ಕಡ್ಡಾಯವಾಗಿ ಶಾಲೆಗೆ ಕಳಿಸಬೇಕು. ಶಿಕ್ಷಣದಿಂದ ಮಾತ್ರ ಸಾಧನೆ ಸಾಧ್ಯವಾಗುತ್ತದೆ ಎಂದು ಹೇಳಿದರು.

ಎಸ್‌ಡಿಎಮ್‌ಸಿ ಅಧ್ಯಕ್ಷ ಬಸ್ಸಪ್ಪ ಅಧ್ಯಕ್ಷತೆ ವಹಿಸಿದ್ದರು. ಇಸಿಓ ಪ್ರಕಾಶ್ ಶಾಸ್ತ್ರಿ, ಸಿಆರ್‌ಪಿ ರಾಜೇಂದ್ರ ತಮನ್ ಜೈಪಾಲ್ ರೆಡ್ಡಿ, ವಿವಿಧ ಶಾಲೆಗಳ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ಅತಿಥಿ ಶಿಕ್ಷಕರು,ಗ್ರಾಮದ ಮುಖಂಡರು, ಶಿಕ್ಷಣ ಪ್ರೇಮಿಗಳು, ಹಳೆ ವಿದ್ಯಾರ್ಥಿಗಳು ಸೇರಿದಂತೆ ಇತರರಿದ್ದರು.

# ಧಾರ್ಮಿಕ ಯಾತ್ರೆಯಿಂದ ಮನಸ್ಸಿಗೆ ನೆಮ್ಮದಿ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಫೆ.24:ಧಾರ್ಮಿಕ ಆಚರಣೆಯಿಂದ ಮನಸ್ಸಿಗೆ ನೆಮ್ಮದಿ ದೊರೆಯುತ್ತದೆ ಎಂದು ನೇರಡಗುಂಬ ಶ್ರೀ ಮಠದ ಪೀಠಾಧಿಪತಿ ಪಂಚಮ ಸಿದ್ಧಲಿಂಗ ಸ್ವಾಮೀಜಿ ಅಭಿಪ್ರಾಯಪಟ್ಟರು.

ಪಟ್ಟಣದ ವಿಶ್ವನಾಥ ಮಂದಿರದಲ್ಲಿ ಶಿವರಾತ್ರಿ ಅಂಗವಾಗಿ ಗ್ರಾಮಸ್ಥರ ಬುಧವಾರ ಹಮ್ಮಿಕೊಂಡಿದ್ದ ಶ್ರೀ ಶೈಲಕ್ಕೆ ಜ್ಯೋತಿಯಾತ್ರೆಗೆ ಚಾಲನೆ ನೀಡಿ ಮಾತನಾಡಿದರು. ಮನುಷ್ಯನ ಜೀವನದಲ್ಲಿ ಕಷ್ಟ-ಸುಖಗಳು ಸಾಮಾನ್ಯ. ಒತ್ತಡದ ಜೀವನದಲ್ಲಿ ದೇವರ ಸ್ಮರಣೆಯೊಂದಿಗೆ ಪಾದಯಾತ್ರೆಯನ್ನು ಮಾಡುವ ಮೂಲಕ ಸಾಗುವುದು ಆಧ್ಯಾತ್ಮಿಕ ಒಲವು ಹೆಚ್ಚಾಗುವಂತೆ ಮಾಡುತ್ತದೆ .ಯಾತ್ರೆಯು ಮನಸ್ಸಿಗೆ ನೆಮ್ಮದಿ ನೀಡುತ್ತದೆ ಎಂದು ಹೇಳಿದರು.

ಇದಕ್ಕೂ ಮೊದಲು ವಿಶ್ವನಾಥ ಮಂದಿರದಲ್ಲಿ ಪುರವಂತಿಗೆ ನಡೆಯಿತು. ನಂತರ ಸ್ವಾಮೀಜಿಗಳು ಪೂಜಾ ಕೈಂಕರ್ಯಗಳು ನೆರವೇರಿಸಿ, ನಂದಿಕೋಲು, ಡೊಳ್ಳು, ಹಲಗೆ ವಾದ್ಯಗಳೊಂದಿಗೆ ಜ್ಯೋತಿಯಾತ್ರೆಗೆ ಚಾಲನೆ ನೀಡಿದರು. ಬಸವೇಶ್ವರ, ಕನಕ, ಬಾಬು ಜಗಜೀವನರಾಮ್ ವೃತ್ತದ ಮೂಲಕ ಯಾತೆ-ಯು ಗ್ರಾಮದ ಮಾರಿಕಾಂಬಾ ದೇವಸ್ಥಾನದವರೆಗೆ ಸಾಗಿತು. ಫೆ-20 ಗುರುವಾರ ಸೈದಾಪುರ ಗ್ರಾಮದಿಂದ ಶ್ರೀಶೈಲಕ್ಕೆ ಭಕ್ತರು ಪಾದಯಾತ್ರೆ ಪ್ರಾರಂಭಿಸುತ್ತಾರೆ ಎಂದು ಭಕ್ತರು ಹೇಳಿದರು.

ಈ ಸಂದರ್ಭದಲ್ಲಿ ಸಿದ್ಧಾರೂಢ ಮಠದ ಪೀಠಾಧಿಪತಿ ಸೋಮೇಶ್ವಾರನಂದ ಸ್ವಾಮಿ, ಪ್ರಕಾಶ್‌ಗೌಡ,ಸಂಗಾರೆಡ್ಡಿಗೌಡ, ಮಲ್ಲುಗೌಡ ಸೈದಾಪುರ, ನೀಲಕಂಠಪ್ಪಗೌಡ ಕ್ಯಾತನಾಳ, ವಿಶ್ವನಾಥರೆಡ್ಡಿಗೌಡ ಚಿಗಾನೂರ, ಯೋಗೇಶ್‌ಕುಮಾರದೊಕಾ, ತಿಮ್ಮಣ್ಣ ವಿಶ್ವಕರ್ಮ, ಗ್ರಾಮ ಪಂಚಾಯಿತಿ ಮಾಜಿಅಧ್ಯಕ್ಷ ಮಾಳಪ್ಪ ಅರಿಕೇರಿ, ಗ್ರಾಮ ಪಂಚಾಯಿತಿ ಸದಸ್ಯರಾದ ಸಿದ್ದಲಿಂಗರೆಡ್ಡಿಗೌಡ,ಬಸವರಾಜ, ತಾಯಪ್ಪಚಿಗರಿ, ದಶರಥ,

# ಸಿಯುಕೆಯಲ್ಲಿ 25ನೇ ಅಂತಾರಾಷ್ಟ್ರೀಯ ಮಾತೃಭಾಷಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ.24:"ಇಂದು ಆರೋಗ್ಯಕರ ಸಮಾಜಕ್ಕೆ ಭಾಷೆ ಮತ್ತು ಲಿಂಗಗಳ ಕುರಿತ ಸಂವೇದನಾ ಕಾರ್ಯಕ್ರಮಗಳ ಅವಶ್ಯಕತೆಯಿದೆ" ಎಂದು ಪುಣೆಯ ಇಂಗ್ಲಿಷ್‌ನಲ್ಲಿನ ಇನ್‌ಸ್ಟಿಟ್ಯೂಟ್ ಆಫ್ ಅಡ್ವಾನ್ಸ್ಡ್ ಸ್ಟಡೀಸ್ ಸಂಸ್ಥಾಪಕ ನಿರ್ದೇಶಕ ಪ್ರೊ. ಅಶೋಕ್ ಥೋರಟ್ ಹೇಳಿದರು. ಅವರು ಸಿಯುಕೆಯ ಭಾಷಾಶಾಸ್ತ್ರ ವಿಭಾಗ, ಆಯೋಜಿಸಿದ್ದ 25ನೇ ಅಂತಾರಾಷ್ಟ್ರೀಯ ಮಾತೃಭಾಷಾ ದಿನಾಚರಣೆಯಲ್ಲಿ ಮಾತನಾಡಿದರು. ಈ ವರ್ಷದ ಆಚರಣೆಯ ವಿಷಯವು "ಭಾಷಾ ವೈವಿಧ್ಯತೆಯ ಮಹತ್ವ, ಬಹುಭಾಷಾ ಶಿಕ್ಷಣ ಮತ್ತು ಸ್ಥಳೀಯ ಭಾಷೆಗಳ ಸಂರಕ್ಷಣೆ" ಆಗಿದೆ. ಇದರ ಕುರಿತು ಮಾತನಾಡಿದ ಅವರು "ಬಹುಭಾಷಾತೆಯು ಅರಿವಿನ ಕೌಶಲ್ಯಗಳನ್ನು ಹೆಚ್ಚಿಸುತ್ತದೆ, ಸಾಂಸ್ಕೃತಿಕ ವೈವಿಧ್ಯತೆಯನ್ನು ಬಲಪಡಿಸುತ್ತದೆ ಮತ್ತು ಜಾಗತಿಕ ನಾಗರಿಕರನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ" ಎಂದು ಅವರು ಹೇಳಿದರು.

ಸಿಯುಕೆಯ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ಮಾತನಾಡಿ, "ಸಾಮಾಜಿಕ ಸಾಮರಸ್ಯವನ್ನು ಬೆಳೆಸುವಲ್ಲಿ,ಸಾಂಸ್ಕೃತಿಕ ಅಸ್ಮಿತೆಯನ್ನು ಉಳಿಸುವಲ್ಲಿ ಮತ್ತು ಪರಿಸರ ವಿವೇಕವನ್ನು ಕಾಪಾಡುವಲ್ಲಿ ಭಾಷೆಗಳು ನಿರ್ಣಾಯಕ ಪಾತ್ರವನ್ನು ವಹಿಸುತ್ತವೆ. ಭಾಷೆಯು ಗಡಿಗಳನ್ನು ಮೀರಿ ಜನರನ್ನು ಒಂದುಗೂಡಿಸುತ್ತದೆ, ಅವರ ಭಾವನಾತ್ಮಕ ಮತ್ತು ಸಾಂಸ್ಕೃತಿಕ ಸಂಬಂಧಗಳನ್ನು ಬಲಪಡಿಸುತ್ತದೆ" ಎಂದು ಹೆಳಿದರು. ಕಾರ್ಯಕ್ರಮದಲ್ಲಿ ಸುನೀತಾ ಮಂಜನಬೈಲ್,ಪ್ರೊ.ಭೀಮರಾವ್ ಭೋಸ್ಲೆ, ಪ್ರೊ..ಬಸವರಾಜ್ ಪಿ.ಡೋಣೂರು,ಪ್ರೊ.ಸಂದೀಪ್ ರಣಬೀರಕರ್, ಡಾ.ಶಿವಗಂಗಾ ರುಮ್ಮಾ ಮಾತನಾಡಿದರು.

ಭಾಷಾಶಾಸ್ತ್ರ ವಿಭಾಗದ ಸಂಯೋಜಕಿ ಡಾ.ಮಂಜುಲಕ್ಷ್ಮೀ ಎಲ್.ಪ್ರಾಸ್ತಾವಿಕ ಮಾತನಾಡಿದರು. ಡಾ.ಅಂಕಿತಾ ಶತಪತಿ ಸ್ವಾಗತಿಸಿದರು, ಡಾ.ಜಯದೇವಿ ಜಂಗಮಶೆಟ್ಟಿ, ಡಾ.ಸ್ವಪ್ನಿಲ್ ಚಾಪೆಕರ್ ರಾಷ್ಟ್ರಗೀತೆ ಮತ್ತು ನಾಡಗೀತೆಯನ್ನು ಹಾಡಿದರು. ಡಾ.ಆಂಜನೇಯುಲು ವಂದಿಸಿದರು.

ವಿದ್ಯಾರ್ಥಿಗಳಿಗೆ ಕನ್ನಡ, ಹಿಂದಿ, ಇಂಗ್ಲಿಷ್‌ನಲ್ಲಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ವಿಜೇತರಿಗೆ ಪ್ರಮಾಣ ಪತ್ರ ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಯಿತು.

# ವೈಭವದಿಂದ ಜರುಗಿದ ರಾಮದಾಸರ ಆರಾಧನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ.24: ಪ್ರಶಾಂತ ನಗರದ ಶ್ರೀ ಹನುಮಾನ ಮಂದಿರದಲ್ಲಿ ಸಮರ್ಥ ರಾಮದಾಸರ ಆರಾಧನೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಆಚರಿಸಲಾಯಿತು.

ಬೆಳಿಗ್ಗೆ ರುದ್ರಾಭಿಷೇಕ, ಶ್ರೀ ರಾಮದಾಸರ ಪಲ್ಲಕ್ಕಿ ಉತ್ಸವ, ಶ್ರೀ ರಾಮದಾಸರ ಹಾಡುಗಳ ಸಂಕೀರ್ತನೆ, ಭಜನೆ, ಮಹಾಮಂಗಳಾರತಿ, ತೀರ್ಥ ಪ್ರಸಾದ ನಡೆಯಿತು. ಅರ್ಚಕರಾದ ಗುಂಡಾಚಾರ್ಯ ನರಿಬೋಳ, ವಿಠ್ಠಲರಾವ ರಾಮದಾಸಿ, ಶ್ರೀ ರಾಮ, ಡಿ ವ್ಹಿ ಕುಲಕರ್ಣಿ, ಶಶಿ ಆಚಾರ್ಯ, ಶಾಮರಾವ ಕುಲಕರ್ಣಿ, ಗುರುರಾಜ ಸೇರಿದಂತೆ. ಅನೇಕ ಮಹಿಳಾ ಭಜನಾ ಮಂಡಳಿಯ ಸದಸ್ಯರು ಭಾಗವಹಿಸಿದ್ದರು.

# ಕಂಡಕ್ಟರ್ ಮೇಲೆ ಮರಾಠಿ ಪುಂಡರು ಹಲ್ಲೆ ರಾಜ್ಯಾದ್ಯಂತ ತೀವ್ರಗೊಂಡ ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ,ಫೆ.24-ಕನ್ನಡ ಮಾತನಾಡು ಎಂದಿದ್ದಕ್ಕೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ(ಕೆಎಸ್ ಆರ್ ಟಿಸಿ) ಬಸ್ ಕಂಡಕ್ಟರ್ ನಿರ್ವಾಹಕನ ಮೇಲೆ ಮರಾಠಿ ಪುಂಡರು ಹಲ್ಲೆ ನಡೆಸಿದ ಪ್ರಕರಣ ತೀವ್ರ ಸ್ವರೂಪ ಪಡೆದು- ಕೊಂಡಿದೆ.

ಈ ಮಧ್ಯೆ, ಪೊಲೀಸರು ನಿರ್ವಾಹಕನ ಮೇಲೆ ಪೋಕ್ಸೋ ಕೇಸ್ ದಾಖಲು ಮಾಡಿರುವುದಕ್ಕೆ ರಾಜ್ಯಾದ್ಯಂತ ತೀವ್ರ ಆಕ್ರೋಶ ವ್ಯಕ್ತವಾಗಿರುವ ಬೆನ್ನಲ್ಲೇ, ಮಹಾರಾಷ್ಟ್ರ ಸಾರಿಗೆ ಬಸ್‌ಗಳ ಕರ್ನಾಟಕ ಸಂಚಾರ ಸ್ಥಗಿತಗೊಳಿಸಲಾಗಿದೆ.

ಬೆಂಗಳೂರಿನಿಂದ ಮುಂಬೈಗೆ ಹೊರಟಿದ್ದ ಮಹಾರಾಷ್ಟ್ರ ಬಸ್ ಮೇಲೆ ಚಿತ್ರದುರ್ಗದಲ್ಲಿ ಕನ್ನಡಪರ ಕಾರ್ಯಕರ್ತರು ದಾಳಿ ಮಾಡಿದ್ದಾರೆ. ಕಾರ್ಯಕರ್ತರು ಚಾಲಕ ಭಾಸ್ಕರ್ ಜಾಧವ್ ಅವರ ಮುಖಕ್ಕೂ ಕಪ್ಪು ಬಣ್ಣ ಬಳಿದು ಹಲ್ಲೆ ನಡೆಸಿದ್ದಾರೆ.

ಕರ್ನಾಟಕ ಸರ್ಕಾರ ಈ ವಿಷಯದ ಬಗ್ಗೆ ತನ್ನ ನಿಲುವನ್ನು ಸ್ಪಷ್ಟಪಡಿಸದ ಹೊರತು ಕರ್ನಾಟಕಕ್ಕೆ ಬಸ್ ಸೇವೆಗಳನ್ನು ಪುನರಾರಂಭಿಸಲಾಗುವುದಿಲ್ಲ' ಎಂದು ಮಹಾರಾಷ್ಟ್ರ ಸಾರಿಗೆ ಸಚಿವ ಸರ್ನಾಯಕ್ ತಿಳಿಸಿದ್ದಾರೆ.

ಕೆಎಸ್‌ಆರ್‌ಟಿಸಿ ಬಸ್ ಕಂಡಕ್ಟರ್ ಮೇಲಿನ ಹಲ್ಲೆ ಆರೋಪ ಪ್ರಕರಣದಲ್ಲಿ ಒಂದೆಡೆ ಓರ್ವ ಅಪ್ರಾಪ್ತ ಸೇರಿ ನಾಲ್ವರನ್ನು ಪೊಲೀಸರು ಬಂಧಿಸಿದ್ದು, ಕರ್ನಾಟಕ ಬಸ್‌ಗಳ ಮೇಲೆ ಮಹಾರಾಷ್ಟ್ರದಲ್ಲಿ ಪುಂಡರು ಪುಂಡಾಟಿಕೆ ಮೆರೆದಿದ್ದಾರೆ.

ಗಾಯಾಳು ನಿರ್ವಾಹಕನನ್ನು ಬಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅಲ್ಲಿಗೆ ವಿವಿಧ ಕನ್ನಡ ಪರ ಹೋರಾಟಗಾರರು ಭೇಟಿ ನೀಡಿ ಆರೋಗ್ಯ ವಿಚಾರಿಸಿದ್ದಾರೆ. ಬಳಿಕ ಹಲ್ಲೆ ಮಾಡಿದ ಮರಾಠಿ ಪುಂಡರನ್ನು ಬಂಧಿಸಬೇಕು ಎಂದು ಆಗ್ರಹಿಸಿದ್ದಾರೆ.

ಬಸ್ ಕಂಡಕ್ಟರ್ ಮಹಾದೇವಪ್ಪ ಮಲ್ಲಪ್ಪ ಹುಕ್ಕೇರಿ ಅವರ ಮೇಲೆ ಸಣ್ಣ ಬಾಳೇಕುಂದ್ರಿ ಗ್ರಾಮದ ಬಳಿ ಮರಾಠಿ ಮಾತನಾಡದಿರುವುದಕ್ಕೆ 20ಕ್ಕೂ ಹೆಚ್ಚು ಜನರ ಗುಂಪು ಹಲ್ಲೆ



ಮಾಡಿತ್ತು ಎಂಬ ಆರೋಪ ಕೇಳಿ ಬಂದಿತ್ತು. ಈ ಸಂಬಂಧ ಮಾರಿಹಾಳ ಪೊಲೀಸ್ ಠಾಣೆಯಲ್ಲಿ ಹಲ್ಲೆಗೊಳಗಾದ ಕಂಡಕ್ಟರ್ ದೂರು ದಾಖಲಿಸಿದ್ದರು.

ಪ್ರಕರಣ ದಾಖಲಿಸಿಕೊಂಡ ಪೊಲೀಸರು, ರಾತ್ರಿಯೇ ಓರ್ವ ಅಪ್ರಾಪ್ತ ಸೇರಿ ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ. ಸಣ್ಣ ಬಾಳೇಕುಂದ್ರಿ ಗ್ರಾಮದ ಮಾರುತಿ ತುರುಮುರಿ, ರಾಹುಲ್ ರಾಜು ನಾಯ್ಡು, ಬಾಳು ಗೋಜಗೇಕರ್ ಬಂಧಿತ ವಯಸ್ಕರರು. ಆರೋಪಿಗಳನ್ನು ಹಿಂಡಲಗಾ ಜೈಲಿಗೆ ಮಾರಿಹಾಳ ಪೊಲೀಸರು ರವಾನಿಸಿದ್ದಾರೆ.

ಕಂಡಕ್ಟರ್ ಮೇಲೆ ಹಲ್ಲೆ ಮಾಡಿದವರು ಹೊಸ ವರಸೆ ಶುರು ಮಾಡಿದ್ದಾರೆ. ಅಪ್ರಾಪ್ತ ಬಾಲಕಿಯಿಂದ ನಿರ್ವಾಹಕನ ಮೇಲೆ ಮಾರಿಹಾಳ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಕೇಸ್ ದಾಖಲಿಸಿದ್ದಾರೆ. ಹಿರಿಯ ಅಧಿಕಾರಿಗಳ ಗಮನಕ್ಕೆ ತರದೇ ಮಾರಿಹಾಳ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.

ಪೋಕ್ಸೋ ಕೇಸ್ ಬಗ್ಗೆ ಮಾತನಾಡಿದ ಮಹಾದೇವಪ್ಪ ಹುಕ್ಕೇರಿ, "ನಾನು ತಪ್ಪು ಮಾಡಿದ್ದರೆ ನೇಣಿಗೆ ಹಾಕಲಿ. ಆದರೆ, ತಮ್ಮ ತಪ್ಪು ಮುಚ್ಚಿಕೊಳ್ಳಲು ಅವರು ಕೇಸ್ ಹಾಕಿದ್ದಾರೆ. ನನ್ನ ಮೇಲೆಯೇ ಹಲ್ಲೆಯಾಗಿದ್ದು ನಾನು ಕೇಸ್ ಕೊಟ್ಟ ಮೇಲೆ ಈ ರೀತಿ ಮಾಡಿದ್ದಾರೆ" ಎಂದು ನೋವು ತೊಡಿಕೊಂಡಿದ್ದಾರೆ.

ಇತ್ತ ಘಟನೆ ಸಂಬಂಧ ನಗರ ಪೊಲೀಸ್ ಆಯುಕ್ತಯಡಾ ಮಾರ್ಟಿನ್ ಪ್ರತಿಕ್ರಿಯೆ ನೀಡಿದ್ದು, ಪೋಕ್ಸೋ ಕೇಸ್ ಕೊಡಲು ಬಂದಾಗ ನಾವು ತೆಗೆದುಕೊಳ್ಳಬೇಕು. ಇಲ್ಲವಾದರೆ ಮಾನವಹಕ್ಕುಗಳ ಆಯೋಗದ ಬಳಿಗೆ ಹೋಗಿ ಅಲ್ಲಿಂದ ಆದೇಶ ತರುತ್ತಾರೆ. ನಾವೇ ಕೇಸ್ ದಾಖಲಿಸಿಕೊಂಡು ಸತ್ಯಾಂಶ ಹೊರ ತೆಗೆಯುತ್ತೇವೆ ಎಂದು ಅಸಹಾಯಕತೆ ವ್ಯಕ್ತಪಡಿಸಿದ್ದಾರೆ.

ಹೋರಾಟಗಾರರ ಪ್ರತಿಭಟನೆ:

ಕಂಡಕ್ಟರ್ ಮೇಲಿನ ಪೋ- ಕ್ಸೋ ಕೇಸ್ ವಜಾ ಮಾಡುವಂತೆ ಒತ್ತಾಯಿಸಿ ಮಾರಿಹಾಳ ಪೊಲೀಸ್ ಠಾಣೆ ಮುಂದೆ ಕರ್ನಾಟಕ ರಕ್ಷಣಾ ವೇದಿಕೆ ನಾರಾಯಣಗೌಡ ಬಣದಿಂದ ಪ್ರತಿಭಟನೆ ನಡೆಸಲಾಯಿತು. ಈ ವೇಳೆ ಠಾಣೆಗೆ ಮುತ್ತಿಗೆ ಹಾಕಲು ಕರವೇ ಕಾರ್ಯಕರ್ತರು ಯತ್ನಿಸಿದರು.

ಹಲ್ಲೆ ಪ್ರಕರಣವನ್ನು ಮುಚ್ಚಿಹಾಕಲು ಕಂಡಕ್ಟರ್ ಮೇಲೆ ಈ ರೀತಿ ಪೋ- ಕ್ಸೋ ಕೇಸ್ ಹಾಕಲಾಗಿದೆ. ಕಂಡಕ್ಟರ್ ನೆರವಿಗೆ ಬರಬೇಕಿದ್ದ ಪೊಲೀಸರು ಈ ರೀತಿ ವರ್ತಿಸಿದ್ದು ಸರಿಯಲ್ಲ. ಇಡೀ ರಾಜ್ಯಾದ್ಯಂತ ಖಂಡನೆ ವ್ಯಕ್ತವಾಗುತ್ತಿದೆ. ಪ್ರಕರಣ ದಿಕ್ಕು ತಪ್ಪಿಸುವ ಕೆಲಸವನ್ನು ಪೊಲೀಸರು ಮಾಡುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಕಾರ್ಯಕರ್ತೆ ಆಯೆಷಾ ಸನದಿ ಠಾಣೆಯ ಮುಂಭಾಗದಲ್ಲಿ ಮಲಗಿ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ, ಕರವೇ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು. ಇತ್ತ ಅಥಣಿಯಲ್ಲಿ ಮಹಾರಾಷ್ಟ್ರ ಸಾರಿಗೆ ಬಸ್ ತಡೆದು ಕನ್ನಡದ ಬಾವುಟ ಕಟ್ಟಿ ಕನ್ನಡಿಗರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಏನಿದು ಪ್ರಕರಣ:

ಬೆಳಗಾವಿ - ಸುಳೇಬಾವಿ ಮಾರ್ಗಮಧ್ಯೆ ಸಂಚರಿಸುವ ಬಸ್‌ನಲ್ಲಿ ಟಿಕೆಟ್ ತೆಗೆದುಕೊಳ್ಳುವ ವಿಚಾರಕ್ಕೆ ಗಲಾಟೆ ನಡೆದಿತ್ತು. ಬಾಳೇಕುಂದ್ರಿಗೆ ಸಿಬಿಟಿಯಿಂದ ಯುವಕ,ಯುವತಿ ಬಸ್ ಹತ್ತಿದ್ದರು.ಯುವತಿ ಎರಡು ಟಿಕೆಟ್ ಕೇಳಿ ಪಡೆದಿದ್ದಳು. ಮಹಿಳೆಯರಿಗೆ ಉಚಿತ ಟಿಕೆಟ್ ಇದ್ದುದರಿಂದ ನಿರ್ವಾಹಕ ಮಹಾದೇವ್ ಎರಡೂ ಉಚಿತ ಟಿಕೆಟ್ ನೀಡಿಬಿಟ್ಟಿದ್ದರು.

ಬಳಿಕ ಇನ್ನೊಬ್ಬರು ಯಾರು ಅಂತ ಆ ಯುವತಿಯನ್ನು ಕೇಳಿದಾಗ ಪಕ್ಕದಲ್ಲಿದ್ದ ಯುವಕನನ್ನು ತೋರಿಸಿದ್ದಳು. ಇದರಿಂದ ನಿರ್ವಾಹಕ ಮಹಾದೇವ್, ಯುವಕರಿಗೆ ಉಚಿತ ಟಿಕೆಟ್ ನೀಡಿದರೆ ನನ್ನನ್ನು ಸಸ್ಪೆಂಡ್ ಮಾಡುತ್ತಾರೆ, ಉಚಿತ ಟಿಕೆಟ್ ಹೆಣ್ಣು ಮಕ್ಕಳಿಗೆ ಮಾತ್ರ, ನೀವು ಟಿಕೆಟ್ ಪಡೆಯುವಾಗ ಸರಿಯಾಗಿ ಹೇಳಿ ತೆಗೆದುಕೊಳ್ಳಬೇಕು ಎಂದು ಯುವತಿಗೆ ತಿಳಿ ಹೇಳಿದ್ದರು. ಅದಕ್ಕೆ ಆ ಯುವತಿ ಮರಾಠಿಯಲ್ಲಿ ಮಾತಾಡು,ಮರಾಠಿ ಕಲಿತುಕೊಳ್ಳಬೇಕು ಎಂದಿದ್ದಳು. ಮುಂದೆ ಬಾಳೇಕುಂದ್ರಿ ಕೆಎಚ್ ಬರುತ್ತಿದ್ದಂತೆ ಯುವತಿಯ ಕಡೆಯ 20 ಜನರು ನಿರ್ವಾಹಕ ಮಹಾದೇವ್ ಮೇಲೆ ಹಲ್ಲೆ ಮಾಡಿದ್ದರು ಎಂದು ಆರೋಪಿಸಲಾಗಿತ್ತು.

# ಬೊಜ್ಜು ನಿವಾರಣೆಗೆ ಆರೋಗ್ಯ ಸಲಹೆ ನೀಡಿದ ಪ್ರಧಾನಿ ಮೋದಿ!

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ: ಅಧಿಕ ತೂಕ ಅಥವಾ ಬೊಜ್ಜು ಸಮಸ್ಯೆ ನಿವಾರಣೆಗೆ ಪ್ರಧಾನಿ ನರೇಂದ್ರ ಮೋದಿ ಭಾನುವಾರ ಉತ್ತಮ ಆರೋಗ್ಯ ಸಲಹೆ ನೀಡಿದ್ದಾರೆ. ಆಹಾರದಲ್ಲಿ ಕಡಿಮೆ ಪ್ರಮಾಣದ ಎಣ್ಣೆ ಬಳಸುವಂತೆ ಅವರು ಜನರಿಗೆ ಸಲಹೆ ನೀಡಿದ್ದಾರೆ. ಅಡುಗೆ ಎಣ್ಣೆ ಬಳಕೆಯನ್ನು ಶೇ.10 ರಷ್ಟು ಕಡಿತಗೊಳಿಸುವಂತೆ ಅವರು ಮನವಿ ಮಾಡಿದ್ದಾರೆ.



ತಮ್ಮ ಮಾಸಿಕ ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ, ಆಹಾರದಲ್ಲಿ ಕಡಿಮೆ ಎಣ್ಣೆ ಬಳಸುವುದು ಮತ್ತು ಸ್ಥೂಲಕಾಯತೆ ನಿಭಾಯಿಸುವುದು ಕೇವಲ ವೈಯಕ್ತಿಕ ಆಯ್ಕೆಯಾಗಿರದೆ ಕುಟುಂಬದ ದೃಷ್ಟಿಯಿಂದ ಇದು ನಮ್ಮ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಜನರು ಆರೋಗ್ಯಕರ ಜೀವನ ಶೈಲಿ ಅಳವಡಿಸಿಕೊಳ್ಳುವಂತೆ ಇರುವ ಡಬಲ್ ಒಲಿಂಪಿಕ್ ಪದಕ ವಿಜೇತ ಜಾವೆಲಿನ್ ಎಸೆತಗಾರ ನೀರಜ್ ಚೋಪ್ರಾ ಮತ್ತು ಬಾಕ್ಸಿಂಗ್ ಚಾಂಪಿಯನ್ ನಿಖತ್ ಜರೀನ್ ಅವರ ಸಂದೇಶಗಳನ್ನು ಮೋದಿ ನುಡಿದರು. ಡೆಹ್ರಾಡೂನ್‌ನಲ್ಲಿ ರಾಷ್ಟ್ರೀಯ ಕ್ರೀಡಾಕೂಟದ ಉದ್ಘಾಟನೆಯ ಸಂದರ್ಭದಲ್ಲಿ ಬಹಳ ಮುಖ್ಯವಾದ ವಿಷಯ ಪ್ರಸ್ತಾಪಿಸಿದ್ದೆ. ಅದು ದೇಶದಲ್ಲಿ ಹೊಸ ಚರ್ಚೆಯನ್ನು ಪ್ರಾರಂಭಿಸಿದೆ. ಅದು ಬೊಜ್ಜಿನ ವಿಚಾರವಾಗಿದೆ. ಫಿಟ್ ಮತ್ತು ಆರೋಗ್ಯ ರಾಷ್ಟ್ರವಾಗಲು ಬೊಜ್ಜಿನ ಸಮಸ್ಯೆಯಿಂದ ಮುಕ್ತಿ ಹೊಂದಬೇಕಾಗಿದೆ ಎಂದು ಮೋದಿ ಹೇಳಿದರು.

ಅಧ್ಯಯನವೊಂದರ ಪ್ರಕಾರ ಎಂಟು ಜನರಲ್ಲಿ ಒಬ್ಬರು ಬೊಜ್ಜಿನ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಕಳೆದ ವರ್ಷಗಳಲ್ಲಿ ಸ್ಥೂಲಕಾಯದ ಪ್ರಕರಣಗಳು ದ್ವಿಗುಣಗೊಂಡಿವೆ. ನ್ನೂ ಹೆಚ್ಚು ಆತಂಕಕಾರಿ ಸಂಗತಿಯೆಂದರೆ ಸ್ಥೂಲಕಾಯದ ಸಮಸ್ಯೆ ಮಕ್ಕಳಲ್ಲಿ ನಾಲ್ಕು ಪಟ್ಟು ಹೆಚ್ಚಾಗಿದೆ ಎಂದು ಪ್ರಧಾನಿ ಹೇಳಿದರು. ಸುರಂಗದಲ್ಲಿ ಸಿಲುಕಿ 8 ಕಾರ್ಮಿಕರ ಆಕ್ರಂದನ: ಸಿಎಂ ರೇವಂತ್ ರೆಡ್ಡಿಗೆ ಅಗತ್ಯ ನೆರವಿನ ಭರವಸೆ ನೀಡಿದ ಪ್ರಧಾನಿ ಮೋದಿ, ನಿರಂತರ ರಕ್ಷಣಾ ಕಾರ್ಯಾಚರಣೆ!

2022ರ ವಿಶ್ವ ಆರೋಗ್ಯ ಸಂಸ್ಥೆ ದತ್ತಾಂಶದ ಪ್ರಕಾರ ವಿಶ್ವದಾದ್ಯಂತ ಸುಮಾರು 250 ಕೋಟಿ ಜನರು ಅಧಿಕ ತೂಕವನ್ನು ಹೊಂದಿರುವುದನ್ನು ತೋರಿಸುತ್ತದೆ. ಅಂದರೆ ಅವರು ಅಗತ್ಯಕ್ಕಿಂತ ಹೆಚ್ಚು ತೂಕವನ್ನು ಹೊಂದಿದ್ದಾರೆ. ಈ ಅಂಕಿಅಂಶಗಳು ತುಂಬಾ ಗಂಭೀರವಾಗಿದ್ದು, ಇದು ಏಕೆ ಉಂಟಾಗುತ್ತಿದೆ ಎಂಬುದರತ್ತ ಯೋಚಿಸುವಂತೆ ಮಾಡಿದೆ. ಅಧಿಕ ತೂಕ ಅಥವಾ ಬೊಜ್ಜು ಅನೇಕ ರೀತಿಯ ಸಮಸ್ಯೆಗಳು ಮತ್ತು ರೋಗಗಳಿಗೆ ಕಾರಣವಾಗುತ್ತದೆ. ಸಣ್ಣ ಪ್ರಯತ್ನಗಳಿಂದ ಈ ಸವಾಲನ್ನು ನಿಭಾಯಿಸಬಹುದು ಎಂದು ಮೋದಿ ಹೇಳಿದರು.

# ಕಾನೂನಿನಡಿ ಎಲ್ಲರೂ ಸಮಾನರು ಎಂಬ ಪರಿಕಲ್ಪನೆ ಹೊಂದಬೇಕು: ನ್ಯಾಯಾಧೀಶ ರಾಜೇಶ್ ಎನ್.ಹೊಸಮನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.24: ಕಾನೂನಿನಡಿ ಎಲ್ಲ ಮಾನವರು ಸಮಾನರು ಎಂಬ ಪರಿಕಲ್ಪನೆಯಲ್ಲಿ ನಡೆದಾಗ ಸಾಮಾಜಿಕ ನ್ಯಾಯ ದೊರೆ-ಯುತ್ತದೆ. ಸಾಮಾಜಿಕ ನ್ಯಾಯಕ್ಕೆ ಧಕ್ಕೆಯಾದಲ್ಲಿ ನ್ಯಾಯಾಲಯವು ನ್ಯಾಯ ಒದಗಿಸಿಕೊಡುತ್ತದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರೂ ಆಗಿರುವ ರಾಜೇಶ್ ಎನ್. ಹೊಸಮನೆ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ ನಂ.2 ಆವರಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿಶ್ವ ಸಾಮಾಜಿಕ ನ್ಯಾಯ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಮಾನತೆ ಮತ್ತು ಸ್ವಾತಂತ್ರ ಇವೆರಡು ದೇಶದ ಕಟ್ಟಕಡೆಯ ವ್ಯಕ್ತಿಗೆ ತಲುಪಿದಾಗ ನಿಜವಾದ ಸಾಮಾಜಿಕ ಸಮಾನತೆ ದೊ-ರೆಯುತ್ತದೆ. ಅಸಮಾನತೆಯನ್ನು ತೊಲಗಿಸಬೇಕೆಂದರೆ ಸಮಾನತೆಯ ಹಂಚಿಕೆಯನ್ನು ಕ್ರಮವಾಗಿ ಮಾಡಬೇಕು ಎಂದು ಅಭಿಪ್ರಾಯ ಪಟ್ಟರು.

ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರು ಜಾತಿ ನಿಂದನೆ, ಅವಮಾನ-ಅಪಮಾನಗಳಂತಹ ಕಷ್ಟ-ಕಾರ್ಪಣ್ಯಗಳನ್ನು ಸಹಿಸಿಕೊಂಡು ಕೇವಲ ವಿದ್ಯಾರ್ಜನೆಯಿಂದ ಬದಲಾವಣೆ ಎಂಬುದು ಅರಿತುಕೊಂಡು ಶ್ರೇಷ್ಠ ವ್ಯಕ್ತಿಯಾದರು. ಪ್ರಸ್ತುತ ಜಗತ್ತಿನಲ್ಲಿ ಬಡವ ಮತ್ತು ಶ್ರೀಮಂತ ಎಂಬ ಎರಡು ಜಾತಿ ಇವೆ. ಜ್ಞಾನಾರ್ಜನೆಯಿಂದ ಆರ್ಥಿಕವಾಗಿ ಸಬಲರಾದರೆ ಎಲ್ಲಾರೂ ನಿಮ್ಮ ಹಿಂದೆ ಬರುತ್ತಾರೆ ಎಂದು ಕಿವಿ ಮಾತು ಹೇಳಿದರು.

ಈ ಸಂದರ್ಭದಲ್ಲಿ ಸಂಚಾರಿ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಆಯ್ಯನಗೌಡ ಪಾಟೀಲ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ.ಬಿ., ಸಹಾಯಕ ನಿರ್ದೇಶಕರಾದ ಮಮತ, ನಿಲಯ ಪಾಲಕ ಶಿವಪ್ಪ, ಸರಳಾದೇವಿ ಕಾಲೇಜಿನ ಉಪನ್ಯಾಸಕರಾದ ಮಲ್ಲನ ಗೌಡ, ವಿಜಯ್ ಕುಮಾರ್ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ನಿಲಯದ ಸಿಬ್ಬಂದಿಗಳು, ಇನ್ನಿತರರು ಉಪಸ್ಥಿತರಿದ್ದರು.

ನಂತರ ಹಾಸ್ಟೆಲ್‌ನ ಗ್ರಂಥಾಲಯ, ಅಡುಗೆ ಕೋಣೆ ಹಾಗೂ ಅಲ್ಲಿನ ಸ್ವಚ್ಚತೆ ವೀಕ್ಷಣೆ ಮಾಡಿದರು.

# ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಖಾತ್ರಿಪಡಿಸಬೇಕೆಂದು ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಫೆ.24: ನಗರದ ವಾಲ್ಮೀಕಿ ಸರ್ಕಲ್ ಬಳಿ ಇಂದು ಎಐಡಿಎಸ್ ಓ ಸಂಘಟನೆ ನೇತೃತ್ವದಲ್ಲಿ ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಖಾತ್ರಿಪಡಿಸಬೇಕೆಂದು ಆಗ್ರಹಿಸಿದರು.

ಎಐಡಿಎಸ್‌ಓನ ಜಿಲ್ಲಾ ಉಪಾಧ್ಯಕ್ಷ ಶಾಂತಿ ಮಾತನಾಡಿ, ಕಳೆದ ಮೂರು ವರ್ಷಗಳಿಂದ ರಾಜ್ಯದ ಪದವಿ, ಸ್ನಾತಕೋತ್ತರ, ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸರಿಯಾಗಿ ವಿದ್ಯಾರ್ಥಿ ವೇತನ ಲಭ್ಯವಾಗುತ್ತಿಲ್ಲ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ಪದವಿ, ಸ್ನಾತಕೋತ್ತರ ಇಂಜಿನಿಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ದೊರೆತಿಲ್ಲ. ರಾಜ್ಯದ ಹಲವೆಡೆ ಕೆಲವು ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಕೂಡ ವಿದ್ಯಾರ್ಥಿ ವೇತನದಿಂದ ವಂಚಿತರಾಗಿದ್ದಾರೆ. ವಿದ್ಯಾರ್ಥಿ ವೇತನವು ಸರ್ಕಾರದ ಭಿಕ್ಷೆಯಲ್ಲ ಅದು ನಮ್ಮ ಹಕ್ಕು ಎಂದು ಆಗ್ರಹಿಸಿದರು.

ಜಿಲ್ಲಾ ಅಧ್ಯಕ್ಷ ಈರಣ್ಣ ಮಾತನಾಡಿ, ಇಲ್ಲಿಯವರೆಗೂ ಸಂಬಂಧಪಟ್ಟ ಸಚಿವರಿಗೆ, ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ, ಈವರೆಗೂ ಯಾವುದೇ ಕ್ರಮ ಸರ್ಕಾರ ಕೈಗೊಂಡಿಲ್ಲ. ಕ್ರಮೇಣ ರಾಜ್ಯದಲ್ಲಿ ವಿದ್ಯಾರ್ಥಿ ವೇತನವನ್ನೇ ಕಡಿತಗೊಳಿಸುವ ಪರಿಸ್ಥಿತಿ ಉಂಟಾಗುವ ಆತಂಕ ರಾಜ್ಯದ ವಿದ್ಯಾರ್ಥಿಗಳಿಗಿದೆ, ವಿದ್ಯಾರ್ಥಿವೇತನ ಅನ್ನುವುದು ವಿದ್ಯಾರ್ಥಿಗಳ ಹಕ್ಕು, ಇದನ್ನು ಕಸಿದುಕೊಳ್ಳುವ ಸರ್ಕಾರದ ನಡೆಯನ್ನು ಒಪ್ಪೋದಿಲ್ಲ ಈಗಲಾದರೂ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡುವ ವ್ಯವಸ್ಥೆಯನ್ನು ಮಾಡಬೇಕೆಂದು ಆಗ್ರಹಿಸಿದರು.

ಮುಂದಿನ ವಿದ್ಯಾರ್ಥಿ ವೇತನ ಬರೆದಿರುವ ವಿದ್ಯಾರ್ಥಿಗಳನ್ನು ಸೇರಿಸಿ ಮಾರ್ಚ್ 1ನೇ ತಾರೀಕು ಸರ್ಕಾರದ ವಿರುದ್ಧ ಬಲಿಷ್ಠ ಬೆಂಗಳೂರು ಚಲೋ ಹೋರಾಟವನ್ನು ಸಂಘಟಿಸುತ್ತೇವೆ ಈ ಹೋರಾಟದಲ್ಲಿ ಎಲ್ಲ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಬೇಕೆಂದು ವಿದ್ಯಾರ್ಥಿಗಳಿಗೆ ಕರೆನೀಡಿದರು.

ಎಐಡಿಎಎಸ್‌ಓ ನ ಜಿಲ್ಲಾ ಉಪಾಧ್ಯಕ್ಷೆ ಉಮಾ ಜಿಲ್ಲಾ ಕಚೇರಿ ಕಾರ್ಯದರ್ಶಿ ನಿಹಾರಿಕಾ ಇನ್ನಿತರರು ಭಾಗವಹಿಸಿದ್ದರು.

# ಯಶಸ್ವಿಯಾಗಿ ಜರುಗಿದ ಜ್ಞಾನಸಿರಿ ಉತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಫೆ,24-ಬಳ್ಳಾರಿಯ ಅಲ್ಲೀಪುರ ಮಹಾದೇವತಾತನವರ ಜ್ಞಾನರಂಭಾಪುರಿ ಶಿವಕ್ಷೇತ್ರದಲ್ಲಿ ಉಚಿತ ಪ್ರಸಾದ ನಿಲಯದಿಂದ ಜ್ಞಾನಸಿರಿ ಉತ್ಸವವು ನಿನ್ನೆ ಅತಿ ವಿಜೃಂಭಣೆಯಿಂದ ಜರುಗಿತು. ಪ್ರತಿ ವರ್ಷದಂತೆ ಶ್ರೀಮಠದಲ್ಲಿ ಪ್ರಸಾದ ನಿಲಯ ಟ್ರಸ್ಟ್ ಮತ್ತು ವಿದ್ಯಾ ಸಂಸ್ಥೆ ಟ್ರಸ್ಟ್ ನಿಂದ 6ನೇ ತರಗತಿಯಿಂದ 10ನೇ ತರಗತಿ ಓದುತ್ತಿರುವ ವಿದ್ಯಾರ್ಥಿಗಳಿಗೆ ವೈಧಿಕ ಶಿವಪೂಜಾ ತರಬೇತಿಯನ್ನು ವೀರಶೈವ ಲಿಂಗಾಯತ ವಿದ್ಯಾರ್ಥಿಗಳಿಗೆ ಬೇಸಿಗೆ ರಜಾ ಶಿಬಿರವನ್ನು ಎಪ್ರಿಲ್ 11 ರಿಂದ ಮೇ 11 ರವರಗೆ ನಡೆಸಲಾಗುವುದು ಎಂದು ಟ್ರಸ್ಟ್ ಸಮಿತಿ ಸದಸ್ಯರುಗಳಾದ ಶ್ರೀ ಸಂಗನಕಲ್ಲು ಬಸವರಾಜರವರು ತಿಳಿಸಿದ್ದಾರೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 2025 ಮಾರ್ಚ 31 ಇದ್ದು ಹೆಚ್ಚಿನ ಮಾಹಿತಿಗೆ ಶ್ರೀ ಸದ್ಗುರು ಮಹಾದೇವತಾತನವರ ಮಠ ಅಲ್ಲಿಪುರ, ಬಳ್ಳಾರಿಯಲ್ಲಿ ಸಂಪರ್ಕಿಸುವಂತೆ ತಿಳಿಸಿದ್ದಾರೆ.

ಶ್ರೀ ಮಠದಲ್ಲಿ ಸಂಸ್ಕೃತ ಪಾಠಶಾಲೆಯು 1994ರಲ್ಲಿ ಪ್ರಾರಂಭಗೊಂಡಿದ್ದು ಸುಮಾರು 1000ಕ್ಕು ಹೆಚ್ಚು ವಿದ್ಯಾರ್ಥಿಗಳು ಶ್ರೀ ಮಹಾದೇವತಾತನವರ ಕೃಪಾಶೀರ್ವಾದದಿಂದ ಉನ್ನತ ಹುದ್ದೆಗಳನ್ನು ಆರಂಭಿಸಿದ್ದಾರೆ ಎಂದು ಟ್ರಸ್ಟ್ ಕಮಿಟಿ ಸದಸ್ಯರಾದ ಎಸ್. ಹಿಮಂತರಾಜ ರವರು "ಜ್ಞಾನ ಸಿರಿ ಉತ್ಸವ" ವನ್ನು ದೀಪಬೆಳಗಿಸುವುದರ ಮೂಲಕ ಉದ್ಘಾಟಿಸಿ ತಮ್ಮ ಉದ್ಘಾಟನೆ ನುಡಿಯಲ್ಲಿ ತಿಳಿಸಿದರು. ಪ್ರಾಥಮಿಕ ಶಾಲೆಯ, ಸಂಸ್ಕೃತ ಪಾಠಶಾಲೆ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.

ಮುಖಂಡರುಗಳಾದ ವೀರಶೈವ ವಿದ್ಯಾ ವರ್ಧಕ ಸಂಘದ ಸದಸ್ಯರುಗಳಾದ ಜಾನೆಕುಂಟೆ ನೇಪಾಕ್ಷಪ್ಪ,, ಆರ್.ಹೆಚ್.ಯಂ. ಚನ್ನಬಸವಸ್ವಾಮಿ, ಹಲಕುಂದಿ ಲಕ್ಷ್ಮೀಪತಿ ಉಪಸ್ಥಿದರಿದ್ದರು.

# ಸಮಾಜ ಗೌರವಿಸುವ ವ್ಯಕ್ತಿತ್ವ ರೂಪಿಸಿಕೊಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ವಿದ್ಯಾರ್ಥಿಗಳು ಸಮಾಜ ಗುರುತಿಸುವಂಥ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ಬೀದರನ ಬಿ.ವಿ. ಭೂಮರಡ್ಡಿ ಕಾಲೇಜಿನ ಪ್ರಾಚಾರ್ಯ ಡಾ. ಪಿ. ವಿಠ್ಠಲರೆಡ್ಡಿ ಹೇಳಿದರು.

ಕಮಲನಗರ ತಾಲ್ಲೂಕಿನ ಠಾಣಾಕುಶನೂರಿನ ಶ್ರೀ ಮಾಣಿಕರಾವ್ ಪಾಟೀಲ ಗ್ರಾಮೀಣ ಪಾಲಿಟೆಕ್ನಿಲ್‌ನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ವಿಶೇಷ ಶಿಬಿರದ ಪ್ರಯುಕ್ತ ಶನಿವಾರ ನಡೆದ ವ್ಯಕ್ತಿತ್ವ ವಿಕಸನ ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜೀವನದಲ್ಲಿ ಶಿಸ್ತು, ಸಂಯಮ, ಸಮಯ ಪ್ರಜ್ಞೆ ಮೈಗೂಡಿಸಿಕೊಳ್ಳಬೇಕು. ಜ್ಞಾನಾರ್ಜನೆಗೆ ಉತ್ತಮ ಪುಸ್ತಕಗಳನ್ನು ಓದಬೇಕು ಎಂದು ತಿಳಿಸಿದರು.

ಬಿ.ವಿ. ಭೂಮರಡ್ಡಿ ಕಾಲೇಜು ಉಪಪ್ರಾಚಾರ್ಯ ಅನಿಲಕುಮಾರ ಆಣದೂರೆ ಮತನಾಡಿ, ಪರಿಸರ ಸಂರಕ್ಷಣೆಗೆ ಮರ, ಗಿಡಗಳನ್ನು ಬೆಳೆಸಬೇಕು. ಪ್ಲಾಸ್ಟಿಕ್ ಬಳಕೆಯನ್ನು ತ್ಯಜಿಸಬೇಕು. ಪರಿಸರಸ್ನೇಹಿಯಾಗಿ ಬದುಕಬೇಕು ಎಂದು ಹೇಳಿದರು.

ಮಾಣಿಕರಾವ್ ಪಾಟೀಲ ಪಾಲಿಟೆಕ್ನಿಕ್ ಪಠ್ಯಕ್ರಮದ ಜತೆಗೆ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಹೊಣೆಗಾರಿಕೆ ಅರಿವು ಸಹ ಮೂಡಿಸುತ್ತಿರುವುದು ಶ್ಲಾಘನೀಯ ಎಂದರು.


ಪ್ರಾಚಾರ್ಯ ರಾಜಶೇಖರ ಮುದ್ದಾ ಅಧ್ಯಕ್ಷತೆ ವಹಿಸಿದ್ದರು. ಸಿವಿಲ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಅಶೋಕ ಉಚ್ಚೆಕರ್, ಪ್ರಥಮ ದರ್ಜೆ ಸಹಾಯಕ ಅಶೋಕ್ ಶೆಟಕಾರ್ ಉಪಸ್ಥಿತರಿದ್ದರು.

ರಾಷ್ಟ್ರೀಯ ಸೇವಾ ಯೋಜನೆಯ ಸಂಯೋಜನಾಧಿಕಾರಿ ಸಂಗಮೇಶ ಆಣದೂರೆ ಸ್ವಾಗತಿಸಿದರು. ರೇವಣಪ್ಪ ವಾಕಡೆ ನಿರೂಪಿಸಿದರು. ವಿಶ್ವನಾಥ ಶಾಸ್ತ್ರಿ ವಂದಿಸಿದರು.

# ಗ್ಲಾಸ್ ಬಜಾರಿನಲ್ಲಿ ಪತ್ನಿ ಕೊಂದು ಪತಿ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ'

ಬಳ್ಳಾರಿ: ಫೆ,24-ಕೌಟುಂಬಿಕ ಕಲಹದಿಂದ ಪತಿ ಪತ್ನಿಗೆ ಹೊಡೆದು ಸಾಯಿಸಿ, ತಾನು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಗ್ಲಾಸ್ ಬಜಾರ್ ನಲ್ಲಿ ನಿನ್ನೆ ಸಂಜೆ ನಡೆದಿದೆ.



ರಾಜಸ್ಥಾನ ಮೂಲದ ಜೀನ್ಸ್ ಬಟ್ಟೆ ವ್ಯಾಪಾರಿ ಶಂಕರ್ ರಾಮ್ (40), ಶಾಂತಿ ದೇವಿ (34) ಮೃತ ದಂಪತಿಗಳು.

ಕ್ಷುಲ್ಲಕ ಕಾರಣಕ್ಕೆ ಒಬ್ಬರಿಗೊಬ್ಬರು ಜಗಳವಾಡುವಾಗ ಪತ್ನಿ ಶಾಂತಾ ದೇವಿ ತಲೆಗೆ ಶಂಕರ್ ರಾವ್ ಸ್ಟೀಲ್ ಪ್ಲಾಸ್ಕ್‌ನಿಂದ ಹೊಡೆದಿದ್ದು. ಇದರಿಂದ ಆಕೆಯ ಮೂಗಿನಲ್ಲಿ ರಕ್ತಸೋರಿ ಸಾವನ್ನಪ್ಪಿದ್ದಾಳೆ.

ಇದರಿಂದ ಭಯಗೊಂಡ ಶಂಕರ್ ರಾಮ್ ನೇಣಿಗೆ ಶರಣಾಗಿದ್ದಾನೆ. ಮೃತ ದಂಪತಿಗೆ ಒಂದು ಹೆಣ್ಣು, ಇಬ್ಬರು ಗಂಡು ಮಕ್ಕಳಿವೆ. ಮಕ್ಕಳು ಶಾಲೆಯಿಂದ ಬಂದ ನಂತರ ಇವರು ಸಾವನ್ನಪ್ಪಿರುವುದು ಬೆಳಕಿಗೆ ಬಂದಿದೆ.

ಬಳ್ಳಾರಿ ನಗರದಲ್ಲಿ ಕಳೆದ 15 ವರ್ಷಗಳಿಂದ ನೆಲೆಸಿದ್ದ ಶಂಕರ್ ರಾಮ್, ಜೀನ್ಸ್ ಅಂಗಡಿ ಇಟ್ಟುಕೊಂಡಿದ್ದರು. ಪತಿ ಪತ್ನಿ ನಡುವೆ ಆಗಾಗ ಸಣ್ಣಪುಟ್ಟ ಜಗಳವಾಗುತ್ತಿತ್ತು, ಅದನ್ನು ಹೊರತುಪಡಿಸಿ ಅನ್ಯೋನ್ಯವಾಗಿ ಇದ್ದರು ಎಂದು ಸ್ಥಳೀಯರ ಅಭಿಪ್ರಾಯವಾಗಿದೆ. ಬ್ರೂಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಜ್ಞಾನ ನಿವಾರಣೆಗೆ ಸರ್ವಜ್ಞನ ವಚನಗಳು ಸಹಕಾರಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಫೆ.24: ಅಜ್ಞಾನ, ಅಂಧಕಾರ, ಅಹಂಕಾರ, ದುರ್ಗುಣ, ಆಡಂಬರದ ಜೀವನ ಹೋಗಲಾಡಿಸಲು ಸರ್ವಜ್ಞ ವಚನಗಳು ತುಂಬಾ ಸಹಕಾರಿ ಎಂದು ಕರ್ನಾಟಕ ರಾಜ್ಯ ಕ್ರಿಯಾಶೀಲ ಶಿಕ್ಷಕರ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ರವಿಚೇಳ್ಳಗುರ್ಕಿ ಹೇಳಿದರು.

ತಾಲೂಕಿನ ಸಂಜೀವರಾಯನಕೋಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಸರ್ವಜ್ಞ ಕವಿಯ 505ನೇ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದರು.

ಆಡು ಮುಟ್ಟದ ಸೊಪ್ಪಿಲ್ಲ ಸರ್ವಜ್ಞ ತಿಳಿಸದ ವಿಷಯವಿಲ್ಲ. ಅವರ ತ್ರಿಪದಿ ಲಯ, ಪ್ರಾಸ, ನೈತಿಕತೆಯಿಂದ ಕೂಡಿವೆ. ಸಾಮಾನ್ಯ ಜನರಿಗೂ ಅರ್ಥವಾಗುವಂತೆ ಸರಳ ಪದಗಳಿಂದ ಕೂಡಿ ವಿಶಾಲ ಅರ್ಥ ಹೊಂದಿವೆ.

ವಿದ್ಯೆ ಕಲಿಸದ ತಂದೆ ಬುದ್ಧಿ ಹೇಳದ ಗುರುವು ಬಿದ್ದಿರಲು ಬಂದು ನೋಡದಾ ತಾಯಿಯು ಶುದ್ಧ ವೈರಿಗಳು ಸರ್ವಜ್ಞ ಎಂಬ ವಚನದಲ್ಲಿ ಮಕ್ಕಳ ಬೆಳೆವಣಿಗೆಯಲ್ಲಿ ತಂದೆ, ಗುರು ಹಾಗೂ ತಾಯಿಯ ಪಾತ್ರ ಎಷ್ಟು ಪ್ರಾಮುಖ್ಯತೆ ಪಡೆದಿದೆ ಎಂಬುದನ್ನು ಹೇಳಿದ್ದಾರೆ. ಆದ್ದರಿಂದ ವಿದ್ಯಾರ್ಥಿಗಳು ಸರ್ವಜ್ಞ ಕವಿಯ ತ್ರಿಪದಿಗಳನ್ನು ಸಂಗ್ರಹಿಸಿ ಓದಿರಿ ಎಂದು ಹೇಳಿದರು.




ಹಲಕುಂದಿ ಕ್ಲಸ್ಟರ್ ಈಐಓ ಮಕ್ಕಳ ಕಲಿಕಾ ಹಬ್ಬ 2024-25ರ ಗಟ್ಟಿ ಓದು ಸ್ಪರ್ಧೆಯಲ್ಲಿ ವಿಜೇತ ನಾಲ್ಕನೇ ತರಗತಿಯ ಶ್ರೀ ವಚನಳನ್ನು ಸನ್ಮಾನಿಸಿ ಗೌರವಿಸಲಾಯಿತು. ದ್ವಿತೀಯ ಬಹುಮಾನ ಗಳಿಸಿದ ಮೇಘನಾ, ಅಂಜಿನಿ, ಲಾವಣ್ಯ, ಸಿಂಚನ ಹಾಗೂ ಹರ್ಷಗೆ ಬಹುಮಾನ ವಿತರಿಸಲಾಯಿತು.

ಶಿಕ್ಷಕರಾದ ದಿಲ್ಷಾದ್ ಬೇಗಂ, ಚನ್ನಮ್ಮ, ಸುಮತಿ, ವೈಶಾಲಿ, ಶ್ವೇತಾ, ಉಮ್ಮೇಹಾನಿ, ಶಶಮ್ಮ, ರಾಮಾಂಜಿನೇಯ, ಗುರುಪ್ರಸಾದ್, ವಿಜಯ ಮುಂಡ್ರಿಗಿ, ಮೀನಾಕ್ಷಿ ಹಾಗೂ ವಿದ್ಯಾರ್ಥಿ ಪ್ರತಿನಿಧಿ ಕೆ.ಎಸ್. ಅನುಷ ಮುಂತಾದವರು ಉಪಸ್ಥಿತರಿದ್ದರು.

# ಯಾನಾಗುಂದಿ: ಫೆ.26ರಿಂದ ಮಹಾ ಶಿವರಾತ್ರಿ ಉತ್ಸವ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.24:ಜಿಲ್ಲೆಯಸೇಡಂ ತಾಲೂಕಿನಯಾನಗುಂದಿಯಲ್ಲಿ ಶ್ರೀ ರೂಪರಹಿತ ಅಹಿಂಸಾ ಯೋಗೇಶ್ವರಮಾತಾಮಾಣಿಕೇಶ್ವರಿ ಅಮ್ಮನವರ ದೇವಸ್ಥಾನದಲ್ಲಿ ಫೆ. 26ರಿಂದ ಮಹಾಶಿವರಾತ್ರಿ ಉತ್ಸವಜರುಗಲಿದೆಎಂದುಮಾತಾ ಮಾಣಿಕೇಶ್ವರಿ ಆಶ್ರಮ ಟ್ರಸ್ಟ್ ಕಾರ್ಯದರ್ಶಿ ಶಿವಯ್ಯಸ್ವಾಮಿ ಹಾಗೂ ಖಜಾಂಚಿ ಸಿದ್ರಾಮಪ್ಪ ಸಣ್ಣೂರ್ ತಿಳಿಸಿದ್ದಾರೆ.



26ರಂದು ಬೆಳಗ್ಗೆ 9 ಗಂ–ಟೆಗೆ ಮಹಾನ್ಯಾಸಪೂರ್ವಕ ಮಹಾರುದ್ರಾಭಿಷೇಕ, ಪಾದಕ ಪೂಜೆ , ಮಹಾ ಮಂಗಳಾರತಿ ಜರಗುವುದು. ಶ್ರೀಮಾತಾ ಮಾಣಿಕೇಶ್ವರಿ ಅಮ್ಮನವರ ಸನ್ನಿಧಾನದಲ್ಲಿ ಮಧ್ಯಾಹ್ನ 12ರಿಂದಮಹಾಶಿವರಾತ್ರಿಉತ್ಸವ ಜರುಗುವುದು. ಫೆ.27 ರಂದು ಸಂಜೆ 7ಕ್ಕೆ ಮಹಾರಥೋತ್ಸವ ಜರುಗಲಿದ್ದು, 28ರಂದು ಬೆಳಗ್ಗೆ 9ಕ್ಕೆಪಲ್ಲಕ್ಕಿಉತ್ಸವನೆರವೇರಲಿದೆ.

ಮಾ.10ರಿಂದ 14ರವರೆಗೆ ಶ್ರೀಮಾತಾ ಮಾಣಿಕೇಶ್ವರಿ ಅಮ್ಮನವರ ಐದನೇ ಅವತಾರ ಉತ್ಸವ ಜರುಗಲಿದೆ.ಕರ್ನಾಟಕ, ಮಹಾರಾಷ್ಟ್ರ,ತೆಲಂಗಾಣ ಹಾಗೂ ಆಂಧ್ರಪ್ರದೇಶ ರಾಜ್ಯಗಳಿಂದ ಭಕ್ತಾದಿಗಳು ಆಗಮಿಸಲಿದ್ದಾರೆ.

ಮುಂಜಾಗ್ರತೆಗೆ ಮನವಿ: ಈ ಹಿಂದೆ ಜರುಗಿದ ಕೆಲವು ಉತ್ಸವಹಾಗೂಸಮಾರಂಭಗಳಲ್ಲಿ ಮಹಿಳಾ ಭಕ್ತಾದಿಗಳ ಚಿನ್ನದ ಒಡವೆಗಳು, ಚಿನ್ನದ ಸರ ಸೇರಿದಂತೆ ಆಭರಣಗಳ ಕಳ್ಳತನ ಪ್ರಕರಣಗಳು ಹೆಚ್ಚು ಬೆಳಕಿಗೆ ಬಂದಿರುವ ಹಿನ್ನೆಲೆಯಲ್ಲಿ ಮಹಿಳಾ ಭಕ್ತಾದಿಗಳು ಚಿನ್ನಾಭರಣಗಳನ್ನು ಧರಿಸಿಕೊಂಡು ಬಾರದೆ ಮುಂಜಾಗ್ರತೆ ವಹಿಸಬೇಕೆಂದು ಅವರು ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

ಶ್ರೀ ಮಾತಾ ಮಾಣಿಕೇಶ್ವರಿ ಅಮ್ಮನವರ ಆಶ್ರಮದಲ್ಲಿ ನೆರವೇರಲಿರುವ ಮಹಾಶಿವರಾತ್ರಿ ಉತ್ಸವ, ಪಲ್ಲಕ್ಕಿ, ರಥೋತ್ಸವ ಹಾಗೂ ಅಮ್ಮನವರ ಐದನೇ ಅವತಾರ ಉತ್ಸವ ಕಾರ್ಯಕ್ರಮದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಭಕ್ತಾದಿಗಳು ಪಾಲ್ಗೊಂಡು ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕೆಂದು ಕೋರಿದ್ದಾರೆ.

# ವಿನಾಯಕ.ಎ ಅವರಿಗೆ ಪಿಎಚ್‌ಡಿ ಪದವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.24–ಇಲ್ಲಿನ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯವು ವಿನಾಯಕ.ಎ ಅವರಿಗೆ ಸಮಾಜ ಕಾರ್ಯದಲ್ಲಿ ಪಿಎಚ್‌ಡಿ ಪದವಿ ಪ್ರಕಟಿಸಿದೆ.

ವಿನಾಯಕ.ಎ ಅವರು ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸ್ನಾತಕೋತ್ತರ ಸಮಾಜ ಕಾರ್ಯ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಕುಮಾರ್ ಇವರ ಮಾರ್ಗದರ್ಶನದಲ್ಲಿ ಮಂಡಿಸಿದ 'ಅನಾಲಿಸಿಸ್ ಆಫ್ ಕಮ್ಯೂನಿಟಿ ಆರ್ಗನೈಸೇಷನ್ ಪ್ರಾಕ್ಟೀಸ್ ಇನ್ ಕರ್ನಾಟಕ: ಎ ಸೋಷಿಯಲ್ ವರ್ಕ್ ಪರ್ಸ್ಪೆಕ್ಟೀವ್' ಎಂಬ ಮಹಾಪ್ರಬಂಧಕ್ಕೆ ವಿವಿಯು ಪಿಎಚ್‌ಡಿ ಪದವಿ ನೀಡಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.24–ತಾಲ್ಲೂಕಿನ ರೂಪನಗುಡಿ ಗ್ರಾಮದ ಪೋತಪ್ಪ ಗುಡಿ ಹತ್ತಿರ ನಿವಾಸಿ ಕೆ. ವಿರೇಶ್ ಎನ್ನುವ 32 ವರ್ಷದ ವ್ಯಕ್ತಿಯು ದಿನಾಂಕ 24–12–2024ರಂದು ಕಾಣೆಯಾಗಿರುವ ಕುರಿತು ಪಿ.ಡಿ.ಹಳ್ಳಿ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕೆಂದು ಎಂದು ಸಬ್ ಇನ್ಸ್ ಪೆಕ್ಟರ್ ಮನವಿ ಮಾಡಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ: ಎತ್ತರ 5.5 ಅಡಿ, ಕೋಲು ಮುಖ, ಗೋದಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ತಿಳಿ ಹಸಿರು ಬಣ್ಣದ ಶರ್ಟ್ ಮತ್ತು ನೀಲಿ ಬಣ್ಣದ ಲುಂಗಿ ಧರಿಸಿರುತ್ತಾನೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾನೆ.

ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100, 102 ಬಳ್ಳಾರಿ ಎಸ್.ಪಿ ಅವರ ಕಛೇರಿ ದೂ. 08392–258400, ಸಿರುಗುಪ್ಪ ಡಿ.ಎಸ್.ಪಿ ದೂ.08392–276000, ಪಿ.ಡಿ.ಹಳ್ಳಿ ವೃತ್ತ ಸಿ.ಪಿ.ಐ ಮೊ.08392–276461, ಪಿ.ಡಿ.ಹಳ್ಳಿ ಪೊಲೀಸ್ ಠಾಣೆ ದೂ.08392–265010 ಮತ್ತು ಪಿಎಸ್ಐ ಮೊ.9480803052 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 5 ಕ್ವಿಂಟಲ್ ಪಡಿತರ ಅಕ್ಕಿ ಜಪ್ತಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.24–ನಗರದ ಸಂತ್ರಾಸ್ ವಾಡಿಯ ಖಬರಸ್ಥಾನ ಕಂಪೌಂಡ್ ಹತ್ತಿರವಿರುವ ಮನೆಯೊಂದರೊಳಗೆ ಪಡಿತರ ಚೀಟಿದಾರರಿಗೆ ಮತ್ತು ಸರ್ಕಾರದ ವಿವಿಧ ಯೋಜನೆಗಳಿಗೆ ಬಿಡುಗಡೆಯಾದ ಅಕ್ಕಿಯನ್ನು ಹೆಚ್ಚಿನ ಬೆಲೆಗೆ ಕಾಳ ಸಂತೆಯಲ್ಲಿ ಮಾರಾಟ ಮಾಡಲು ಅಕ್ರಮವಾಗಿ ಸಂಗ್ರಹಿಸಿ ಇಡಲಾಗಿದೆ ಎಂಬ ಮಾಹಿತಿ ಮೇಲೆ ಆಹಾರ ನಿರೀಕ್ಷಕ ಯಲ್ಲಾಲಿಂಗ, ಸಿಬ್ಬಂದಿ ಶಿವುಕುಮಾರ ಪೂಜಾರಿ, ಎಂ.ಬಿ.ನಗರ ಪೊಲೀಸ್ ಠಾಣೆ ಸಿಬ್ಬಂದಿ ಸಂತೋಷ ಅವರು ದಾಳಿ ನಡೆಸಿದ್ದಾರೆ.

ಅಕ್ರಮವಾಗಿ ಸಂಗ್ರಹಿಸಿ ಇಟ್ಟಿದ್ದ 17,500 ರೂ.ಮೌಲ್ಯದ 5 ಕ್ವಿಂಟಲ್ ಅಕ್ಕಿ ಜಪ್ತಿ ಮಾಡಿ, ಅಕ್ಕಿ ಸಂಗ್ರಹಿಸಿ ಇಟ್ಟ ಸಂತ್ರಾಸವಾಡಿಯ ಮಹ್ಮದ್ ಅಯ್ಯೂಬ್ ಎಂಬಾತನ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955 ರ ಕಲಂ 3 ಮತ್ತು 7 ಅಡಿಯಲ್ಲಿ ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ತನಿಖೆ ನಡೆದಿದೆ.

# ಶ್ರೀಶೈಲ್ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ: ಮಾ. 02ಕ್ಕೆ ಮಹಾ ರಥೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ.24–ವೀರಶೈವ ಧರ್ಮದ ಗೋತ್ರಪುರುಷ, ದುಷ್ಟರ ನಿಗ್ರಹದ ಮಹಾಶಕ್ತಿ ಮತ್ತು ಭಾರತದಲ್ಲಿ ತ್ರಿನೇತ್ರ ಶಕ್ತಿಯ ಏಕೈಕ ಅವತಾರ ಅಗಿರುವ ಆಂಧ್ರಪ್ರದೇಶ ರಾಜ್ಯದ ಅನ್ನಮಯ್ಯ ಜಿಲ್ಲೆಯ ರಾಯಚೋಟಿಕ್ಷೇತ್ರದಶ್ರೀಭದ್ರಕಾಳಿ ಸಮೇತ ಶ್ರೀ ವೀರಭದ್ರೇಶ್ವರ 2025ರ ಬ್ರಹ್ಮೋತ್ಸವವು ಫೆ. 23 ರಿಂದ 05 ಮಾರ್ಚ್‌ವರೆಗೆ 11 ದಿನಗಳ ಕಾಲ ಜರುಗಲಿದೆ ಎಂದು ಕರ್ನಾಟಕ ರಾಜ್ಯ ಶ್ರೀ ವೀರಭದ್ರೇಶ್ವರ್ ಪ್ರಚಾರ ಸಮಿತಿಯ ರಾಜ್ಯಾಧ್ಯಕ್ಷ ಸಿ.ಎಂ. ಶಿವಶರಣಪ್ಪ ಕಲಬುರ್ಗಿ ಅವರು ತಿಳಿಸಿದ್ದಾರೆ.





ಮಾರ್ಚ್ 01ರಂದು ಬೆಳಿಗ್ಗೆ 9 ಗಂಟೆಗೆ ವೀರಶೈವ ಧರ್ಮದ ಪಂಚಪೀಠಗಳಲ್ಲಿ ಒಂದಾಗಿರುವ ಶ್ರೀಶೈಲಪೀಠದ ಶ್ರೀಜಗದ್ಗುರು ಡಾ. ಚನ್ನಸಿದ್ಧರಾಮ್ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರ ಅಡ್ಡಪಲ್ಲಕ್ಕಿ ಮಹೋತ್ಸವವನ್ನು ರಾಯಚೋಟಿ ಕ್ಷೇತ್ರದಲ್ಲಿ ಹಮ್ಮಿಕೊಳ್ಳಲಾಗಿದೆ. ಅದೇ ದಿನ ಸಂಜೆ 6 ಗಂಟೆಗೆ ಶ್ರೀಶೈಲ್ ಜಗದ್ಗುರುಗಳ ಸಾನಿಧ್ಯದಲ್ಲಿ ಧರ್ಮ ಜಾಗೃತಿ ಸಮಾವೇಶ ನಡೆಯಲಿದೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಫೆಬ್ರವರಿ 24ರಂದು ಕಲ್ಯಾಣ ಉತ್ಸವ–ಮಯೂರವಾಹನೋತ್ಸವ, 25ರಂದು ಯಾಳಿ–ಸಿಂಹ ವಾಹನೋತ್ಸವ, 26ರಂದು ಗಜವಾಹನೋತ್ಸವ ಜೊತೆಗೆ ಮಹಾಶಿವರಾತ್ರಿಯ ವಿಶೇಷ ಪೂಜೆ, 27ರಂದು ಹುಲಿ ಮತ್ತು ರಾವಣಬ್ರಹ್ಮ ವಾಹನೋತ್ಸವ, 28ರಂದು ಚೆಂಡಿ ಹೋಮ–ಪುಷ್ಪಯಾಗ, ಮಾರ್ಚ್ 1ರಂದು ಸೂರ್ಯಪ್ರಭ ಉತ್ಸವ– ಈ ದಿನ ಶ್ರೀ ವೀರಭದ್ರೇಶ್ವರ್ ಮತ್ತು ಭದ್ರಕಾಳಿ ಅಮ್ಮನವರಿಗೆ ಚಿನ್ನದ ಕಿರೀಟ ಧಾರಣೆ ಹಾಗೂ ನಂದಿವಾಹನೋತ್ಸವ ಜರುಗಲಿದೆ. ಪ್ರತಿ ವರ್ಷ ರಾಯಚೋಟಿ ವೀರಭದ್ರೇಶ್ವರ್ ಮಹಾ ರಥೋತ್ಸವದ ಅಂಗವಾಗಿ ಜರುಗುವ ವಿಶೇಷ ಭಜನಾ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯದ ಅದರಲ್ಲೂ ವಿಶೇಷವಾಗಿ ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಭಾಗದ ಬಹುಪಾಲು ಜಿಲ್ಲೆಗಳ ಅಸಂಖ್ಯೆ ಭಕ್ತಾದಿಗಳು ಶ್ರದ್ಧಾಭಕ್ತಿಗಳಿಂದ ಪಾಲ್ಗೊಳ್ಳುತ್ತಾರೆ ಎಂದು ಅವರು ತಿಳಿಸಿದ್ದಾರೆ.

ಮಾರ್ಚ್ 2ರಂದು ಭಾನುವಾರ ಪ್ರಾತಃಕಾಲ 4ಗಂಟೆಗೆ ಅಗ್ನಿಕುಂಡ ಪ್ರವೇಶ, ಬೆಳಿಗ್ಗೆ 11–45ಕ್ಕೆ ಶುಭ ಮುಹೂರ್ತದಲ್ಲಿ ಶ್ರೀ ವೀರಭದ್ರೇಶ್ವರರಿಗೆ ವಜ್ರದ ತ್ರಿನೇತ್ರ ಧಾರಣ ಹಾಗು ಮಹಾನೈವೇದ್ಯ ಸಾಯಂಕಾಲ 4ಗಂಟೆಗೆ ಬಹು ವಿಜೃಂಭಣೆಯಿಂದ ಮಹಾ ರಥೋತ್ಸವ ಜರುಗಲಿದೆ ಕಾರಣ ಶ್ರೀ ವೀರಭದ್ರೇಶ್ವರ್ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಭದ್ರಕಾಳಿ ಸಮೇತ ಶ್ರೀ ವೀರಭದ್ರೇಶ್ವರ್ ದೇವರ ಕೃಪೆಗೆ ಪಾತ್ರರಾಗಬೇಕು ಎಂದು ಅವರು ಕೋರಿದ್ದಾರೆ.

# ಪರಂ ರಾಜೀನಾಮೆ ಮಾತು ಕೈ ನಲ್ಲಿ ಸಂಚಲನ

## ಕಾರ್ಯಕರ್ತರು ಬಯಸಿದರೆ ಗೃಹ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ಧ ಎಂಬ ಪರಂ ಹೇಳಿಕೆ ಚರ್ಚೆಗೆ ಗ್ರಾಸ, ಕುತೂಹಲಕ್ಕೆಡೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಫೆ.24:ಕಾರ್ಯಕರ್ತರು ಬಯಸಿದರೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿರುವುದು ಕಾಂಗ್ರೆಸ್‌ನಲ್ಲಿ ಸಂಚಲನ ಸೃಷ್ಟಿಸಿದ್ದು, ಅವರ ರಾಜೀನಾಮೆ ಮಾತು ಸಾಕಷ್ಟು ಚರ್ಚೆಗೂ ಕಾರಣವಾಗಿದೆ.



ರಾಜ್ಯದಲ್ಲಿ ಮುಖ್ಯಮಂತ್ರಿ ಹುದ್ದೆಯ ಅಧಿಕಾರ ಹಂಚಿಕೆ, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಚರ್ಚೆಗಳು ನಡೆಯುತ್ತಿರುವಾಗಲೇ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದು ಸಿದ್ಧ ಎಂದು ಹೇಳಿರುವುದು ನಾನಾ ವ್ಯಾಖ್ಯಾನಗಳಿಗೆ ಕಾರಣವಾಗಿದೆ. ಇತ್ತೀಚೆಗಷ್ಟೆ ದೆಹಲಿಗೆ ತೆರಳಿದ್ದ ಗೃಹ ಸಚಿವ ಡಾ. ಜಿ. ಪರಮೇಶ್ವರ್ ರಾಜ್ಯದಲ್ಲಿ ಒಂದು ವೇಳೆ ಉನ್ನತ ಸ್ಥಾನದ ಬದಲಾವಣೆಯಾದರೆ ತಮ್ಮನ್ನೂ ಪರಿಗಣಿಸಬೇಕು ಎಂಬ ದಾಳವನ್ನು ಉರುಳಿಸಿ ಬಂದಿದ್ದರು. ಹಾಗಾಗಿ ಅವರ ರಾಜೀನಾಮೆ ಮಾತು ಕುತೂಹಲಕ್ಕೆಡೆ ಮಾಡಿದೆ. ರಾಜ್ಯ ಕಾಂಗ್ರೆಸ್‌ನಲ್ಲಿ ಸಿಎಂ ವಿರುದ್ಧದ ಮುಡಾ ಹಗರಣ ಕೇಸು, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಚರ್ಚೆಗಳು ಇನ್ನಿತರೆ ರಾಜಕೀಯ ವಿಚಾರಗಳು ಈಗಾಗಲೇ ಪಕ್ಷದ ನಾಯಕರು, ಹೈಕಮಾಂಡ್‌ಗೆ ತಲೆನೋವಾಗಿರುವ ಬೆನ್ನಲ್ಲೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಕಾರ್ಯಕರ್ತರ ಸಮ್ಮುಖದಲ್ಲಿ ಬೇಸರದಿಂದ ಗೃಹ ಖಾತೆಗೆ ರಾಜೀನಾಮೆ ಕೊಡುವ ಮಾತುಗಳು ಆಡಿರುವುದು ಇದೀಗ ಕಾಂಗ್ರೆಸ್‌ನಲ್ಲಿ ಸಂಚಲನ ಮೂಡಿಸಿದೆ.

ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಚರ್ಚೆಗಳು ಹೈಕಮಾಂಡ್ ಸಿಟ್ಟಿಗೆ ಕಾರಣವಾಗಿರುವ ಬೆನ್ನಲ್ಲೇ ಮಾಜಿ ಉಪಮುಖ್ಯಮಂತ್ರಿ ಹಾಗೂ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಕಾರ್ಯಕರ್ತರ ಸಭೆಯಲ್ಲಿ ಗೃಹ ಖಾತೆಗೆ ರಾಜೀನಾಮೆ ನೀಡುವ ಮಾತುಗಳನ್ನಾಡಿರುವುದು ಕಾಂಗ್ರೆಸ್ ವಲಯದಲ್ಲಿ ಅಚ್ಚರಿ ಮೂಡಿಸಿದೆ.

ಕಳೆದ ನಾಲ್ಕೈದು ದಿನಗಳ ಹಿಂದೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಹೈಕಮಾಂಡ್ ಬುಲಾವ್ ಮೇರೆಗೆ ದೆಹಲಿಗೆ ಹೋಗಿ ಬಂದಿದ್ದರು. ಬಳಿಕ ತಮ್ಮ ಸ್ವ–ಕ್ಷೇತ್ರ ಕೊರಟಗೆರೆಯಲ್ಲಿ ಕಾರ್ಯಕರ್ತರ ಸಭೆ ನಡೆಸಿ ಕಾರ್ಯಕರ್ತರ ಮನದಾಳಕ್ಕೆ ಸ್ಪಂದಿಸಲು ಸಾಧ್ಯವಾಗುತ್ತಿಲ್ಲ ಎಂದು ಬೇಸರ ಹೊರ ಹಾಕಿ, ಗೃಹ ಖಾತೆಗೆ ರಾಜೀನಾಮೆ ನೀಡುವುದಾಗಿ ಹೇಳಿಕೆ ನೀಡಿರುವುದು ನಾನಾ ವ್ಯಾಖ್ಯಾನಗಳಿಗೆ ಕಾರಣವಾಗಿದೆ.

ರಾಜ್ಯ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಸ್ಥಾನಕ್ಕೆ ಡಾ. ಜಿ. ಪರಮೇಶ್ವರ್ ಅವರು ಸಹ ಆಕಾಂಕ್ಷಿಯಾಗಿದ್ದು, ಇತ್ತೀಚಿನ ದಿನಗಳಲ್ಲಿ ದಲಿತ ಸಿಎಂ ಕೂಗು ಜೋರಾಗಿತ್ತು. ಈ ಎಲ್ಲ ಬೆಳವಣಿಗೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಪರಮೇಶ್ವರ್ ಅವರನ್ನು ದೆಹಲಿಗೆ ಕರೆಸಿಕೊಂಡು ಚರ್ಚೆ ನಡೆಸಿತ್ತು. ಇದಾದ ಬಳಿಕ ಪರಮೇಶ್ವರ್ ಅವರು ಸ್ವಕ್ಷೇತ್ರದಲ್ಲಿ ಕಾರ್ಯಕರ್ತರ ಸಭೆ ನಡೆಸಿ ಇತ್ತೀಚೆಗೆ ಕ್ಷೇತ್ರದ ಕಾರ್ಯಕರ್ತರೊಂದಿಗೆ ಬೆರೆಯಲು ಸಾಧ್ಯವಾಗುತ್ತಿಲ್ಲ. ನಿಮ್ಮ ಮನಸ್ಸಿನ ಆಕಾಂಕ್ಷೆಯಂತೆ ಸ್ಪಂದಿಸಿ ಕೆಲಸ ಮಾಡಲು ಆಗುತ್ತಿಲ್ಲ. ಆದ್ದರಿಂದ ನನ್ನನ್ನು ಕ್ಷಮಿಸಿ ಎಂದು ಕಾರ್ಯಕರ್ತರಲ್ಲಿ ಕ್ಷಮೆ ಕೇಳಿ, ನೀವು ಹೇಳಿದರೆ ಗೃಹ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ಸಹ ಸಿದ್ಧ ಎಂಬ ಮಾತುಗಳನ್ನು ಆಡಿದ್ದರು.

ಕಾರ್ಯಕರ್ತರ ಸಭೆಯಲ್ಲಿ ಡಾ.ಜಿ. ಪರಮೇಶ್ವರ್ ಅವರು ಗೃಹ ಸಚಿವ ಖಾತೆಗೆ ರಾಜೀನಾಮೆ ನೀಡುವ ಮಾತುಗಳನ್ನಾಡುತ್ತಿದ್ದಂತೆ ಕಾರ್ಯಕರ್ತರು ರಾಜೀನಾಮೆ ಕೊಡದಂತೆ ಘೋಷಣೆಗಳನ್ನು ಕೂಗಿದರು. ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ರಾಜೀನಾಮೆ ಮಾತುಗಳು ತಡವಾಗಿ ವೈರಲ್ ಆಗಿದ್ದು, ಇದೀಗ ಕಾಂಗ್ರೆಸ್ ಪಕ್ಷ ಹಾಗೂ ತುಮಕೂರು ಜಿಲ್ಲೆಯ ಕಾಂಗ್ರೆಸ್ ವಲಯದಲ್ಲಿ ತೀವ್ರ ಸಂಚಲನ ಮೂಡಿಸಿದೆ.

ಪರಮೇಶ್ವರ್ ಅವರ ರಾಜೀನಾಮೆ ಮಾತಿನಿಂದ ವಿಚಲಿತರಾಗಿರುವ ಕೊರಟಗೆರೆ ಕ್ಷೇತ್ರದ ಕಾರ್ಯಕರ್ತರು ಹಾಗೂ ತುಮಕೂರು ಜಿಲ್ಲೆಯ ಕಾಂಗ್ರೆಸ್ ನಾಯಕರು ಗೊಂದಲಕ್ಕೆ ಒಳಗಾಗಿದ್ದಾರೆ. ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಅಧ್ಯಕ್ಷರಾಗಿ ಸತತ 8 ವರ್ಷಗಳ ಕಾಲ ಕಾರ್ಯನಿರ್ವಹಿಸಿ 2013 ರಲ್ಲಿ ಪಕ್ಷ ಅಧಿಕಾರಕ್ಕೆ ಬರಲು ಕಾರಣಕರ್ತರಾಗಿದ್ದ ಪರಮೇಶ್ವರ್ ಅವರು ದೆಹಲಿಗೆ ಹೋಗಿ ಹೈಕಮಾಂಡ್ ಭೇಟಿ ಬಳಿಕ ರಾಜ್ಯ–ಕ್ಕೆ ಬರುತ್ತಿದ್ದಂತೆ ಬೇಸರದಿಂದ ಗೃಹ ಸಚಿವ ಸ್ಥಾನಕ್ಕೆ ರಾಜೀನಾಮೆ ಕೊಡುವ ಮಾತುಗಳನ್ನಾಡಿರುವುದು ಕಾಂಗ್ರೆಸ್ ಪಕ್ಷದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಸದೃಢಗೊಳಿಸುವ ನಿಟ್ಟಿನಲ್ಲಿ ದಲಿತ ಸಮಾವೇಶ ಮಾಡಲು ಸಹ ಪರಮೇಶ್ವರ್ ಸೇರಿದಂತೆ ಹಲವು ದಲಿತ ಸಚಿವರುಗಳು, ಮುಖಂಡರು ಮುಂಚೂಣಿಯಲ್ಲಿದ್ದರು. ಆದರೆ ಹೈಕಮಾಂಡ್ ಈ ದಲಿತ ಸಮಾವೇಶಕ್ಕೆ ಸಮ್ಮತಿಸದೇ ಇರುವುದು ಸಹ ಪರಮೇಶ್ವರ್ ಅವರ ಈ ಅಸಮಾಧಾನದ ಮಾತುಗಳಿಗೆ ಕಾರಣ ಎಂದು ಹೇಳಲಾಗುತ್ತಿದೆ. ಕಾಂಗ್ರೆಸ್ ಪಕ್ಷದಲ್ಲಿ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಸೇರಿದಂತೆ ಅನೇಕ ವಿಚಾರಗಳಲ್ಲಿ ಸಚಿವರುಗಳು, ಹಿರಿಯ ನಾಯಕರುಗಳಲ್ಲಿ ಭಿನ್ನಾಭಿಪ್ರಾಯಗಳಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಈ ಎಲ್ಲಾ ಬೆಳವಣಿಗೆಗಳು ಪಕ್ಷದ ಕಾರ್ಯಕರ್ತರಲ್ಲಿ ತೀವ್ರ ಗೊಂದಲ ಮೂಡಿಸಿರುವುದಂತೂ ಸತ್ಯ.

ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ತಮ್ಮ ಕಾರ್ಯಕರ್ತರ ಮುಂದೆಯೇ ಬೇಸರದಿಂದ ಗೃಹ ಖಾತೆಗೆ ರಾಜೀನಾಮೆಯ ಮಾತುಗಳನ್ನಾಡಿರುವುದು ರಾಜಕೀಯವಾಗಿ ನಾನಾ ಚರ್ಚೆಗಳನ್ನು ಹುಟ್ಟುಹಾಕಿದೆ.

ಕಾಂಗ್ರೆಸ್‌ನಲ್ಲಿ ಬಣ ಬಡಿದಾಟ ತಾರಕಕ್ಕೇರಿ ಕೆಪಿಸಿಸಿ ಅಧ್ಯಕ್ಷರ ಹುದ್ದೆ ಮತ್ತು ಮುಖ್ಯಮಂತ್ರಿ ಹುದ್ದೆಯ ಅಧಿಕಾರ ಹಂಚಿಕೆಯ ಚರ್ಚೆಗಳು ಮುನ್ನಲೆಗೆ ಬಂದಿರುವಾಗಲೇ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಮಾತುಗಳನ್ನಾಡಿರುವುದು ಅವರು ಮುಖ್ಯಮಂತ್ರಿ ಹುದ್ದೆಯ ಮೇಲೆ ಕಣ್ಣಿಟ್ಟಿರುವುದನ್ನು ಪರೋಕ್ಷವಾಗಿ ಬಿಂಬಿಸಿದಂತಿದೆ. ಒಂದು ವೇಳೆ ಹೈಕಮಾಂಡ್ ಮುಖ್ಯಮಂತ್ರಿ ಹುದ್ದೆ ಬದಲಾವಣೆ ನಿರ್ಧಾರ ಮಾಡಿದರೆ ಅದಕ್ಕೆ ತಾವೂ ಒಬ್ಬ ಆಕಾಂಕ್ಷಿ ಎಂಬುದನ್ನು ಸೂಚ್ಯವಾಗಿ ಹೇಳಿದಂತಿದೆ. ಕಾರ್ಯಕರ್ತರು ತಮ್ಮನ್ನು ಮುಖ್ಯಮಂತ್ರಿ ಹುದ್ದೆಯಲ್ಲಿ ಕಾಣ ಬಯಸಿದ್ದಾರೆ ಎಂಬ ಅರ್ಥದಲ್ಲಿ ಡಾ. ಜಿ. ಪರಮೇಶ್ವರ್ ಅವರು ಕಾರ್ಯಕರ್ತರ ನಿರೀಕ್ಷೆ ಆಕಾಂಕ್ಷೆಗೆ ಸ್ಪಂದಿಸಲು ಸಾಧ್ಯವಾಗುತ್ತಿಲ್ಲ ಎಂಬ ಮಾತುಗಳನ್ನಾಡಿದ್ದಾರೆ ಎನ್ನಲಾಗುತ್ತಿದೆ.

ಇತ್ತೀಚೆಗಷ್ಟೆ ದೆಹಲಿಗೆ ತೆರಳಿದ್ದ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಹೈಕಮಾಂಡ್‌ನನ್ನು ಭೇಟಿ ಮಾಡಿ ಮುಖ್ಯಮಂತ್ರಿ ಬದಲಾವಣೆ ಮಾತುಗಳು ಪಕ್ಷದಲ್ಲಿ ನಡೆದಿವೆ. ಒಂದು ವೇಳೆ ಮುಖ್ಯಮಂತ್ರಿ ಬದಲಾವಣೆಗೆ ಹೈಕಮಾಂಡ್ ತೀರ್ಮಾನ ಮಾಡಿದರೆ ಆ ಸ್ಥಾನಕ್ಕೆ ತಮ್ಮನ್ನು ಪರಿಗಣಿಸಬೇಕು ಎಂಬ ಬೇಡಿಕೆಯನ್ನು ಹೈಕಮಾಂಡ್ ಮುಂದೆ ಇಟ್ಟಿದ್ದಾರೆ ಎಂದು ಹೇಳಲಾಗಿದೆ.

ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ಸುದೀರ್ಘ ಪಕ್ಷ ಸೇವೆಯನ್ನು ಪಕ್ಷ ಗಮನದಲ್ಲಿಟ್ಟುಕೊಳ್ಳುತ್ತಿದೆ ಎಂದು ಹೈಕಮಾಂಡ್ ನಾಯಕರು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರಿಗೆ ಹೇಳಿದ್ದರು. ಹಾಗಾಗಿಯೇ ಸಚಿವ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಗೃಹ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಮಾತುಗಳನ್ನು ಹೇಳುವ ಮೂಲಕ ಮುಂದೆ ಮುಖ್ಯಮಂತ್ರಿ ಹುದ್ದೆಗೆ ತಾವೂ ಒಬ್ಬ ಸ್ಪರ್ಧಿ ಎಂಬ ಸುಳಿವನ್ನು ನೀಡಿ ರಾಜಕೀಯ ಲೆಕ್ಕಾಚಾರದ ಮೇಲೆಯೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಮಾತುಗಳನ್ನು ಆಡಿದ್ದಾರೆ ಎನ್ನಲಾಗಿದೆ. ಇದ್ದಕ್ಕಿದಂತೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ರಾಜೀನಾಮೆ ಮಾತು ಕಾಂಗ್ರೆಸ್‌ನಲ್ಲಿ ಸಂಚಲನ ಮೂಡಿಸಿದೆ. ಈ ಮಾತಿನ ಗೂಢಾರ್ಥದ ಬಗ್ಗೆಯೂ ಚರ್ಚೆಗಳು ನಡೆದಿದೆ. ಮುಂದೆ ಕಾಂಗ್ರೆಸ್‌ನಲ್ಲಿ ಸಾಕಷ್ಟು ಬದಲಾವಣೆಗಳನ್ನೂ ಸಂಕೇತಿಸಿದೆ ಎಂದು ವ್ಯಾಖ್ಯಾನಿಸಲಾಗಿದೆ.

# ಮುಡಾ ಹಗರಣ: ಸಾಕ್ಷಿಗಳ ಕೊರತೆ ಸಿಎಂಗೆ ಕ್ಲೀನ್ ಚಿಟ್

ಮಲ್ಲಮ್ಮ ನುಡಿ ವಾರ್ತೆ

ಮೈಸೂರು,ಫೆ.24–ರಾಜ್ಯದಲ್ಲಿ ತೀವ್ರ ಸಂಚಲನ ಸೃಷ್ಟಿಸಿದ್ದ ಮುಡಾ ಹಗರಣ ಪ್ರಕರಣ ತನಿಖೆ ಅಂತ್ಯಗೊಂಡಿದ್ದು, ತನಿಖಾ ವರದಿಯಲ್ಲಿ ಸಿಎಂ ಸಿದ್ದರಾಮಯ್ಯಗೆ ಕ್ಲೀನ್‌ಚಿಟ್ ನೀಡಲಾಗಿದೆ.



ಮೈಸೂರು ಲೋಕಾಯುಕ್ತ ನ್ಯಾಯಾಲಯಕ್ಕೆ ವರದಿ ಸಲ್ಲಿಸಲು ಮುಂದಾಗಿದೆ.

ಈ ಸಂಬಂಧ ದೂರುದಾರ ಸ್ನೇಹಮಯಿ ಕೃಷ್ಣಗೆ ಲೋಕಾಯುಕ್ತ ನೋಟಿಸ್ ನೀಡಿದೆ. ಎ1 ಸಿದ್ದರಾಮಯ್ಯ, ಎ2 ಪಾರ್ವತಿ, ಎ3 ಮಲ್ಲಿಕಾರ್ಜುನ ಸ್ವಾಮಿ, ಎ4 ದೇವರಾಜು ವಿರುದ್ಧ ದಾಖಲಾದ ಕೇಸ್‌ನಲ್ಲಿ ಸಾಕ್ಷ್ಯಾಧಾರಗಳ ಕೊರತೆಯಿಂದ ತನಿಖೆಗೆ ಅರ್ಹವಲ್ಲದ ಪ್ರಕರಣ ಎಂಬ ಅಂಶವನ್ನು ಉಲ್ಲೇಖಿಸಿದೆ. ಸಾಕ್ಷ್ಯಾಧಾರಗಳ ಕೊರತೆಯಿಂದ ಬಿ ರಿಪೋರ್ಟ್ ಸಲ್ಲಿಸುವುದಾಗಿ ಲೋಕಾಯುಕ್ತ ಮಾಹಿತಿ ನೀಡಿದೆ.

ಸ್ನೇಹಮಯಿ ಕೃಷ್ಣ ನೀಡಿದ ದೂರಿನ ಮೇರೆಗೆ ಮೈಸೂರು ಲೋಕಾಯುಕ್ತ ಠಾಣೆಯಲ್ಲಿ ಪ್ರಕರಣ ದಾಖಲಿಸಿ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಲಾಗಿತ್ತು.

ಪ್ರಕರಣವು ತನಿಖಾಧಿಕಾರಿಗಳಿಗೆ ಸಿವಿಲ್ ಸ್ವರೂಪದ್ದೆಂದು, ತನಿಖೆ ನಡೆಸಲು ತಕ್ಕುದಲ್ಲವೆಂದು, ಸಂಗತಿ ಅಥವಾ ಕಾನೂನಿನ ತಪ್ಪು ತಿಳಿವಳಿಕೆಯೆಂದು, ಕ್ರಮ ಜರುಗಿಸಲು ತಕ್ಕುದಲ್ಲವೆಂದು ಸಾಕ್ಷ್ಯಾಧಾರಗಳ ಕೊರತೆ ಎಂದು ಕಂಡುಬಂದಿದೆ.

ಈ ವರದಿಯನ್ನು ವಿರೋಧಿಸುವುದಿದ್ದರೆ, ತಾವು ಈ ನೋಟಿಸ್ ತಲುಪಿದ ಒಂದು ವಾರದೊಳಗೆ ಮ್ಯಾಜಿಸ್ಟ್ರೇಟರ ಎದುರು ಆ ಬಗ್ಗೆ ವಿರೋಧಿಸಬಹುದು ಎಂದು ಸ್ನೇಹಮಯಿ ಕೃಷ್ಣಗೆ ನೀಡಿದ ನೋಟಿಸ್‌ನಲ್ಲಿ ಲೋಕಾಯುಕ್ತ ತಿಳಿಸಿದೆ.

ಪ್ರಕರಣದ ಎ1 ಆರೋಪಿಯಿಂದ ಎ4 ಆರೋಪಿ ವರೆಗಿನ ಮೇಲಿನ ಆರೋಪಗಳು ಸಾಕ್ಷ್ಯಾಧಾರಗಳ ಕೊರತೆಯಿಂದ ಸಾಬೀತಾಗಿಲ್ಲ.

ಹೀಗಾಗಿ, ಅಂತಿಮ ವರದಿಯನ್ನು ಘನ ನ್ಯಾಯಾಲಯಕ್ಕೆ ಸಲ್ಲಿಸಲಾಗುವುದು. ಮುಡಾದಿಂದ 2016ರಿಂದ 2024ನೇ ಸಾಲಿನ ವರೆಗೆ 50:50 ಅನುಪಾತದಲ್ಲಿ ಪರಿಹಾರಾತ್ಮಕ ನಿವೇಶನಗಳನ್ನು ನೀಡಿರುವ ಆರೋಪಗಳ ಬಗ್ಗೆ ಹೆಚ್ಚುವರಿ ತನಿಖೆ ನಡೆಸಿ ಕಲಂ 173 (8) ಸಿಆರ್‌ಪಿಸಿಯಡಿ ಹೆಚ್ಚುವರಿ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗುವುದು ಎಂದು ಲೋಕಾಯುಕ್ತ ಹೇಳಿದೆ.

# ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಾದರಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.24: ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಗಳು ಬಡ ಜನರ ಜೀವನ ಮಟ್ಟ ಸುಧಾರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದೇವೆ ಸಂಸದ ಸಾಗರ ಖಂಡ್ರೆ ಹೇಳಿದರು. ಪಟ್ಟಣದ ಬಾಲಾಜಿ ಮಂದಿರ ಸಭಾಂಗಣದಲ್ಲಿ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಮಹಿಳಾ ಜ್ಞಾನ ವಿಕಾಸ ಕಾರ್ಯಕ್ರಮದಡಿ ಶನಿವಾರ ಆಯೋಜಿಸಿದ್ದ ವರದ ಶಂಕರ ಪೂಜೆ ಮತ್ತು ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರು ರೂಪಿಸುವ ಗ್ರಾಮಾಭಿವೃದ್ಧಿ ಯೋಜನೆಯಿಂದಾಗಿ ಗ್ರಾಮೀಣ ಪ್ರದೇಶಗಳು ಎಲ್ಲ ರೀತಿಯಲ್ಲೂ ಅಭಿವೃದ್ಧಿ ಕಾಣುತ್ತಿವೆ. ಸರಕಾರದ ಯೋಜನೆಗಳ ಪ್ರಗತಿಗೆ ಗ್ರಾಮಾಭಿವೃದ್ಧಿ ಸಂಸ್ಥೆ ಕೈಜೋಡಿಸುತ್ತಿವೆ. ಗ್ರಾಮಾಭಿವೃದ್ಧಿ ಸಂಸ್ಥೆಯ ಹಲವಾರು ಕಾರ್ಯಕ್ರಮ ಜನರಿಗೆ ಪೂರಕವಾಗಿವೆ. ಫಲಾನುಭವಿಗಳು ಯೋಜನೆಗಳ ಮೂಲಕ ಸಿಗುವ ಸೌಲಭ್ಯಗಳನ್ನು ಪಡೆದುವುದರ ಜತೆಗೆ ಶಿಸ್ತು, ಬದ್ಧತೆ ಅಳವಡಿಸಿಕೊಂಡು ಸಮಾಜದಲ್ಲಿ ಪ್ರಗತಿ ಸಾಧಿಸಬೇಕು ಎಂದು ತಿಳಿಸಿದರು.

ಜಿಲ್ಲಾ ನಿರ್ದೇಶಕ ಪ್ರವೀಣಕುಮಾರ ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಬ್ಯಾಂಕಿನ ವ್ಯವಹಾರಿಕ ಪ್ರತಿನಿಧಿಯಾಗಿ ಜನರಿಗೆ ಆರ್ಥಿಕ ಸಬಲೀಕರಣಕ್ಕೆ ಪೂರಕ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿ ಮಲ್ಲಮ್ಮ ಆರ್ ಪಾಟೀಲ ಮಾತನಾಡಿದರು. ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ ಸಿಂಧನಕೇರೆ ಅಧ್ಯಕ್ಷತೆ ವಹಿಸಿದರು. ಇದೇ ವೇಳೆ ಮಾಶಾಸನ, ಸುಜ್ಞಾನನಿಧಿ ಶಿಷ್ಯವೇತನ, ದೇವಸ್ಥಾನಕ್ಕೆ ಅನುದಾನ, ಸ್ವಸಹಾಯ ಸಂಘಗಳಿಗೆ ಲಾಭಾಂಶ ವಿತರಿಸಲಾಯಿತು. ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಪ್ರಮುಖರಾದ ಶಿವು ಲೋಖಂಡೆ, ಸೋಮನಾಥಪ್ಪ ಅಷ್ಟೂರೆ, ಸಂತೊಷ ಬಿ,ಜಿ ಪಾಟೀಲ್, ಯೋಜನಾಧಿಕಾರಿ ಸಂತೋಷ ಸೇರಿದಂತೆ, ಮೇಲ್ವಿಚಾರಕರು, ಸೇವಾ ಪ್ರತಿನಿಧಿಗಳು, ಸ್ವಸಹಾಯ ಸಂಘದ ಸದಸ್ಯರು ಭಾಗವಹಿಸಿದ್ದರು, ದೀಪಕ ಠಮಕೆ ನಿರೂಪಿಸಿದರು. ಲಾಯಪ್ಪ ವಂದಿಸಿದರು.


# ಅನಾಮಧೇಯ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.24–ಸಂಡೂರು ತಾಲ್ಲೂಕಿನ ತೋರಣಗಲ್ಲಿ ರಸ್ತೆಯ ಬನ್ನಿಹಟ್ಟಿಯ ಹೊಲದ ಹತ್ತಿರದ ರಸ್ತೆಯಲ್ಲಿ ಫೆ.18 ರಂದು ದ್ವಿಚಕ್ರ ವಾಹನವೊಂದು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ರಸ್ತೆಯ ಪಕ್ಕದಲ್ಲಿ ನಡೆದುಕೊಂಡು ಹೋಗುತ್ತಿರುವ ಸುಮಾರು 60–65 ವರ್ಷದ ಅನಾಮಧೇಯ ವ್ಯಕ್ತಿಗೆ ಡಿಕ್ಕಿ ಹೊಡೆದಿದ್ದು, ವ್ಯಕ್ತಿಯನ್ನು ಬಿಮ್ಸ್‌ನಲ್ಲಿ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ತೋರಣಗಲ್ಲು ಪೊಲೀಸ್ ಠಾಣೆ–ಯು ಪ್ರಕಟಣೆ ಹೊರಡಿಸಿದೆ.

ಚಹರೆ: ಸುಮಾರು 5.8 ಅಡಿ ಎತ್ತರ, ತೆಳುವಾದ ಮೈಕಟ್ಟು, ಗೋಧಿ ಮೈಬಣ್ಣ, ಕೋಲು–ಮುಖ ಹೊಂದಿದ್ದು, ನೀಲಿ ಬಣ್ಣದ ಶರ್ಟ್ ಮತ್ತು ತಿಳಿ ನೀಲಿ ಬಣ್ಣದ ಬರ್ಮೂಡ ಧರಿಸಿರುತ್ತಾನೆ.ಮೃತ ಅನಾಮಧೇಯ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ದೂ.08395–258100, ಮೊ.9480803012 ಗೆ ಸಂಪರ್ಕಿಸಬಹುದು.

# ಭಾಲ್ಕಿ ತಾಲೂಕಿನಲ್ಲಿ ಹೆಚ್ಚಿದ ಖಾಸಗಿ ಲೇವಾದೇವಿ ಹಾವಳಿ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಫೆ.24:ಪರವಾನಗಿ ಪಡೆಯದೇ ಅನಧಿಕೃತವಾಗಿ ಖಾಸಗಿಲೇವಾದೇವಿಮಾಡುವುದು ಭಾಲ್ಕಿ ಪಟ್ಟಣ ಸೇರಿದಂತೆ ತಾಲ್ಲೂಕಿನಲ್ಲಿ ಹೆಚ್ಚಾಗಿ ಕಂಡುಬರುತ್ತಿದೆ.

ಭಾಲ್ಕಿ ಪಟ್ಟಣದಲ್ಲಿರುವ ಬಹುತೇಕ ವ್ಯಾಪಾರ ವಹಿವಾಟು ಈ ಖಾಸಗಿ ಲೇವಾದೇವಿ ಮಾಡುವವರ ಹಿಡಿತದಲ್ಲಿದೆ. ಪರವಾನಗಿ ಇಲ್ಲದೇ ಅನಧಿಕೃತವಾಗಿ ಲೇವಾದೇವಿ ಮಾಡುವವರ ಸಂಖ್ಯೆ ದಿನೇ ದಿನೇ ಭಾಲ್ಕಿ ಪಟ್ಟಣದಲ್ಲಿ ಅಧಿಕವಾಗುತ್ತಿದ್ದು, ಇದರಿಂದ ಸಾಕಷ್ಟು ಬಡ ವ್ಯಾಪಾರಿಗಳು ಅಧಿಕ ಬಡ್ಡಿ ಕಟ್ಟಿ ವ್ಯಾಪಾರದಲ್ಲಿ ನಷ್ಟ ಅನುಭವಿಸುವಂತಾಗಿದೆ.


ಬೀದಿ ಬದಿ ವ್ಯಾಪಾರಿಗಳು ಈ ಜಾಲಕ್ಕೆ ಹೆಚ್ಚು ಬಲಿಯಾಗುತ್ತಿದ್ದು, ಕಡಿವಾಣ ಇಲ್ಲದಂತಾಗಿದೆ. 100ಕ್ಕೂ ಹೆಚ್ಚು ಜನ ಖಾಸಗಿ ಲೇವಾದೇವಿ ವ್ಯವಹಾರ ಮಾಡುತ್ತಿದ್ದಾರೆ. ಕೆಲ ಸರ್ಕಾರಿ ಹಾಗೂ ಖಾಸಗಿ ಶಾಲಾ ಶಿಕ್ಷಕರೂ ಈ ವ್ಯವಹಾರ ನಡೆಸುತ್ತಿದ್ದಾರೆ ಎಂಬ ಆರೋಪಗಳು ಕೇಳಿ ಬಂದಿವೆ.

ಅತಿ ಹೆಚ್ಚು ಬಡ್ಡಿಗೆ ಸಾಲ ಕೊಡುವುದಲ್ಲದೇ ವಸೂಲಾತಿ ವಿಧಾನ ಕೂಡ ಕಟ್ಟುನಿಟ್ಟಾಗಿ ಮಾಡಲಾಗುತ್ತಿದೆ. ಒಬ್ಬ ವ್ಯಾಪಾರಿ ?1 ಲಕ್ಷ ಸಾಲ ಪಡೆದರೆ 100 ದಿನಗಳ ಮುಂಗಡ ? 10 ಸಾವಿರ ಬಡ್ಡಿ ಕಡಿತಗೊಳಿಸಿ ? 90 ಸಾವಿರ ಮಾತ್ರ ಸಾಲ ನೀಡಲಾಗುತ್ತದೆ. ಅಲ್ಲದೇ ನೂರು ದಿನಗಳವರೆಗೆ ನಿತ್ಯ ?1,000 ಕಟ್ಟಬೇಕು. ಅವಧಿ ಮೀರಿ ಹಣ ಪಾವತಿಸಿದರೆ ಚಕ್ರಬಡ್ಡಿ ಹಾಕಲಾಗುತ್ತದೆ.

ಸಹಕಾರ ಇಲಾಖೆಯ ಕಾಯ್ದೆ ಉಲ್ಲಂಘಿಸಿ ಅಧಿಕ ಬಡ್ಡಿ ವಸೂಲಿ ಮಾಡುವ ಮೈಕ್ರೊ ಫೈನಾನ್ಸ್ ಕಂಪನಿ ಹಾಗೂ ಅನಧಿಕೃತ ಲೇವಾದೇವಿ ಮಾಡುವವರಿಂದ ಸಾಕಷ್ಟು ಜನ ಮಹಿಳೆಯರು, ವ್ಯಾಪಾರಸ್ಥರು ತೊಂದರೆಗೆ ಒಳಗಾಗಿದ್ದಾರೆ. ಪಟ್ಟಣದ ಬಹುತೇಕ ಹಣ್ಣು, ತರಕಾರಿ, ಚಿಕ್ಕಪುಟ್ಟ ಹೋಟೆಲ್, ಪಾನ್ ಶಾಪ್, ಮೊಬೈಲ್ ಅಂಗಡಿ, ಟೀ ಸ್ಟಾಲ್ ಮಾಡುವ ಜನ ಲೇವಾದೇವಿ ಮಾಡುವವರ ಹತ್ತಿರ ಸಾಲ ಪಡೆದು ಹೈರಾಣಾಗುತ್ತಿದ್ದಾರೆ.

ನಿತ್ಯ ವ್ಯಾಪಾರ ಮಾಡಿ ಗಳಿಕೆಯಾದ ಹಣ ಬಡ್ಡಿ ಕಟ್ಟುವುದರಲ್ಲಿಯೇ ಸುಸ್ತಾಗಿ ಹೋಗುತ್ತಿದ್ದಾರೆ. ಸುಲಭವಾಗಿ ಹಣ ಸಂಪಾದಿಸಲು ಲೇವಾದೇವಿ ವ್ಯವಹಾರ ಮಾರ್ಗ ಕಂಡುಕೊಳ್ಳುತ್ತಿದ್ದಾರೆ. ಮೈಕ್ರೊ ಫೈನಾನ್ಸ್‌ನವರು ಮಹಿಳೆಯರಿಗೆ, ಖಾಸಗಿ ಲೇವಾದೇವಿ ಮಾಡುವವರು ವ್ಯಾಪಾರಿಗಳಿಗೆ ಸಾಲ ನೀಡುತ್ತಾರೆ. ಇಂತಹವರ ಮೇಲೆ ಜಿಲ್ಲಾಡಳಿತವಾಗಲಿ, ಪೊಲೀಸ್ ಇಲಾಖೆಯಾಗಲಿ ಯಾವುದೇ ಕ್ರಮ ಕೈಗೊಳ್ಳದೇ ಇರುವುದಕ್ಕೆ ಜನ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

# ಸಿದ್ಧಾರೂಢ ಮಠದಲ್ಲಿ ಮಹಾ ಶಿವರಾತ್ರಿ ನಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 24 : ನಗರದ ಸಿದ್ಧಾರೂಢ ಮಠದಲ್ಲಿ ಡಾ. ಶಿವಕುಮಾರ ಸ್ವಾಮೀಜಿ ಸಾನಿಧ್ಯದಲ್ಲಿ ಫೆ. 26 ರಂದು ಮಹಾಶಿವರಾತ್ರಿ ನಿಮಿತ್ತ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಂಜೆ 6ಕ್ಕೆ ಸಾಮೂಹಿಕ ಇಷ್ಟಲಿಂಗ ಪೂಜೆ, ಸಂಜೆ 7ಕ್ಕೆ 12 ಜ್ಯೋತಿರ್ಲಿಂಗಗಳ ಅಭಿಷೇಕ, ರಾತ್ರಿ 9ಕ್ಕೆ ಭಜನೆ ಹಾಗೂ ರಾತ್ರಿ 10ಕ್ಕೆ ಶ್ರೀಗಳ ಪ್ರವಚನ ನಡೆಯಲಿದೆ.

ಮಠದ ಭಕ್ತರು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮಠದ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಕೋರಿದ್ದಾರೆ.

# ಗ್ಯಾರಂಟಿ ಯೋಜನೆಗಳ ಜನ ಸಾಮಾನ್ಯರಿಗೆ ತಲುಪುವಂತೆ ಮಾಡಿ: ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.24:ಗ್ಯಾರಂಟಿ ಯೋಜನೆಗಳ ಜನಸಾಮಾನ್ಯರಿಗೆ ತಲುಪುವಂತೆ ಮಾಡಿ, ಇದರ ಲಾಭ ಇನ್ನು ಯಾರಿಗೆ ಸಿಕ್ಕಿಲ್ಲವೋ ಅಂತಹ ಎಲ್ಲಾ ಜನರಿಗೆ ತಲುಪಿಸುವ ಕೆಲಸ ಗ್ಯಾರಂಟಿ ಯೋಜನೆಗಳ ತಾಲೂಕು ಅನುಷ್ಠಾನ ಸಮಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಮಾಡಬೇಕೆಂದು ಬೀದರ ಲೋಕಸಭಾ ಸದಸ್ಯರಾದ ಸಾಗರ ಖಂಡ್ರೆ ಅವರು ಹೇಳಿದರು.

ಕಮಲನಗರ ತಾಲೂಕು ಪಂಚಾಯತ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರ ಕಛೇರಿಯನ್ನು ಸನ್ಮಾನ್ಯ ಶ್ರೀಯುತ ಸಾಗರ ಈಶ್ವರ ಖಂಡ್ರೆ ಲೋಕಸಭಾ ಸದಸ್ಯರು ಬೀದರ ರವರು ಉದ್ಘಾಟಿಸಿ ಸಭೆಯನ್ನುದ್ದೇಶಿಸಿ ಮಾತನಾಡಿದರು.

ನಮ್ಮ ರಾಜ್ಯ ಸರ್ಕಾರವು ಜನಸಾಮಾನ್ಯರಿಗೊಸ್ಕರ ಮತ್ತು ಬಡವರ ಏಳಿಗೆಗಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಘೋಷಿಸಲಾಗಿದ್ದು, ಜನಸಾಮಾನ್ಯರು ಅದರ ಸದುಪಯೋಗ ಪಡೆದುಕೊಳ್ಳಿ ಎಂದು ಸಲಹೆ ನೀಡಿದರು.

ಗ್ಯಾರಂಟಿ ಯೋಜನೆಯ ಅಧ್ಯಕ್ಷರು ಹಾಗೂ ಸದಸ್ಯರು ತಪ್ಪದೇ ಪ್ರತಿ ತಿಂಗಳು ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಲು ಸೂಚಿಸಿದರು. ಏನಾದ್ರು ಕುಂದು ಕೊರತೆಗಳು ಕಂಡು ಬಂದಲ್ಲಿ ಸಂಸದರು ತಮ್ಮನ್ನು ಸಂಪರ್ಕಿಸಲು ತಿಳಿಸಿದರು.

ಪಂಚಗ್ಯಾರಂಟಿ ಯೋಜನೆಗಳ ತಾಲೂಕು ಅಧ್ಯಕ್ಷರಾದ ಶ್ರೀ ಆನಂದ ಚವ್ಹಾಣ ರವರು ಸರ್ಕಾರದ ಉತ್ತಮ ಕಾರ್ಯಗಳ ಬಗ್ಗೆ ಮೆಚ್ಚುಗೆಯನ್ನು ವ್ಯಕ್ತಪಡಿಸಿ, ಮಾನ್ಯ ಸಂಸದರು ಜನಸಾಮಾನ್ಯರಲ್ಲಿ ಬೆರೆತು ಜನಸಾಮಾನ್ಯನಾಗಿ ಕಾರ್ಯವನ್ನು ನಿರ್ವಹಿಸುತ್ತಿದ್ದಾರೆ. ಯುವ ಸಂಸದರಾಗಿ ಜನಸಾಮಾನ್ಯರಿಗೋಸ್ಕರ ಮಾಡುತ್ತಿರುವ ಕಾರ್ಯಗಳ ಬಗ್ಗೆ ಶ್ಲಾಘಿಸಿದರು.

ಪ್ರಾಸ್ತಾವಿಕ ನುಡಿಯನ್ನು ಮಾಣಿಕರಾವ ಪಾಟೀಲ ಕಾರ್ಯನಿರ್ವಾಹಕ ಅಧಿಕಾರಿ ನುಡಿದರು, ಐದು ಗ್ಯಾರಂಟಿ ಯೋಜನೆಗಳನ್ನು ಜನರಿಗೆ ತಲುಪಿಸುವಸಲುವಾಗಿ ಸಮಿತಿಗಳನ್ನು ರಚಿಸಲಾಗಿದೆ ಇದರಿಂದ ಜನರಿಗೆ ಅನೂಕೂಲವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಭಾಲ್ಕಿ ತಾಲೂಕಾಧ್ಯಕ್ಷರಾದ ಶ್ರೀ ಹಣಮಂತರಾವ ಚವ್ಹಾಣ, ಗ್ಯಾರಂಟಿ ಯೋಜನೆಗಳ ಕಮಲನಗರ ತಾಲೂಕು ಅಧ್ಯಕ್ಷರಾದ ಶ್ರೀ ಆನಂದ ಚವ್ಹಾಣ, ಉಪಾಧ್ಯಕ್ಷರಾದ ಶ್ರೀ ಸಂತೋಷ ಬಿರದಾರ, ಸದಸ್ಯರು, ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ಸಹಾಯಕ ನಿರ್ದೇಶಕರಾದ ಹಣಂಮತರಾವ ಕೌಟಗೆ ಕಾರ್ಯಕ್ರಮ ನಿರೂಪಣೆ ಮಾಡಿದರು. ಗ್ರಾ.ಪಂ. ಅಧ್ಯಕ್ಷರು, ಶಿಶು ಅಭಿವೃದ್ಧಿ ಅಧಿಕಾರಿಗಳಾದ ಇಮಲಪ್ಪಾ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳು, ಜೆಸ್ಕಾಂ ಅಧಿಕಾರಿ, ಸಾರಿಗೆ ಇಲಾಖೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ಮತ್ತು ತಾ.ಪಂ. ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮಹಾರಾಷ್ಟ್ರ ಗಡಿವರೆಗೆ ಮಾತ್ರ ಬಸ್ಸುಗಳ ಓಡಾಟ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.24– ಮಹಾರಾಷ್ಟ್ರದ ಸೋಲಾಪುರದಲ್ಲಿ ರಾಜ್ಯದ ಬಸ್‌ಗಳ ಮೇಲೆ ಗೂಂಡಾಗಳು ಪುಂಡಾಟಿಕೆ ನಡೆಸಿ ಮಸಿ ಬಳೆದಿರುವ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆಯಿಂದ ಮಹಾರಾಷ್ಟ್ರಕ್ಕೆ ತೆರಳುವ ಬಸ್‌ಗಳು ಗಡಿವರೆಗೆ ಮಾತ್ರ ಸಂಚರಿಸಲಿವೆ ಎಂದು ಬಾಗಲಕೋಟೆ ವಿಭಾಗೀಯ ಸಾರಿಗೆ ಅಧಿಕಾರಿ ಕೆ.ಕೆ.ಲಮಾಣಿ ತಿಳಿಸಿದ್ದಾರೆ.

ಸೋಲಾಪುರದಲ್ಲಿ ಸೋಮವಾರ ಬೆಳಿಗ್ಗೆ ಜಿಲ್ಲೆಯ ಎರಡು ಬಸ್‌ಗಳ ಮೇಲೆ ಶಿವಸೇನೆ ಕಾರ್ಯಕರ್ತರು ಕೇಸರಿ ಬಣ್ಣದಲ್ಲಿ ಜೈ ಮಹಾರಾಷ್ಟ್ರ ಎಂದು ಬರೆದು ಚಾಲಕರು, ನಿರ್ವಾಹಕರಿಂದ ಜೈ ಮಹಾರಾಷ್ಟ್ರ ಎಂದು ಹೇಳಿಸಿರುವ ಹಿನ್ನೆಲೆಯಲ್ಲಿ ಮಹಾರಾಷ್ಟ್ರ ಗಡಿಯವರೆಗೆ ಮಾತ್ರವೇ ಬಸ್ ಓಡಿಸಲಾಗುವುದು ಎಂದು ಹೇಳಿದ್ದಾರೆ.

ಬಸ್ ಬೋರ್ಡಿಗೆ ಮಸಿ ಬಳೆದಿದ್ದಾರೆ. ಆದರೆ ಯಾವುದೇ ಹಾನಿಯಾಗಿಲ್ಲ. ಮುಂಜಾಗ್ರತಾ ಕ್ರಮವಾಗಿ ಕೋಲಾಪುರ, ಸೋಲಾಪುರ ಹಾಗೂ ಪುಣೆ ಮಾರ್ಗದ ಬಸ್‌ಗಳನ್ನು ಗಡಿಯವರೆಗೆ ಮಾತ್ರ ಬಿಡಲಾಗುವುದು. ಜಿಲ್ಲೆಯಿಂದ ಪ್ರತಿದಿನ ಮಹಾರಾಷ್ಟ್ರಕ್ಕೆ 81 ಬಸ್‌ಗಳು ಸಂಚರಿಸುತ್ತಿದ್ದು, ಈ ಪೈಕಿ ಮೀರಜ ಮಾರ್ಗದ 40 ಸೇವೆ ಹೊರತುಪಡಿಸಿ 41 ಬಸ್‌ಗಳ ಸೇವೆಯನ್ನು ಸ್ಥಗಿತಗೊಳಿಸಲಾಗಿದೆ. ಬಸ್ ತೆರಳಿದರೂ ಗಡಿಯವರೆಗೆ ಮಾತ್ರವೇ ಸಂಚರಿಸಲಿವೆ ಎಂದು ಲಮಾಣಿ ತಿಳಿಸಿದ್ದಾರೆ.

ಇಳಕಲ್ ಬಸ್ಸಿಗೆ ಮಸಿ ಬಳೆದ ಪ್ರಕರಣದ ಕುರಿತು ಕೇಂದ್ರ ಕಚೇರಿಗೆ ಮಾಹಿತಿ ನೀಡಲಾಗಿದೆ. ಪರಿಸ್ಥಿತಿ ತಿಳಿಗೊಳ್ಳುವವರೆಗೂ ಕೋಲಾಪುರ, ಸೋಲಾಪುರ ಹಾಗೂ ಪುಣೆ ಮಾರ್ಗದ ಬಸ್‌ಗಳ ಸಂಚಾರ ಇರುವುದಿಲ್ಲ ಎಂದು ಅವರು ಹೇಳಿದ್ದಾರೆ.

# ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಪ್ರಮುಖ: ಚಕ್ರವರ್ತಿ ಸೂಲಿಬೆಲೆ



ಬೀದರ : ಫೆ.24: ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯ. ಹಾಗೂ ಸೈನಿಕ ಶಾಲೆ, ನ್ಯಾಷನಲ್ ಆಂಗ್ಲ ಮಾಧ್ಯಮ ಶಾಲೆ, ಬಿ.ವಿ.ಬಿ. ಪದವಿ ಪೂರ್ವ ಮಹಾವಿದ್ಯಾಲಯ ಮತ್ತು ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯ ಹಾಗೂ ಸಮರ್ಥ ಸೇವಾ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಹಾಗೂ ಸಂವಾದ ಕಾರ್ಯಕ್ರಮವನ್ನು ಯು.ಕೆ. ಪಾರ್ಲಿಮೆಂಟಿನ ಭಾರತದ ಪ್ರತಿನಿಧಿ ಲಂಡನ ಯುವ ಕೌನ್ಸಿಲ್‌ದ ಪ್ರತಿನಿಧಿಯಾದ ಶ್ರೀ ಆದೀಶ್‌ವಾಲಿ ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವುದರ ಮುಖಾಂತರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಭಾರತ ಯುವರಾಷ್ಟ್ರವಾಗಿದೆ ಭಾರತದ ಯುವಕರು ವಿಶ್ವದ ನಾನಾ ರಾಷ್ಟ್ರಗಳಲ್ಲಿ ಉನ್ನತ ಹುದ್ದೆಗಳನ್ನು ಪಡೆದುಕೊಂಡು ಭಾರತದ ಕೀರ್ತಿಯನ್ನು ಆಕಾಶದೆತ್ತರಕ್ಕೆ ಕೊಂಡೊಯಿದಿದ್ದಾರೆ ಮಹಾವಿದ್ಯಾಲಯದ ಪ್ರತಿಯೊಬ್ಬ ವಿದ್ಯಾರ್ಥಿ ತಾನು ತನಗಾಗಿ ಅಲ್ಲ ರಾಷ್ಟ್ರಕ್ಕಾಗಿ ಅಳಿಲು ಸೇವೆಯಾದರು ಮಾಡಬೇಕೆಂದು ಹೇಳಿದರು. ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ಯುವ ಬರಹಗಾರ, ಅಂಕಣ–ಕಾರ, ಯುವ ಬ್ರೀಗೇಡ್‌ನ್ ಸ್ಥಾಪಕರಾದ ಶ್ರೀ ಚಕ್ರವರ್ತಿ ಸೂಲಿಬೆಲೆ ಮಾತನಾಡುತ್ತಾ ಇಂದಿನ ವಿದ್ಯಾರ್ಥಿಗಳು ಮದನಲಾಲ್ ದಿಂಗ್ರಾ, ಇವರ ಹಾಗೂ ಭಾರತದ ಸ್ವಾತಂತ್ರ್ಯ ಹೋರಾಟಕ್ಕಾಗಿ ಪ್ರಾಣತೆತ್ತ ಭಗತಸಿಂಗ್, ರಾಜಗುರು ಸುಖದೇವ ಇಂತಹ ವೀರಶೂರರ ಹಾಗೂ ಛತ್ರಪತಿ ಶಿವಾಜಿ ಮಹಾರಾಜರ ಬಾಲಾಜಿ ಬಾಜೀರಾಯರ ರಾಷ್ಟ್ರದ ಸ್ವಾತಂತ್ರ್ಯಕ್ಕಾಗಿ ಬ್ರೀಟಿಷ್‌ರ ವಿರುದ್ಧ ಹಾಗೂ ಮೊಘಲರ ವಿರುದ್ಧ ಹೋರಾಡಿದ ಇಂತಹ ವ್ಯಕ್ತಿಗಳನ್ನು ನೀವುಗಳಾದ ವಿದ್ಯಾರ್ಥಿಗಳು ಆದರ್ಶ ನಾಯಕರಾಗಿ ಸ್ವೀಕರಿಸಬೇಕು ಇವರಂತೆ ಇಂದಿನ ಶಿಕ್ಷಕರು ತಮ್ಮ ಮಕ್ಕಳಿಗೆ ಪ್ರತಿನಿತ್ಯ ನೈತಿಕ ಪಾಠವನ್ನು ಹಾಗೂ ರಾಷ್ಟ್ರದ ಏಳಿಗೆಯ ಬಗ್ಗೆ ಹಗಲಿರುಳು ಶ್ರಮಿಸಿದ ಮಹಾನ ಘನತೆ ವೆತ್ತ ಧೀಮಂತ ಆದರ್ಶವನ್ನು ಇಟ್ಟುಕೊಂಡು ಜೀವನ ಸಾಗಿಸಬೇಕೆಂದು ವಿದ್ಯಾರ್ಥಿಗಳಿಗೆ ಕರೆಕೊಟ್ಟರು. ಕಾರ್ಯಕ್ರಮವನ್ನು ಘನ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಇಂದಿನ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಗಮನ ಹರಿಸಬೇಕು ಮೊಬೈಲ್ ಗೀಳಿಗೆ ಹೋಗದೆ ಸದಾ ಗ್ರಂಥಗಳ ಅಧ್ಯಯನ ಮಹಾನ ದೇಶಭಕ್ತರ ಆದರ್ಶವನ್ನು ಇಟ್ಟುಕೊಂಡು ತಾವು ಜೀವನ ಸಾಗಿಸಿ ತಮ್ಮ ಪಾಲಕರ ಹಾಗೂ ಮಹಾವಿದ್ಯಾಲಯದ ಗುರುಗಳ ನಾವು ಜನ್ಮ ಪಡೆದ ಭೂತಾಯಿಯ ಋಣವನ್ನು ದೇಶ ಸೇವೆ ಮುಖಾಂತರ ಸಲ್ಲಿಸಿದಾಗ ಮಾತ್ರ ನಮ್ಮ ದೇಶ ವಿಶ್ವದ ದಿಗ್ಗಜ ರಾಷ್ಟ್ರಗಳ ಸಾಲಿಗೆ ಸೇರಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಆರಂಭದಲ್ಲಿ ಜಿಲ್ಲಾ ಕ.ಸಾ.ಪ. ಅಧ್ಯಕ್ಷರಾದ ಶ್ರೀ ಸುರೇಶ ಚೆನ್ನಶೆಟ್ಟಿಯವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ದೀಪಾ ರಾಗ ಉಪಸ್ಥಿತರಿದ್ದರು.

ಕಾರ್ಯಕ್ರಮದ ವೇದಿಕೆಯ ಮೇಲೆ ನ್ಯಾಷನಲ್ ಆಂಗ್ಲ ಮಾಧ್ಯಮ ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಶ್ರೀಲತಾ, ಅರುಣೋದಯ ಶಾಲೆಯ ಕಾರ್ಯದರ್ಶಿಗಳಾದ ಶ್ರೀ ರಾಜಕುಮಾರ ಮಣಗೀರೆ, ಯುವ ಬ್ರಿಗೇಡ್‌ನ ಶ್ರೀ ವೀರೇಶ ಸ್ವಾಮಿ ಉಪಸ್ಥಿತರಿದ್ದರು.

ಕಾರ್ಯಕ್ರಮ ಮೊದಲಿಗೆ ಸೈನಿಕ ಶಾಲೆ ವಿದ್ಯಾರ್ಥಿಗಳಿಂದ ಪ್ರಾರ್ಥನೆಗೀತೆ ಹಾಡಲಾಯಿತು ಸ್ವಾಗತವನ್ನು ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಸೂರ್ಯವಂಶಿ ಪೂಜಾ ನಡೆಸಿಕೊಟ್ಟರೆ ಕಾರ್ಯಕ್ರಮವನ್ನು ಶ್ರೀ ಬಸವರಾಜ ಬಿರಾದಾರ ನಿರೂಪಿಸಿದರೆ, ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯಾ ವಂದಿಸಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು, ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯದ ಸೈನಿಕ ಶಾಲೆಯ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಪ್ರಾಧ್ಯಾಪಕರು, ಸಿಬ್ಬಂದಿಕ ವರ್ಗದವರು ಹಾಜರಿದ್ದರು.

# ಬೈಕ್ ಅಪಘಾತ ಓರ್ವ ಸಾವು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.24:ಕುಕನೂರು ಪಟ್ಟಣದ ನವೋದಯ ವಿದ್ಯಾಲಯದ ಹತ್ತಿರದ ರಸ್ತೆಯಲ್ಲಿ ಬೈಕ್ ಅಪಘಾತ ಸಂಭವಿಸಿ ಸ್ಥಳದಲ್ಲಿಯೇ ಓರ್ವ ಯುವಕ ಸಾವನಪ್ಪಿರುವ ಘಟನೆ ನೆಡೆದಿದೆ. ಇಂದು (ರವಿವಾರ) 12 ಗಂಟೆ ಸುಮಾರಿಗೆ ಕುಕನೂರು ಪಟ್ಟಣದಿಂದ ಗುದ್ನೇಪ್ಪನಮಠದ ಕಡೆಗೆ ಹೋಗುತ್ತಿರುವ ಬೈಕ್ ಸವಾರನ ನಿಯಂತ್ರಣ ತಪ್ಪಿದ್ದರಿಂದ, ಅಪಘಾತ ಸಂಬವಿಸಿ ಹಿಂಬದಿ ಸವಾರ ಕಕ್ಕಿಹಳ್ಳಿ ಗ್ರಾಮದ ಶರಣಯ್ಯ ವೀರಭದ್ರಯ್ಯ ಮಾಟರಂಗಿ (26) ಎಂಬ ಯುವಕ ಸ್ಥಳದಲ್ಲಿಯೇ ಮೃತಪಟ್ಟ ಘಟನೆ ನೆಡೆದಿದೆ. ಬೈಕ್ ಸಾವರನಿಗೆ ಸಣ್ಣಪುಟ್ಟ ಗಾಯಗಳಾಗಿದ್ದು ಅಪಾಯದಿಂದ ಪಾರಾಗಿದ್ದಾನೆ.

ಈ ಕುರಿತು ಕುಕನೂರು ಪೋಲಿಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ತಿಳಿದು ಬಂದಿದೆ.

# ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರ ತಲುಪಲು 15 ನಿಮಿಷ ಲೇಟ್ ಆಗಿ ಬಂದ ಮೋದಿ

ಭೋಪಾಲ್:ಫೆ.24:ಸೋಮವಾರ (ಫೆ.24) ಭೋಪಾಲ್‌ನಲ್ಲಿ ಆರಂಭವಾದ ಇನ್ವೆಸ್ಟ್ ಮಧ್ಯಪ್ರದೇಶ ಜಾಗತಿಕ ಹೂಡಿಕೆದಾರರ ಶೃಂಗಸಭೆಯನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದ್ದಾರೆ. ಈ ಕಾರ್ಯಕ್ರಮಕ್ಕೆ ಅವರು ಸುಮಾರು 15 ನಿಮಿಷ ತಡವಾಗಿ ಆಗಮಿಸಿದ್ದಾರೆ. ಈ ವಿಚಾರವನ್ನು ತಮ್ಮ ಭಾಷಣದಲ್ಲಿ ಪ್ರಸ್ತಾಪಿಸಿ, ಇಲ್ಲಿಗೆ ಬರಲು ತಡವಾಗಿದ್ದಕ್ಕಾಗಿ ನಿಮ್ಮೆಲ್ಲರಲ್ಲೂ ನಾನು ಕ್ಷಮೆಯಾಚಿಸುತ್ತೇನೆ. ನಾನು ಇಲ್ಲಿಗೆ ತಲುಪಿದಾಗ, ಇಂದು 10 ಮತ್ತು 12 ನೇ ತರಗತಿಯ ವಿದ್ಯಾರ್ಥಿಗಳಿಗೆ ಪರೀಕ್ಷೆಗಳಿವೆ ಎಂಬ ವಿಷಯ ನನ್ನ ಗಮನಕ್ಕೆ ಬಂದಿತ್ತು. ಆ ಸಮಯದಲ್ಲಿ ನಾನು ಹೊರಟರೆ ಭದ್ರತಾ ಕಾರಣಗಳಿಗಾಗಿ ರಸ್ತೆಗಳನ್ನು ಮುಚ್ಚಬಹುದು ಮತ್ತು ಮಕ್ಕಳು ಪರೀಕ್ಷೆಗಳಿಗೆ ಹೋಗಲು ತೊಂದರೆಯಾಗುತ್ತದೆ ಅದಕ್ಕೆ ನನ್ನ ವೇಳಾಪಟ್ಟಿಯನ್ನು ಬದಲಾಯಿಸಿಕೊಂಡೆ ಎಂದಿದ್ದಾರೆ. ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗಬಾರದು ಮತ್ತು ಅವರು ತಮ್ಮ ಪರೀಕ್ಷಾ ಕೇಂದ್ರವನ್ನು ಸಮಯಕ್ಕೆ ಸರಿಯಾಗಿ ತಲುಪಬೇಕು. ಅದಕ್ಕಾಗಿಯೇ ನಾನು 10 ರಿಂದ 15 ನಿಮಿಷಗಳ ಕಾಲ ವಿಳಂಬ ಮಾಡಿದೆ ಎಂದು ಸ್ಪಷ್ಟಪಡಿಸಿದ್ದಾರೆ.

# ಗಾಯಾಳುಗಳ ಆರೋಗ್ಯ ವಿಚಾರಿಸಿದ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಫೆ.24: ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಇಂದು ಬ್ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಬೀದರನ ಲಾಡಗೇರಿ ನಿವಾಸಿಗಳು ಪ್ರಯಾಗರಾ–ಜಿಗೆ ಪ್ರಯಾಣಿಸುತ್ತಿರುವ ಸಂದರ್ಭದಲ್ಲಿ (ಫೆ.21) ಮಿರ್ಜಾಮುರಾದ್ ಹತ್ತಿರ ಲಾರಿ ಮತ್ತು ಕ್ರೂಸರ್ ಮಧ್ಯದಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ಗಾಯಗೊಂಡ 07 ಜನ ಗಾಯಾಳುಗಳನ್ನು ಭೇಟಿ ಮಾಡಿ ಅವರ ಆರೋಗ್ಯ ವಿಚಾರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ ಗುಂಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಧ್ಯಾನೇಶ್ವರ ನಿರಗುಡೆ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಉಜ್ಜಯಿನ್: ಶಿವನ 12 ಜ್ಯೋತಿರ್ಲಿಂಗಗಳಲ್ಲಿ ಮೂರನೇಯ ಜ್ಯೋತಿರ್ಲಿಂಗ ಮಧ್ಯಪ್ರದೇಶ ರಾಜ್ಯದ ಉಜ್ಜಯಿನ್ ನಗರದಲ್ಲಿರುವ ಇತಿಹಾಸಿಕ ಪ್ರಸಿದ್ಧವಾದ ಮಹಾಕಾಳೇಶ್ವರನ ದರ್ಶನವನ್ನು ಭಾನುವಾರ ಬೀದರ್ ಜಿಲ್ಲೆಯ ಚಿಟಗುಪ್ಪ ಪಟ್ಟಣದ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಅಶೋಕ ಸ್ವಾಮಿ ಫಾತ್ಮಪುರ್ ಅವರ ನೇತೃತ್ವದಲ್ಲಿ ಫಾತ್ಮಪುರ್ ಬಡಾವಣೆಯ ನಿವಾಸಿಗಳಾದ ವೆಂಕಟ ಪೂಜಾರಿ, ರಾಜಕುಮರ ಆರ್. ಹಡಪದ, ಧರ್ಮರೆಡ್ಡಿ ಚಿಂಚೋಳಿ, ನರೇಂದ್ರ–ರೆಡ್ಡಿ ರಾಂಪುರ, ಜಗನಾಥ ಗೋಣಗಿ, ಶಕೀಲ್ ಅಲ್ಲೂರ್, ಸೂರ್ಯಕಾಂತ ಸಂಗೋಳಗಿ ಇವರುಗಳು ಉಜ್ಜಯಿನ್ ಮಹಾಕಾಳೇಶ್ವರನ ದರ್ಶನ ಪಡೆದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.